ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 167
17–12–2025 ಬುಧವಾರ9

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 167

## ನಬಾರ್ಡ್ ನಿಂದ 2.185 ಕೋಟಿ ನೆರವು ಕಡಿತ: ಸಿಎಂ ಸಿದ್ದು ಆಕ್ರೋಶ

**ಬೆಂಗಳೂರು :** 2024–25ನೇ ಸಾಲಿಗೆ ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ನಿಂದ ಕರ್ನಾಟಕಕ್ಕೆ ಕಡಿಮೆ ಬಡ್ಡಿ ದರದಲ್ಲಿ 2.185 ಕೋಟಿ ರೂ. ನೆರವು ಕಡಿತವಾಗಿದ್ದು, ಇದು ರಾಜ್ಯದ ಕೃಷಿ ಸಾಲ ವ್ಯವಸ್ಥೆಗೆ ಹೊಡೆತ ನೀಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಹಿರಂಗಪಡಿಸಿದ್ದಾರೆ. ಕೇಂದ್ರ ಬೆಂಬಲಿತ ನಬಾರ್ಡ್‌ನಿಂದ ರಾಜ್ಯವು ?5.600 ಕೋಟಿ ಪಡೆಯಲು ಅರ್ಹವಾಗಿದ್ದರೂ, ಇಲ್ಲಿಯವರೆಗೆ ಕೇವಲ ?3.415 ಕೋಟಿ ಮಾತ್ರ ಬಿಡುಗಡೆಯಾಗಿದೆ ಎಂದು ಅವರು ವಿಧಾನಸಭೆಗೆ ತಿಳಿಸಿದರು. ಮಂಗಳವಾರ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಕುಣಿಗಲ್ ಶಾಸಕ ಡಾ.ಎಚ್.ಡಿ. ರಂಗನಾಥ್ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ, ಹಣಕಾಸಿನ ಕೊರತೆಯು ಹಲವಾರು ವಿಧಾನಸಭಾ ಕ್ಷೇತ್ರಗಳಲ್ಲಿ ಪ್ರಾಥಮಿಕ ಕೃಷಿ ಸಾಲ ಸಹಕಾರಿ ಸಂಘಗಳ ಮೂಲಕ ಸಬ್ಸಿಡಿ ಕೃಷಿ ಸಾಲಗಳ ವಿತರಣೆಯ ಮೇಲೆ ತೀವ್ರ ಪರಿಣಾಮ ಬೀರಿದೆ ಎಂದು ಹೇಳಿದರು.

## ಬಿಸಿಯೂಟದಲ್ಲಿ ಹುಳುಗಳು ಪತ್ತೆ: ಅಡುಗೆಯವರು, ಸಿಬ್ಬಂದಿ ಅಮಾನತು

**ಬೆಂಗಳೂರು :** ಕೊಪ್ಪಳದ ಬಿಸರಹಳ್ಳಿಯ ನೃಪತುಂಗ ಪ್ರೌಢ ಶಾಲೆ ಮತ್ತು ಹೊಸಲಿಂಗಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ನೀಡಲಾದ ಮಧ್ಯಾಹ್ನದ ಬಿಸಿಯೂಟ ಮತ್ತು ಇತರ ಆಹಾರ ಪದಾರ್ಥಗಳಲ್ಲಿ ಹುಳುಗಳು ಹಾಗೂ ನುಶಿ ಪತ್ತೆಯಾಗಿರುವ ಆತಂಕಕಾರಿ ಘಟನೆ ವರದಿಯಾಗಿದೆ. ಮಕ್ಕಳ ಆರೋಗ್ಯದ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಿದ ಶಾಲಾ ಸಿಬ್ಬಂದಿ ಮತ್ತು ಶಿಕ್ಷಣ ಇಲಾಖೆಯ ವಿರುದ್ಧ ಸ್ಥಳೀಯ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು.

ಈ ಘಟನೆ ಬೆನ್ನಲ್ಲೆ ಜಿಲ್ಲಾಧಿಕಾರಿ ಸುರೇಶ್ ಇಟ್ನಾಲ್ ಇಂದು ಶಾಲೆಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಘಟನೆಗೆ ನಿರ್ಲಕ್ಷ್ಯವೇ ಕಾರಣ ಎಂದು ಆರೋಪಿಸಿ ಜಿಲ್ಲಾಡಳಿತ ಬಿಸಿಯೂಟ ತಯಾರಿಸುವ ಮತ್ತು ಅಧೀನ ಸಿಬ್ಬಂದಿಯನ್ನು ತಕ್ಷಣವೇ ಅವರ ಹುದ್ದೆಗಳಿಂದ ಅಮಾನತುಗೊಳಿಸಿದ್ದು ಪರ್ಯಾಯ ವ್ಯವಸ್ಥೆಗಳನ್ನು ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

## ಶಾಲಾ ವಾರ್ಷಿಕೋತ್ಸವ ಮುಂದೂಡಿಕೆ

**ದಾವಣಗೆರೆ:** ಇದೇ ಡಿ.17ರಂದು ನಡೆಯಬೇಕಿದ್ದ ಇಲ್ಲಿನ ವಿನೋಬನಗರದ ಸೇಂಟ್ ಮೇರಿಸ್ ಕಾನ್ವೆಂಟ್ ಶಾಲೆಯ ವಾರ್ಷಿಕೋತ್ಸವವನ್ನು ಶಾಸಕ ಶಾಮನೂರು ಶಿವಶಂಕರಪ್ಪ ನಿಧನರಾಗಿರುವ ಹಿನ್ನೆಲೆಯಲ್ಲಿ ಡಿ.19ಕ್ಕೆ ಮುಂದೂಡಲಾಗಿದೆ ಎಂದು ಶಾಲಾ ಆಡಳಿತ ಮಂಡಳಿ ತಿಳಿಸಿದೆ.

# ವಿಧಾನ ಸಭಾ ಕಲಾಪದಲ್ಲಿ ಹೈಕಮಾಂಡ್ ಹೇಳುವ ತನಕವೂ ನಾನೇ ಮುಖ್ಯಮಂತ್ರಿ : ಸಿದ್ದರಾಮಯ್ಯ

**ಬೆಳಗಾವಿ:** 2023ರಂತೆ 2028ರಲ್ಲಿಯೂ ಜನಾಶೀರ್ವಾದದೊಂದಿಗೆ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರಲಿದ್ದು, ಬಿಜೆಪಿಯವರು ಸದಾ ವಿರೋಧಪಕ್ಷದ ಸ್ಥಾನದಲ್ಲಿಯೇ ಇರಲಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬೆಳಗಾವಿ ಸುವರ್ಣಸೌಧದಲ್ಲಿ ವಿಧಾನಸಭಾ ಕಲಾಪದಲ್ಲಿ ವಿರೋಧಪಕ್ಷದವರ ಪ್ರಶ್ನೆಗೆ ಉತ್ತರಿಸುತ್ತಾ ಮಾತನಾಡಿದ ಅವರು, ಗಾದೆ ಮಾತಿನಂತೆ ಉರಿಯುವುದರ ಮೇಲೆ ಉಪ್ಪು ಹಾಕಬಾರದೆಂಬ ಎಂಬ ಗಾದೆ ಮಾತಿದೆ. ವಿರೋಧಪಕ್ಷದವರು ಇರುವುದೇ ಉರಿಯುವುದರ ಮೇಲೆ ಉಪ್ಪು ಸುರಿಯಲು ಎಂದು ಕಿಡಿ–ಕಾರಿದರು.

ವಿರೋಧಪಕ್ಷದವರು ಏನೇ ಪ್ರಚೋದನೆ ಮಾಡಿದರೂ, ನಮ್ಮ ಶಾಸಕರಾರೂ ಪ್ರಚೋದಿತರಾಗುವುದಿಲ್ಲ. ಐದು ವರ್ಷ ನಾನೇ ಮುಖ್ಯಮಂತ್ರಿಯಾಗಿರಬೇಕೆಂದು ಜನರು



ಆಶೀರ್ವಾದ ಮಾಡಿ ಕಳಿಸಿದ್ದಾರೆ. 140 ಶಾಸಕರು ನಮ್ಮೊಂದಿಗಿದ್ದಾರೆ. ವಿರೋಧಪಕ್ಷದವರು ಇದರಲ್ಲಿ ಹುಳಿ ಹಿಂಡುವ ಅಗತ್ಯವಿಲ್ಲ ಎಂದು ಕಿಡಿಕಾರಿದರು.

2023ರಲ್ಲಿ ಜನರು ಆಶೀರ್ವಾದ ಮಾಡಿದಂತೆ 2028ರಲ್ಲಿಯೂ ಕಾಂಗ್ರೆಸ್ ಸರ್ಕಾರವೇ ಆಡಳಿತಕ್ಕೆ ಬರಲಿದೆ. ಜನರ ನಾಡಿಮಿಡಿತ ಸರ್ಕಾರಕ್ಕೆ ತಿಳಿದಿದೆ. ಕರ್ನಾಟಕದ ಜನ ಬಿಜೆಪಿಗೆ ಎಂದಿಗೂ ಅಧಿಕಾರಕ್ಕೆ ತರುವುದಿಲ್ಲ. ಕರ್ನಾಟಕದಲ್ಲಿ ಬಿಜೆಪಿ ಸರ್ಕಾರ ಎರಡು ಬಾರಿ ಅಧಿಕಾರ ನಡೆಸಿದರೂ, ಒಂದು ಬಾರಿಯೂ ಜನರ ಆಶೀರ್ವಾದದಿಂದ ಅಧಿಕಾರಕ್ಕೆ ಬಂದಿಲ್ಲ. 2008, 2018ರಲ್ಲಿ ಆಪರೇಷನ್ ಕಮಲ ಮಾಡಿ, ಹಿಂಬಾಗಿಲಿನಿಂದ ಅಧಿಕಾರಕ್ಕೆ ಬಂದಿದ್ದಾರೆ. ರಾಜ್ಯದ ಜನ ಬಿಜೆಪಿಗೆ ಆಶೀರ್ವಾದ ಮಾಡುವುದಿಲ್ಲ ಎಂಬುದು ಸ್ಪಷ್ಟವಾಗಿದೆ. 2019ರಲ್ಲಿ ಬಿಜೆಪಿ ಅಧಿಕಾರಕ್ಕೆ ಬರಬಾರದೆಂಬ ಉದ್ದೇಶದಿಂದ ಜೆಡಿಎಸ್‌ನೊಂದಿಗೆ ಸರ್ಕಾರ ರಚಿಸಲಾಯಿತು. ಆದರೆ ಬಿಜೆಪಿಯವರು, ಜೆಡಿಎಸ್ ಜತೆ ಮೈತ್ರಿ ಮಾಡಿಕೊಂಡಿರುವ ಉದ್ದೇಶದ ಬಗ್ಗೆ ಪ್ರಶ್ನಿಸಿದರು.

ಕಾಂಗ್ರೆಸ್ ಪಕ್ಷದಲ್ಲಿ ಹೈಕಮಾಂಡ್ ಮಾತು ಅಂತಿಮವಾಗಿರುತ್ತದೆ. ಆದರೆ ಬಿಜೆಪಿಯ ಅಧ್ಯಕ್ಷಗಿರಿ ಆಯ್ಕೆಯಲ್ಲಿ ಒಮ್ಮತ ಸಾಧಿಸಿಲ್ಲ. ಬಿಜೆಪಿಯವರಿಗೆ ಅಸೂಯೆ ಕಾಡುತ್ತಿದೆ. ಐದು ವರ್ಷ ಸುಭದ್ರ ಸರ್ಕಾರ ನೀಡುತ್ತೇವೆ ಹಾಗೂ ಮತ್ತೆ ಚುನಾವಣೆ ಎದುರಿಸಿ 2028 ರಲ್ಲಿಯೂ ಕಾಂಗ್ರೆಸ್ ಸರ್ಕಾರವೇ ಅಧಿಕ್ಆರಕ್ಕೆ ಬರಲಿದೆ. 2013 ರಲ್ಲಿ 2023ರಲ್ಲಿಯೂ ಕಾಂಗ್ರೆಸ್‌ಗೆ ಜನರು ಆಶೀರ್ವಾದ ಮಾಡಿದ್ದಾರೆ, ಆದರೆ ಬಿಜೆಪಿಯವರಿಗೆ ಒಮ್ಮೆಯೂ ಜನಾದೇಶ ದೊರೆತಿಲ್ಲ ಹಾಗೂ ಭವಿಷ್ಯದಲ್ಲಿಯೂ ದೊರೆಯುವುದಿಲ್ಲ. ಬಿಜೆಪಿಯವರು ಸದಾ ವಿರೋಧಪಕ್ಷದ ಸ್ಥಾನದಲ್ಲಿಯೇ ಇರಲಿದೆ. ನಾನು ಹೋದರೆ ಹೋದೇನು ಅಂತ ಕನಕದಾಸರು ಹೇಳಿದ್ದರು.

ಇದು ನನ್ನ ಸರ್ಕಾರವಲ್ಲ, ನಮ್ಮ ಸರ್ಕಾರ?. ಈಗಲೂ ನಾನೇ ಮುಖ್ಯಮಂತ್ರಿ. ಹೈಕಮಾಂಡ್ ಹೇಳುವ ತನಕವೂ ನಾನೇ ಮುಖ್ಯಮಂತ್ರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

## ಹೆಚ್.ಡಿ. ಕುಮಾರಸ್ವಾಮಿ 66ನೇ ಹುಟ್ಟು ಹಬ್ಬಕ್ಕೆ ಪ್ರಧಾನಿ ಮೋದಿಯಿಂದ ಸ್ಪೆಷಲ್ ವಿಶ್; ಭಾವುಕರಾದ ಕೇಂದ್ರ ಸಚಿವ

**ಬೆಂಗಳೂರು:** ಕೇಂದ್ರ ಸಚಿವ ಹಾಗೂ ಜೆಡಿಎಸ್ ನಾಯಕ ಹೆಚ್. ಡಿ ಕುಮಾರಸ್ವಾಮಿಯವರು ಇಂದು 66 ನೇ ವಸಂತಕ್ಕೆ ಕಾಲಿಟ್ಟಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಹೆಚ್‌ಡಿಕೆ ಅವರಿಗೆ ಹುಟ್ಟುಹಬ್ಬದ ಶುಭಾಶಯಗಳನ್ನು ತಿಳಿಸಿದ್ದಾರೆ. ಪ್ರಧಾನಿ ಮೋದಿ ತಮ್ಮ ಎಕ್ಸ್ ಖಾತೆಯಲ್ಲಿ ಕುಮಾರಸ್ವಾಮಿ ಅವರಿಗೆ ಹುಟ್ಟುಹಬ್ಬದ ಶುಭಾಶಯವನ್ನು ತಿಳಿಸಿದರು. ಜನ್ಮದಿನಕ್ಕೆ ಶುಭಾಶಯ ಕೋರಿದ ಪ್ರಧಾನಿ ಮೋದಿ ಅವರಿಗೆ ಹೆಚ್‌ಡಿ ಕುಮಾರಸ್ವಾಮಿ ಧನ್ಯವಾದ ಅರ್ಪಿಸಿದ್ದಾರೆ. ಪ್ರಧಾನಿ ಅವರ ಶುಭಾಶೀರ್ವಾದಿಂದ ಭಾವುಕರಾಗಿರುವುದಾಗಿ ಕೇಂದ್ರ ಸಚಿವ ಹೇಳಿದರು.

ಟ್ವೀಟ್ ಮಾಡಿ ಧನ್ಯವಾದ ತಿಳಿಸಿರುವ ಕುಮಾರಸ್ವಾಮಿ, ನನ್ನ ಹುಟ್ಟುಹಬ್ಬದ ಈ ಸಂದರ್ಭದಲ್ಲಿ ಗೌರವಾನ್ವಿತ ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿ ಅವರ ಶುಭಾಶಯ ಹಾಗೂ ಶುಭಾಶೀರ್ವಾದದಿಂದ ನಾನು ಭಾವುಕನಾಗಿದ್ದೇನೆ ಮತ್ತು ವಿನೀತನಾಗಿದ್ದೇನೆ.



ಅವರ ಪಿತೃವಾತ್ಸಲ್ಯಕ್ಕೆ ನಾನು ಧನ್ಯನಾಗಿದ್ದೇನೆ. ಮಾನ್ಯ ಪ್ರಧಾನಿಗಳ ಚಿಂತನಶೀಲ ಮಾರ್ಗದರ್ಶನ, ಪ್ರೋತ್ಸಾಹ ಮತ್ತು ನನ್ನ ಮೇಲಿನ ನಂಬಿಕೆಗೆ ನಾನು ಚಿರಋಣಿ ಆಗಿದ್ದೇನೆ. ಪ್ರಧಾನಮಂತ್ರಿಗಳ ಶುಭಾಶೀರ್ವಾದ ಮತ್ತು ಸಂದೇಶವು ಸಾರ್ವಜನಿಕ ಸೇವೆಯು ಕೇವಲ ಒಂದು ಜವಾಬ್ದಾರಿಯಲ್ಲ; ಬದಲಿಗೆ ರಾಷ್ಟ್ರ, ಸಮಾಜ ಮತ್ತು ಸಾರ್ವಜನಿಕರ ಕಲ್ಯಾಣಕ್ಕಾಗಿ ಜೀವಮಾನದ ಅನನ್ಯ ಸಮರ್ಪಣೆಯಾಗಿದೆ ಎಂಬುದನ್ನು ನೆನಪಿಸುತ್ತದೆ. ಸಮರ್ಪಣೆ, ಪರಿಶ್ರಮ ಮತ್ತು ನಿಸ್ವಾರ್ಥ ಸೇವೆಯ ಬಗ್ಗೆ ಅವರ ಮೆಚ್ಚುಗೆಯು ನನ್ನನ್ನು ಮತ್ತಷ್ಟು ಉತ್ತೇಜಿಸಿದೆ ಹಾಗೂ ರಾಷ್ಟ್ರಸೇವೆಗೆ ಸಮರ್ಪಿಸಿಕೊಳ್ಳಲು ಪ್ರೇರೇಪಣೆ ನೀಡಿದೆ. ನನ್ನನ್ನು ಹರಸಿ ಆಶೀರ್ವದಿಸಿದ ಮಾನ್ಯ ಪ್ರಧಾನಿಗಳಿಗೆ ಕೃತಜ್ಞನಾಗಿದ್ದೇನೆ. ನನ್ನ ಮೇಲೆ ಅವರು ಇರಿಸಿರುವ ನಂಬಿಕೆಗೆ ನಾನು ಋಣಿಯಾಗಿದ್ದೇನೆ. ಸರ್, ತಮಗೆ ನನ್ನ ಹೃದಯಪೂರ್ವಕ ವಿನಮ್ರ ಧನ್ಯವಾದಗಳು ಎಂದು ಟ್ವೀಟ್‌ನಲ್ಲಿ ತಿಳಿಸಿದ್ದಾರೆ.

ವಿದೇಶ ಪ್ರವಾಸಕ್ಕೆ ತೆರಳುವ ಮುನ್ನ ಸಂಸತ್ ಭವನದ ಕಚೇರಿಯಲ್ಲಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ಆಶೀರ್ವಾದ ಪಡೆದ ಕುಮಾರಸ್ವಾಮಿ ಅವರು ಆಶೀರ್ವಾದ ಪಡೆದುಕೊಂಡಿದ್ದಾರೆ.

ಮಕ್ಕಳಿಗೆ ಭಗವದ್ಗೀತೆ ಕಲಿಸಿ ಅನ್ನೋದು ಮಹಾನ್ ಅಪರಾಧವೇ; ಸಿಎಂ, ಸಚಿವ ಮಹದೇವಪ್ಪಗೆ ಕುಮಾರಸ್ವಾಮಿ ಪ್ರಶ್ನೆ ಹೆಚ್‌ಡಿಕೆ ಜನ್ಮದಿನದ ಅಂಗವಾಗಿ ಜೆಡಿಎಸ್ ಕೂಡ ತನ್ನ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಪೋಸ್ಟ್ ಮಾಡಿದ್ದು, ಹುಟ್ಟುಹಬ್ಬದ ಹಾರ್ದಿಕ ಶುಭಾಶಯಗಳನ್ನು ತಿಳಿಸಿದೆ. "ಕರ್ನಾಟಕದ ಜನಮೆಚ್ಚಿದ ಮಾಜಿ ಮುಖ್ಯಮಂತ್ರಿಗಳು, ಜನತಾದಳ (ಜಾತ್ಯತೀತ) ಪಕ್ಷದ ರಾಜ್ಯಾಧ್ಯಕ್ಷರು ಹಾಗೂ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್‌ಡಿ ಕುಮಾರಸ್ವಾಮಿ ಅವರಿಗೆ ಜನ್ಮದಿನ ಹಾರ್ದಿಕ ಶುಭಾಶಯಗಳು" ಎಂದು ತಿಳಿಸಿದೆ.

## ಭ್ರಷ್ಟ ಅಧಿಕಾರಿಗಳ ಮೇಲೆ ಲೋಕಾಯುಕ್ತ ದಾಳಿ

**ಬೆಂಗಳೂರು:** ಲೋಕಾಯುಕ್ತ ಅಧಿಕಾರಿಗಳು ಇಂದು ಬೆಳ್ಳಂಬೆಳಗ್ಗೆ ಹಲವು ಭ್ರಷ್ಟ ಅಧಿಕಾರಿಗಳಿಗೆ ಶಾಕ್ ನೀಡಿ–ದ್ದಾರೆ. ಶಿವಮೊಗ್ಗ, ಧಾರವಾಡ ಹಾಗೂ ವಿಜಯನಗರ ಸೇರಿದಂತೆ ರಾಜ್ಯದ ಹಲವು ಕಡೆ ಭ್ರಷ್ಟ ಅಧಿಕಾರಿಗಳಿಗೆ ಸೇರಿದ ಮನೆ, ಕಚೇರಿ ಮೇಲೆ ದಾಳಿ ನಡೆಸಿ, ಮಹತ್ವದ ದಾಖಲೆಗಳನ್ನು ವಶಕ್ಕೆ ಪಡೆದಿದ್ದಾರೆ.

ಅಕ್ರಮ ಆಸ್ತಿಗಳಿಕೆ ಆರೋಪದ ಹಿನ್ನೆಲೆಯಲ್ಲಿ ಶಿವಮೊಗ್ಗದ ಬಸವನಗುಡಿ ಪ್ರದೇಶದಲ್ಲಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ರೂಪ್ಲಾ ನಾಯ್ಕ್ ಮನೆ ಮೇಲೆ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಮತ್ತೊಂದೆಡೆ ಬೆಳಗಾವಿ ಕೃಷಿ ಇಲಾಖೆ ಜಂಟಿ ನಿರ್ದೇಶಕರಾಗಿರುವ ರಾಜಶೇಖರ್ ಅವರ ಧಾರವಾಡದಲ್ಲಿರುವ ನಿವಾಸದ ಮೇಲೂ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಇನ್ನು ಲೋಕಾಯುಕ್ತ ಸಿಬ್ಬಂದಿ ಕಂಡು ಬೆದರಿದ ರಾಜಶೇಖರ್ ಸುಮಾರು 50 ಸಾವಿರ ಹಣವನ್ನು ಕಮೋಡ್‌ಗೆ ಸುರಿದು ಫ್ಲಶ್ ಮಾಡಿದ್ದಾರೆ. ವಿಜಯನಗರ ಡಿಎಚ್‌ಒ ಡಾ. ಐಖ ಶಂಕರ್ ನಾಯ್ಕ್ ಮನೆ, ಕಚೇರಿ ಹಾಗೂ ಪತ್ನಿ ನಿರ್ವಹಿಸುತ್ತಿರುವ ಖಾಸಗಿ ಆಸ್ಪತ್ರೆಯ ಮೇಲೆ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ನಡೆಸಿದರು.

# ರಾಜ್ಯದಲ್ಲಿ 'ಹೆಣ್ಣು ಭ್ರೂಣ ಹತ್ಯೆ' ತಡೆಗೆ ಎಲ್ಲಾ ಜಿಲ್ಲೆಗಳಲ್ಲಿ ಪ್ರತ್ಯೇಕ ನೋಡಲ್ ಅಧಿಕಾರಿಗಳ ನೇಮಕ: ದಿನೇಶ್ ಗುಂಡೂರಾವ್

**ಬೆಳಗಾವಿ:** ರಾಜ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆ ನಿಂತಿಲ್ಲ ಎಂಬುದನ್ನು ಒಪ್ಪಿಕೊಂಡಿರುವ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಇದನ್ನು ತಡೆಯಲು ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿದೆ ಎಂದು ಮಂಗಳವಾರ ವಿಧಾನಪರಿಷತ್ತಿನಲ್ಲಿ ಹೇಳಿದ್ದಾರೆ.

ಹೆಣ್ಣು ಭ್ರೂಣ ಹತ್ಯೆ ಸಾಮಾಜಿಕ ಅನಿಷ್ಟ ಎಂದು ಕರೆದ ಸಚಿವರು, ಇದನ್ನು ತಡೆಗಟ್ಟಲು ಸರ್ಕಾರ ಕಠಿಣ ಕ್ರಮ ಕೈಗೊಳ್ಳುತ್ತಿದೆ. ಸರ್ಕಾರ ಎಲ್ಲ ಜಿಲ್ಲೆಗಳಲ್ಲಿ ಪ್ರತ್ಯೇಕ ನೋಡಲ್ ಅಧಿಕಾರಿಗಳನ್ನು ನೇಮಿಸುತ್ತಿದೆ. ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕಾನೂನು ಬಲಪಡಿಸುವಿಕೆಯನ್ನು ಸರ್ಕಾರ ಪರಿಗಣಿಸಲಿದೆ ಎಂದು ಅವರು ಭರವಸೆ ನೀಡಿದರು.

ಬಿಜೆಪಿ ಸದಸ್ಯ ಸಿ.ಟಿ. ರವಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಹೆಣ್ಣು ಭ್ರೂಣ ಹತ್ಯೆ ಖಂಡಿತ ನಿಂತಿಲ್ಲ. ನೀವು ಲಿಂಗ ಅನುಪಾತವನ್ನು ನೋಡಿದರೆ, ಬಹಳಷ್ಟು ವ್ಯತ್ಯಾಸವಿದೆ. ಇದು ನಡೆಯುತ್ತಿದೆ ಎಂದು ನಾನು ಒಪ್ಪಿಕೊಳ್ಳುತ್ತೇನೆ ಎಂದು ರಾವ್ ಹೇಳಿದರು.

ಭ್ರೂಣ ಹತ್ಯೆಗಳು ಒತ್ತಡದಲ್ಲಿ ನಡೆಯುತ್ತಿಲ್ಲ. ಹೆಣ್ಣು ಮಗು ಬೇಡ ಎಂಬ ಕಾರಣಕ್ಕೆ ಸ್ವಯಂಪ್ರೇರಣೆಯಿಂದ ನಡೆಯುತ್ತಿದೆ. ಕೆಲವು ಆಸ್ಪತ್ರೆಗಳಲ್ಲಿ ಲಿಂಗ ಪತ್ತೆ ಆಧಾರದ ಮೇಲೆ ಇಂತಹ ಘಟನೆಗಳು ನಡೆಯುತ್ತಿವೆ. ಇದು ಕಾನೂನುಬಾಹಿರವಾಗಿದ್ದು, ತಂತ್ರಜ್ಞಾನದ ಪ್ರಗತಿಯೊಂದಿಗೆ ಪೋರ್ಟಬಲ್ ಅಲ್ಟ್ರಾಸೌಂಡ್ ಯಂತ್ರಗಳನ್ನು ಅಭಿವೃದ್ಧಿಪಡಿಸಲಾಗಿದೆ.



ಇದನ್ನು ಎಲ್ಲಿ ಬೇಕಾದರೂ ಸುಲಭವಾಗಿ ಸಾಗಿಸಬಹುದು ಪರಿಶೀಲಿಸಬಹುದು. ಇದ–ಕ್ಕೆ ಕಡಿವಾಣ ಹಾಕಬೇಕಾದ ಅಗತ್ಯವಿದೆ. ಇದನ್ನು ಕೇಂದ್ರ ಸರ್ಕಾರದ ಗಮನಕ್ಕೆ ತರುತ್ತೇವೆ ಎಂದರು. ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಮತ್ತು ಕೆಲವು ಆಸ್ಪತ್ರೆಗಳಲ್ಲಿ ಹೆಚ್ಚಿನ ಸಂಖ್ಯೆಯ ಗಂಡು ಮಕ್ಕಳ ಜನನಗಳು ದಾಖಲಾಗುತ್ತಿವೆ ಎಂಬುದು ಗುಪ್ತಚರ ಮಾಹಿತಿಯ ಮೂಲಕ ತಿಳಿದುಬರುತ್ತಿದೆ. ಯಾವ ತಾಲ್ಲೂಕಿನಲ್ಲಿ ಪುರುಷ–ಮಹಿಳೆಯರ ಅನುಪಾತ ಹದಗೆಡುತ್ತಿದೆ, ಯಾವ ಆಸ್ಪತ್ರೆಯಲ್ಲಿ ಏನಾಗುತ್ತಿದೆ ಎಂಬ ಮಾಹಿತಿ ಕಲೆಹಾಕಿ ಸೂಕ್ತ ಪರಿಶೀಲನೆ ನಡೆಸಿ ಇಂತಹ ಜಾಲಕ್ಕೆ ಕಡಿವಾಣ ಹಾಕಲು ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಹೆಣ್ಣು ಭ್ರೂಣ ಹತ್ಯೆಗೆ ಸಂಬಂಧಿಸಿ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾದವರನ್ನು ಗುರುತಿಸಲು ಕಳೆದ ಎರಡು ವರ್ಷಗಳಲ್ಲಿ ಏಳು ಕಡೆ ಡೆಕಾಯ್ ಆಪರೇಷನ್ ಮಾಡಲಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಮತ್ತು ಆಸ್ಪತ್ರೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಆದ್ಯತೆಯ ಮೇಲೆ ಹೆಚ್ಚಿನ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ ಎಂದು ಅವರು ಹೇಳಿದರು.

ಯಾವುದೇ ಕಟ್ಟುನಿಟ್ಟಿನ ಕಾನೂನನ್ನು ತರಲಾಗುತ್ತಿದೆಯೇ ಎಂಬ ರವಿ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ರಾವ್, ಸರ್ಕಾರವು ಕಾನೂನನ್ನು ಬಲಪಡಿಸುವ ಮತ್ತು ಇದನ್ನು ನಿಯಂತ್ರಿಸಲು ಕಟ್ಟುನಿಟ್ಟಾಗಿ ಮಾಡುವ ಬಗ್ಗೆ ಪರಿಗಣಿಸುತ್ತದೆ ಎಂದರು. ಕಳೆದ ಎರಡು ವರ್ಷಗಳಲ್ಲಿ ಅಸ್ತಿತ್ವದಲ್ಲಿರುವ ಕಾನೂನುಗಳಿಗೆ ಕೆಲವು ತಿದ್ದುಪಡಿಗಳನ್ನು ಮಾಡಲಾಗಿದೆ. ಸುಧಾರಿತ ತಂತ್ರಜ್ಞಾನ ಮತ್ತು ಅಂತರ್ಜಾಲವನ್ನು ಇಂತಹ ವಿಚಾರಗಳನ್ನು ಕೈಗೊಳ್ಳಲು ಬಳಸಲಾಗುತ್ತಿದೆ, ಗರ್ಭಪಾತಕ್ಕೆ ಮೌಖಿಕ ಔಷಧಿಗಳು ಕೌಂಟರ್‌ನಲ್ಲಿ ಲಭ್ಯವಿದೆ. ಅವುಗಳ ನಿಯಂತ್ರಣಕ್ಕೆ ಕಾನೂನು ತರಲು ನಾವು ಪರಿಶೀಲಿಸಬೇಕಾಗಿದೆ. ಅಂತಹ ಔಷಧಿಗಳ ಮಾರಾಟವನ್ನು ದಾಖಲಿಸಬೇಕು ಎಂದು ಆಹಾರ ಮತ್ತು ಔಷಧಿ ಆಡಳಿತವು ಫಾರ್ಮಾಸಿಸ್ಟ್‌ಗಳಿಗೆ ಸೂಚನೆಗಳನ್ನು ನೀಡಿದೆ. ಗರ್ಭಧಾರಣೆಯ ಪೂರ್ವ ಮತ್ತು ಪ್ರಸವಪೂರ್ವ ರೋಗನಿರ್ಣಯ ತಂತ್ರಗಳ (ಪಿಸಿ ಮತ್ತು ಪಿಎನ್‌ಡಿಟಿ) ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ಮತ್ತು ಹೆಣ್ಣು ಭ್ರೂಣಗಳನ್ನು ಗುರುತಿಸುವುದು ಮತ್ತು ಹೆಣ್ಣು ಭ್ರೂಣ ಹತ್ಯೆಯ ವಿರುದ್ಧ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಸಚಿವರು ಹೇಳಿದರು.

## ಇಂದಿನಿಂದ ಅಂತರಾಷ್ಟ್ರೀಯ ಮಾಹಿತಿ ವಿಜ್ಞಾನ ಸಮ್ಮೇಳನ

**ದಾವಣಗೆರೆ:** ನಗರದ ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜಿನ ವತಿಯಿಂದ ಎರಡನೇ ಅಂತರಾಷ್ಟ್ರೀಯ ಮಾಹಿತಿ ವಿಜ್ಞಾನ ಸಮ್ಮೇಳನ ಕಾರ್ಯಕ್ರಮವನ್ನು ಡಿಸೆಂಬರ್ 17 ರ ಇಂದಿನಿಂದ ಡಿ. 19 ರವರೆಗೆ ಕಾಲೇಜಿನ ಶ್ರೀ ಜಯಚಾಮರಾಜೇಂದ್ರ ಒಡೆಯರ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಡಿಸೆಂಬರ್ 17ರ ಇಂದು ಬೆಳಗ್ಗೆ 10 ಗಂಟೆಗೆ ನಡೆಯುವ ಉದ್ಘಾಟನಾ ಸಮಾರಂಭದಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ಕುಲಪತಿ ಡಾ ಎಸ್ ವಿದ್ಯಾಶಂಕರ್ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ನವದೆಹಲಿಯ ಆಲ್ ಇಂಡಿಯಾ ಕೌನ್ಸಿಲ್ ಫಾರ್ ಟೆಕ್ನಿಕಲ್ ಎಜುಕೇಶನ್ ಛೇರ್ಮನ್ ಪ್ರೊ. ಟಿ.ವಿ ಸೀತಾರಾಮ್, ಜಪಾನ್ ದೇಶದ ಕಾಗುಶಿಮ ವಿಶ್ವವಿದ್ಯಾನಿಲಯದ ಓಶಿಯನ್ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಪ್ರೊ. ತೋಷಿನೌಬು ಯಮಗುಂಚಿ, ಜಪಾನ್ ಕುರುಮೆ ಸಿಟಿ, ಕುರುಮೆ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಪ್ರೊ. ಶೌಚಿ ಟೋರಿ, ಪ್ರೊ. ಸಟೊಯುಕಿ ಟನಕ ಮತ್ತು ಕಾಲೇಜು ಪ್ರಾಂಶುಪಾಲ ಡಾ. ಡಿಪಿ ನಾಗರಾಜಪ್ಪ ಪಾಲ್ಗೊಳ್ಳಲಿದ್ದಾರೆ. ಡಿಸೆಂಬರ್ 18ರಂದು ಸಂಜೆ 5ಕ್ಕೆ ನಡೆಯುವ ಸಮಾರೋಪ ಸಮಾರಂಭದಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ಕುಲ ಸಚಿವ ಡಾ. ಪ್ರಸಾದ್ ಬಿ ರಾಮಪುರೆ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಸುರತ್ಕಲ್ ನ ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕುಲಸಚಿವ ಜೆ.ಎನ್ ಕುಮಾರ್, ಹಾವೇರಿಯ ಕರ್ನಾಟಕ ಜನಪದ ವಿಶ್ವವಿದ್ಯಾನಿಲಯದ ಕುಲಸಚಿವ ಕೆ. ಶಿವಶಂಕರ, ಜಪಾನ್ ದೇಶದ ಕಾಗುಶಿಮ ವಿಶ್ವವಿದ್ಯಾನಿಲಯದ ಓಶಿಯನ್ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಪ್ರೊ. ತೋಷಿನೌಬು ಯಮಗುಂಚಿ, ಜಪಾನ್ ಕುರುಮೆ ಸಿಟಿ, ಕುರುಮೆ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಪ್ರೊ. ಶೌಚಿ ಟೋರಿ, ಪ್ರೊ. ಸಟೊಯುಕಿ ಟನಕ ಪಾಲ್ಗೊಳ್ಳಲಿದ್ದಾರೆ.

# ಷಹಾಜೀರಾಜೆ ಬೋಂಸ್ಲೆ ಯವರ ಸ್ಮಾರಕ ನಿರ್ಮಾಣಕ್ಕೆ ರುದ್ರಪ್ಪ ಲಮಾಣಿ ಭರವಸೆ : ಜಿ.ಎಚ್.ಮರಿಯೋಜಿರಾವ್

**ಚನ್ನಗಿರಿ :** ಚನ್ನಗಿರಿ ತಾಲೂಕಿನ ಹೊದಿಗೆರೆ ಛತ್ರಪತಿ ಶಿವಾಜಿ ಮಹಾರಾಜರ ತಂದೆಯವರಾದ ಷಹಾಜೀರಾಜೆ ಬೋಂಸ್ಲೆ ಯವರ ಸ್ಮಾರಕ ಮತ್ತು ಹಿರೇಉಡದ ತುಳಜಭವಾನಿ ದೇಗುಲದ ಅಭಿವೃದ್ಧಿಯನ್ನು ಮಾಡಲು ಉಪ ಸ್ಪೀಕರ್ ರುದ್ರಪ್ಪ ಲಮಾಣಿಯವರು ಉತ್ಸಾಹ ತೋರಿದ್ದು ಸರಕಾರದಿಂದ ಅನುದಾನವನ್ನು ಮಂಜೂರು ಮಾಡಿಸುವ ಮೂಲಕ ಅಭಿವೃದ್ಧಿಗೆ ನೀಲಿ ನಕ್ಷೆ ಸಿದ್ದಪಡಿಸಲಾಗುವುದು ಎಂದು ಕರ್ನಾಟಕ ಕ್ಷತ್ರೀಯ ಮರಾಠ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಚ್.ಮರಿಯೋಜಿರಾವ್ ಹೇಳಿದರು.

ಮಂಗಳವಾರ ಚನ್ನಗಿರಿ ತಾಲೂಕಿನ ಹಿರೇಉಡ ಗ್ರಾಮದ ತುಳಜಭವಾನಿ ದೇಗುಲಕ್ಕೆ ಬೇಟಿ ನೀಡಿ ಗ್ರಾಮಸ್ಥರು ಮತ್ತು ಭಕ್ತಾದಿಗಳೊಂದಿಗೆ ದೇಗುಲದ ಅಭಿವೃದ್ಧಿಯ ಕುರಿತಂತೆ ಚರ್ಚಿಸಿ ಮಾತನಾಡಿ ದೇಗುಲ ಅಭಿವೃದ್ಧಿಗೆ ಉಪಸ್ಪೀಕರ್ ರುದ್ರಪ್ಪ ಲಮಾಣಿಯವರು ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಯದೇವನಾಯ್ಕವರು ಹೆಚ್ಚಿನ ಆಸಕ್ತಿಯನ್ನು ತೋರಿಸಿದ್ದು ನಾನು ಸಹ ನಿಗಮದ ಅಧ್ಯಕ್ಷನಾದ ಮೇಲೆ ದೇವಿಯ ದರ್ಶನ ಪಡೆ–ಯುತ್ತಿದ್ದು ದೇಗುಲದ ಅಭಿವೃದ್ಧಿಯಲ್ಲಿಯೂ



ತಾಯಿಯ ಶಕ್ತಿ ಆಗತ್ಯವಾಗಿದೆ. ದೇಗುಲದ ಸ್ಥಳ ಮತ್ತು ದಾಖಲಾತಿಗಳನ್ನು ಸರಿಯಾದ ರೀತಿಯಲ್ಲಿ ಪರಿಶೀಲನೆ ನಡೆಸಿ ಸುಮಾರು 3 ಎಕೆರೆ ಪ್ರದೇಶದಲ್ಲಿ ಸುಮಾರು 100 ಕೋಟಿ ರೂಗಳ ಕ್ರಿಯಾ ಯೋಜನೆ ಸಿದ್ದಪಡಿಸಬೇಕಿದೆ. ಈ ಯೋಜನೆಗಳ ನೀಲಿ ನಕ್ಷೆ ಸಿದ್ದವಾದ ನಂತರ ಹಣದ ಕ್ರೋಡಿಕರಣದ ಬಗ್ಗೆ ಮತ್ತೊಂದು ಸಭೆಯ ಮೂಲಕ ರುದ್ರಪ್ಪ ಲಮಾಣಿಯವರ ನೇತ್ರತ್ವದಲ್ಲಿ ನಡೆಸಿ ನಂತರ ತೀರ್ಮಾನವನ್ನು ತೆಗೆದುಕೊಳ್ಳಲಾಗುವುದು ಎಂದರು. ಇದರ ಜೊತೆಯಲ್ಲಿ ಛತ್ರಪತಿ ಶಿವಾಜಿಮಹಾರಾಜರ ತಂದೆಯವರಾದ ಷಹಾಜೀರಾಜೇ ಬೋಂಸ್ಲೆಯವರ ಸ್ಮಾರಕವೂ ಸಹ ಅಭಿವೃದ್ಧಿ ಪಡಿಸುವ ಉದ್ದೇಶವನ್ನು ಹೊಂದಿದ್ದು ವಿಧಾನಪರಿಷತ್ ಸದಸ್ಯರಾದ ಡಾ.ಎಂ.ಜಿ.ಮೂಳೆಯವರು, ಕಾಂಗ್ರೆಸ್ ಮುಖಂಡರಾದ ಹೊದಿಗೆರೆ ರಮೇಶ್, ಚನ್ನಗಿರಿ ಸಮಾಜದವರ ಸತತ ಪರಿಶ್ರಮದಿಂದ ಮತ್ತು ರಾಜ್ಯಸರಕಾರದ ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳೆಯವರು ಈಗಾಗಲೇ 5 ಕೋಟಿ ರೂಗಳನ್ನು ಮಂಜೂರು ಮಾಡಿದ್ದು ಅಭಿವೃದ್ಧಿಯ ಪಥದತ್ತ ನಡೆಯಲಿದೆ.ಆದರ ಜೊತೆಯಲ್ಲಿ ಸ್ಮಾರಕದ ಮೇಲ್ಛಾವಣಿ ನಿರ್ಮಾಣಕ್ಕೆ ಕೇಂದ್ರ ಸರಕಾರದ ಪುರಾತತ್ವ ಇಲಾಖೆಗೆ ಪತ್ರವನ್ನು ಬರೆಯಲಾಗಿದ್ದು ಸಂಬಂದಿಸಿದ ಸಚಿವರನ್ನು ಸಹ ಬೇಟಿ ಮಾಡಲಾಗುವುದು ಎಂದರು.

ಹೊದಿಗೆರೆಯಲ್ಲಿ ಈಗಾಗಲೇ ಒಂದು ಟ್ರಸ್ಟ್ ಇದ್ದು ಅದು ಷಹಾಜೀ ಮಹಾರಾಜರ ಪುಣ್ಯ ಸ್ಮರಣೆ ಕಾರ್ಯಕ್ರಮಕ್ಕೆ ಮಾತ್ರವೇ ಸೀಮಿತವಾಗಿದೆ. ಆದರೆ ಅದನ್ನು ಹೊರತುಪಡಿಸಿ ಈ ಬಾರಿ ಅದನ್ನು ಹೊರತುಪಡಿಸಿ ಮಾರ್ಚ 18 ಕ್ಕೆ ಷಹಾಜೀಮಹಾರಾಜರ ಜಯಂತ್ಯೋತ್ಸವನ್ನು ಆಚರಣೆ ಮಾಡಲಾಗುವುದು. ನಾವು ಸ್ಥಾನದಲ್ಲಿ ಇರುವವರೆಗೂ ತಾಯಿಯ ಸೇವೆ ಮಾಡಲು ಸಿದ್ದವಿದ್ದೇನೆ ಎಂದರು.

ಬಣಜಾರ್ ಸಮಾಜದ ಮತ್ತು ಕಾಂಗ್ರೆಸ್ ಮುಖಂಡ ಸೋಮಲಾಪುರ ನಾಗರಾಜನಾಯ್ಕ ಮಾತನಾಡಿ ಈ ಬಾಗದ ಸಾಕಷ್ಟು ಜನರು ತುಳಜಭವಾನಿಯ ದರ್ಶನವನ್ನು ಪಡೆಯಲು ತುಳಜಾಪುರಕ್ಕೆ ಹೋಗಬೇಕಿತ್ತು. ಆದರೆ ಇಂತಹ ಒಂದು ಶಕ್ತಿಯ ದೇಗುಲ ಲ್ಲಿಯೇ ಇದ್ದು ಇದರ ಅಭಿವೃದ್ಧಿಯ ಹೊಣೆಗಾರಿಕೆ ಎಲ್ಲರ ಮೇಲಿದೆ. ಇಂದು ಸ್ಥಳಪರಿಶೀಲನೆ ಮತ್ತು ಇಂಜನಿಯರ್ ನೇತ್ರತ್ವದಲ್ಲಿ ಒಂದು ನೀಲಿನಕ್ಷೆಯನ್ನು ಸಿದ್ದಪಡಿಸಬೇಕಿದೆ ಎಂದರು.

ಉಪ ಸ್ಪೀಕರ್ ರುದ್ರಪ್ಪ ಲಮಾಣಿ ಸಹೋದರ ಡಾಕೇಶ್ ಮಾತನಾಡಿ ಚನ್ನಗಿರಿ ತಾಲೂಕಿನ ಹಿರೇಉಡ ಗ್ರಾಮದಲ್ಲಿರುವಂತಹ ಈ ದೇಗುಲ ಒಂದು ಐತಹಾಸಿಕ ದೇಗುಲವಾಗಿದ್ದು ಇದುವರೆಗೂ ಅಭಿವೃದ್ಧಿಯಾಗದೇ ಇರುವುದು ವಿಷಾದನೀಯವಾಗಿದೆ. ಇಲ್ಲಿ ಮುಖ್ಯವಾಗಿ ಬಂದಂತಹ ಭಕ್ತಾದಿಗಳಿಗೆ ಮೊದಲು ಯಾತ್ರಿನಿವಾಸ ಆಗಬೇಕಿದೆ. ಇಲ್ಲಿ ಸಂಪೂರ್ಣ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕಿದೆ ಎಂದರು. ಈ ಸಂದರ್ಭದಲ್ಲಿ ದೇಗುಲ ಅಭಿವೃದ್ಧಿ ಸಮಿತಿಯ ಸದಸ್ಯರು ಮತ್ತು ಗ್ರಾಮಸ್ಥರು ಹಾಜರಿದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ಆರೋಗ್ಯ ಚೆನ್ನಾಗಿರುತ್ತದೆ. ಯೋಜಿತವಲ್ಲದ ಮೂಲಗಳಿಂದ ಹಣದ ಲಾಭ ನಿಮ್ಮ ದಿನವನ್ನು ಬೆಳಗಿಸುತ್ತದೆ. ನಿಮ್ಮ ಆಹ್ಲಾದಕರ ವರ್ತನೆ ಕುಟುಂಬ ಜೀವನವನ್ನು ಬೆಳಗುತ್ತದೆ. ಕೆಲವೇ ಜನರು ಇಂಥ ಪ್ರಾಮಾಣಿಕ ನಗುವಿರುವ ವ್ಯಕ್ತಿಯನ್ನು ನಿರ್ಲಕ್ಷಿಸಬಲ್ಲರು. ನೀವು ಇತರರ ಜೊತೆ ಚೆನ್ನಾಗಿರಬಹುದಾದಾಗ –ನೀವು ಒಂದು ಸುವಾಸನಾಯುಕ್ತ ಹೂವಿನ ಹಾಗೆ ಇರುತ್ತೀರಿ.

### ವೃಷಭ ರಾಶಿ

ಅನಂತ ಚೇತನ್ಯ ಮತ್ತು ಉತ್ಸಾಹ ನಿಮ್ಮನ್ನು ಆವರಿಸುತ್ತದೆ ಮತ್ತು ನೀವು ಯಾವುದೇ ಅವಕಾಶವನ್ನು ನಿಮ್ಮ ಅನುಕೂಲಕ್ಕೆ ಬಳಸಿಕೊಳ್ಳುತ್ತೀರಿ. ಇತರರ ಮೇಲೆ ಪ್ರಭಾವ ಬೀರಲು ತುಂಬಾ ವೆಚ್ಚ ಮಾಡಬೇಡಿ. ನಿಮ್ಮ ಕುಟುಂಬ ಸದಸ್ಯರೆಡೆಗೆ ನಿಮ್ಮ ಸರ್ವಾಧಿಕಾರಿ ಧೋರಣೆ ಕೇವಲ ಅನುಪಯುಕ್ತ ವಾದಗಳನ್ನು ಪ್ರಾರಂಭಿಸುತ್ತದೆ ಮತ್ತು ಇದು ಟೀಕೆಯನ್ನೂ ತರಬಹುದು. ಪ್ರಯಾಣದಲ್ಲಿ ಪ್ರಣಯ ಸಂಪರ್ಕದ ಸಾಧ್ಯತೆಯಿದೆ.

### ಮಿಥುನ ರಾಶಿ

ಮಕ್ಕಳ ಸಂಗದಲ್ಲಿ ಶಾಂತಿ ಪಡೆಯಿರಿ. ನಿಮ್ಮ ಸ್ವಂತದ್ದಷ್ಟೇ ಅಲ್ಲದೇ ಬೇರೆಯವರ ಮಕ್ಕಳ ಚಿಕಿತ್ಸಕ ಶಕ್ತಿಗಳೂ ನಿಮಗೆ ಸಾಂತ್ವನ ನೀಡಬಹುದು ಮತ್ತು ನಿಮ್ಮ ಆತಂಕವನ್ನು ಶಮನಗೊಳಿಸಬಹುದು. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು. ನಿಮ್ಮ ಪ್ರಣಯದ ಸಂಬಂಧಕ್ಕೆ ಇಂದು ಹಾನಿಯಾಗುತ್ತದೆ.

### ಕರ್ಕ ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಗೃಹಜೀವನ ಶಾಂತಿಯುತ ಮತ್ತು ಉತ್ತಮವಾಗಿರುತ್ತದೆ ಪ್ರೇಮ ಜೀವನ ಭರವಸೆ ತರುತ್ತದೆ ಯಾವುದೇ ಹೊಸ ಜಂಟಿ ಉದ್ಯಮಕ್ಕೆ ಬದ್ಧರಾಗಬೇಡಿ ಹಾಗೂ ಅಗತ್ಯವಿದ್ದರೆ ನಿಮ್ಮ ಹತ್ತಿರದವರ ಸಲಹೆ ಪಡೆಯಿರಿ. ನಿಮ್ಮ ಪ್ರಖರ ವೀಕ್ಷಣೆ ನಿಮ್ಮನ್ನು ಇತರರಿಗಿಂತ ಮುಂದಿರಲು ಸಹಾಯ ಮಾಡುತ್ತದೆ.

### ಸಿಂಹ ರಾಶಿ

ಗರ್ಭಿಣಿಯರಿಗೆ ವಿಶೇಷ ಕಾಳಜಿಯ ದಿನ. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಪ್ರೇಮದ ಸಂಗಾತಿ ನಿಮ್ಮನ್ನು ಹೊಗಳಬಹುದು. ಅವರನ್ನು ಏಕಾಂಗಿಯಾಗಿ ಈ ಪ್ರಪಂಚದಲ್ಲಿ ಬಿಡಬೇಡಿ.

### ಕನ್ಯಾ ರಾಶಿ

ಹಲ್ಲು ನೋವು ಅಥವಾ ಹೊಟ್ಟೆ ಹಾಳಾಗುವಿಕೆ ನಿಮಗೆ ಕೆಲವು ಸಮಸ್ಯೆಗಳನ್ನು ತರಬಹುದು. ತಕ್ಷಣ ಪರಿಹಾರ ಪಡೆಯಲು ವೈದ್ಯರ ಸಲಹೆ ಪಡೆಯಿರಿ. ನಿಮಗೆ ತಿಳಿದ ಜನರ ಮೂಲಕ ಆದಾಯದಹೊಸ ಮೂಲಗಳು ಕಂಡುಬರುತ್ತವೆ. ನಿಮ್ಮ ಸ್ನೇಹಿತರು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ. ಸಮಯ, ಕೆಲಸ, ಹಣ, ಸ್ನೇಹಿತರು, ಕುಟುಂಬ, ಬಂಧುಗಳು; ಎಲ್ಲವೂ ಒಂದು ಕಡೆ ಮತ್ತು ನಿಮ್ಮ ಸಂಗಾತಿಯ ಜೊತೆ ನೀವು ಇನ್ನೊಂದು ಕಡೆಗಿರುತ್ತೀರಿ.

### ತುಲಾ ರಾಶಿ

ಸಂತೋಷದ ಸುದ್ದಿ ಪಡೆಯುವ ಸಾಧ್ಯತೆಯಿದೆ. ಹಣ ನಿಮಗೆ ಅಗತ್ಯವಾಗಿದೆ ಆದರೆ ನಿಮ್ಮ ಸಂಬಂಧಗಳನ್ನು ಹಾಳುಮಾಡುವಷ್ಟು ಹಣದ ಬಗ್ಗೆ ಗಂಭೀರವಾಗಬೇಡಿ. ಒಬ್ಬ ಹಳೆಯ ಸ್ನೇಹಿತ ದಿನದ ಅಂತ್ಯದಲ್ಲಿ ಒಂದು ಆಹ್ಲಾದಕರ ಭೇಟಿ ನೀಡುತ್ತಾರೆ. ನಿಮ್ಮ ಪ್ರಿಯತಮೆಗೆ ನಿಮ್ಮ ಅಸಡ್ಡೆಯ ಗಮನ ಮನೆಯಲ್ಲಿ ಒತ್ತಡದ ಕ್ಷಣಗಳನ್ನು ತರಬಹುದು.

### ವೃಶ್ಚಿಕ ರಾಶಿ

ಹೊರಾಂಗಣ ಚಟುವಟಿಕೆಗಳು ಇಂದು ದಣವು ಮತ್ತು ಒತ್ತಡ ತರುತ್ತವೆ. ಮನರಂಜನೆ ಅಥವಾ ಹೊರನೋಟದ ಸುಧಾರಣೆಗಾಗಿ ಹೆಚ್ಚು ಖರ್ಚು ಮಾಡಬೇಡಿ. ನೀವು ಸ್ನೇಹಿತರ ಮೂಲಕ ಪ್ರಮುಖ ಸಂಪರ್ಕಗಳನ್ನು ಹೊಂದುತ್ತೀರಿ. ಕೆಲವರಿಗೆ ಮದುವೆಯಾಗುವ ಸಾಧ್ಯತೆಗಳು ಹಾಗೂ ಇನ್ನೂ ಕೆಲವರಿಗೆ ಪ್ರಣಯ ಕಾಲ. ನೀವು ಸ್ವಲ್ಪ ಕಾಲ ಒಬ್ಬಂಟಿಯಾಗಿದ್ದಂತೆ ತೋರುತ್ತದೆ ಸಹೋದ್ಯೋಗಿಗಳು / ಸಹವರ್ತಿಗಳು ನಿಮ್ಮ ಸಹಾಯಕ್ಕೆ ಬರಬಹುದು – ಆದರೆ ಅವರು ಹೆಚ್ಚೇನೂ ಸಹಾಯ ಮಾಡಲು ಸಾಧ್ಯವಾಗುವುದಿಲ್ಲ

### ಧನು ರಾಶಿ

ಕೆಲಸದ ನಡುವೆ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ ಮತ್ತು ತಡರಾತ್ರಿ ಕೆಲಸ ಮಾಡುವುದನ್ನು ತಪ್ಪಿಸಿ. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಸಂಬಂಧಿಗಳು ನಿಮ್ಮ ಅತೀ ಉದಾರ ವರ್ತನೆಯ ಅನುಚಿತ ಲಾಭ ಪಡೆಯಲು ಪ್ರಯತ್ನಿಸುತ್ತಾರೆ. ನಿಮ್ಮನ್ನು ನಿಯಂತ್ರಿಸಕೊಳ್ಳದಿದ್ದರೆ ನೀವು ಮೋಸಹೋಗಬಹುದು.

### ಮಕರ ರಾಶಿ

ಜನರಲ್ಲಿ ಬೆರೆಯುವ ಭಯ ನಿಮ್ಮನ್ನು ಧೈರ್ಯಗೆಡಿಸಬಹುದು. ಇದನ್ನು ತೆಗೆದುಹಾಕಲು ನಿಮ್ಮ ಸ್ವಾಭಿಮಾನವನ್ನು ಪ್ರೋತ್ಸಾಹಿಸಿ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ಸಾಮಾಜಿಕ ಕಾರ್ಯಗಳಿಗೆ ಹಾಜರಾಗಲು ಅವಕಾಶಗಳಿರಬಹುದು ಹಾಗೂ ಇದು ನಿಮ್ಮನ್ನು ಪ್ರಭಾವಿ ವ್ಯಕ್ತಿಗಳ ಜೊತೆ ನಿಕಟ ಸಂಪರ್ಕ ಹೊಂದುವಂತೆ ಮಾಡಬಹುದು. ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ.


### ಕುಂಭ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದುನೀವು ನಂಬುವ ಯಾರಾದರೂ ನಿಮಗೆ ಸಂಪೂರ್ಣ ನಿಜ ಹೇಳದಿರಬಹುದು – ಇತರರು ಮನವೊಲಿಸುವ ನಿಮ್ಮ ಸಾಮರ್ಥ್ಯ ಬರುವ ಸಮಸ್ಯೆಗಳನ್ನು ಪರಿಹರಿಸಲು ಸಹಾಯ ಮಾಡುತ್ತದೆ. ಪ್ರೀತಿಯ ಸಂತೋಷವನ್ನು ಅನುಭವಿಸಬಹುದು.

### ಮೀನ ರಾಶಿ

ಸಂಗಾತಿಯೊಡನೆ ಚಲನಚಿತ್ರ – ರಂಗಭೂಮಿ ಅಥವಾ ಊಟ ನಿಮ್ಮನ್ನು ಒಂದು ಶಾಂತ ಮತ್ತು ಅದ್ಭುತವಾದ ಮನಸ್ಥಿತಿಯಲ್ಲಿರುತ್ತದೆ ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯನ್ನು ಹೊಂದಿರಬಹುದು. ಇದನ್ನು ಪರಿಹರಿಸುವುದಕ್ಕಾಗಿ ನೀವು ನಿಮ್ಮ ತಂದೆ ಅಥವಾ ತಂದೆಗೆ ಸಮಾನವಾದಂತಹ ಯಾವುದೇ ವೈಯಕ್ತಿಯಿಂದ ಸಲಹೆಯನ್ನು ತೆಗೆದುಕೊಳ್ಳಬಹುದು. ನಿಮ್ಮ ಪ್ರೀತಿಪಾತ್ರರ ಜೊತೆಗಿನ ನಿಮ್ಮ ಸಂಬಂಧದಲ್ಲಿ ಹುಳಿ ಹಿಂಡಬಹುದಾದ ಸಮಸ್ಯೆಗಳನ್ನು ಕೆದಕುವುದನ್ನು ತಪ್ಪಿಸುವುದು ಅತ್ಯುತ್ತಮ.

# ದಸ್ತಾವೇಜು ಬರಹಗಾರರಿಗೆ ಪ್ರತ್ಯೇಕ ಲಾಗಿನ್ ನೀಡುವಂತೆ ಮನವಿ



**ಚಿಕ್ಕಮಗಳೂರು:** ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಿಗೆ ಪಡೆದ ದಸ್ತಾವೇಜು ಬರಹಗಾರರಿಗೆ ಪ್ರತ್ಯೇಕ ಲಾಗಿನ್ ನೀಡುವಂತೆ ಒತ್ತಾಯಿಸಿ ಇಂದು ಉಪನೋಂದಣಾಧಿಕಾರಿಗಳಿಗೆ ಜಿಲ್ಲಾ ನೋಂದಣಿ ಇಲಾಖೆಯ ಪರವಾನಗಿ ಪಡೆದ ಪತ್ರ ಬರಹಗಾರರ ಸಂಘದ ವತಿಯಿಂದ ಮನವಿ ಸಲ್ಲಿಸಲಾಯಿತು.

ತಂತ್ರಾಂಶದಲ್ಲಿ ಆಗುತ್ತಿರುವ ಲೋಪದೋಷಗಳಿಂದ ಹಾಗೂ ನೂತನ ಕಾವೇರಿ–3 ತಂತ್ರಾಂಶ ಅಳವಡಿಸುವುದರಿಂದ ವೃತ್ತಿನಿರತ ಪತ್ರ ಬರಹಗಾರರ ವೃತ್ತಿಗೆ ಅಭದ್ರತೆ ಸೃಷ್ಟಿಯಾಗುತ್ತಿರುವ ಕುರಿತು ಕೂಡಲೆ ಕ್ರಮ ಕೈಗೊಳ್ಳಬೇಕೆಂದು ಸಂಘದ ಅಧ್ಯಕ್ಷ ಎಸ್. ಶ್ರೀಧರ್ ಪ್ರಕಟಣೆಯಲ್ಲಿ ಒತ್ತಾಯಿಸಿದ್ದಾರೆ. .

ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ 2004 ರಿಂದ ಕಾವೇರಿ–1 ತಂತ್ರಾಂಶವನ್ನು ಜಾರಿಗೊಳಿಸಿದ್ದು, ಆನಂತರ 2024 ರಲ್ಲಿ ಕಾವೇರಿ–2 ತಂತ್ರಾಂಶವನ್ನು ಜಾರಿಗೊಳಿಸಿರುವುದರಿಂದ ವೃತ್ತಿ ನಿರತ ಅಧಿಕೃತ ಪತ್ರ ಬರಹಗಾರರಿಗೆ ತೀವ್ರತರವಾದ ತೊಂದರೆಯಾಗಿದೆ ಎಂದಿದ್ದಾರೆ.

ಸಿಟಿಜನ್ ಲಾಗಿನ್ ನಲ್ಲಿ ಕಾರ್ಯ ನಿರ್ವಹಿಸಲು ಹಲವು ನಿಭಂದನೆಗಳು ಇರುವುದರಿಂದ ನಮಗೆ ಪತ್ರ ತಯಾರಿಸಿ ನೋಂದಣಿ ಕ್ರಮ ಪೂರೈಸಲು ಬಹಳಷ್ಟು ಅಡ್ಡಿ ಅಡಚಣೆಗಳು ಉಂಟಾಗಿದ್ದು, ಈ ಬಗ್ಗೆ ಇಲಾಖೆಗೆ ಹಲವಾರು ಬಾರಿ ಮನವಿ ಸಲ್ಲಿಸಿದ್ದರೂ ಕೂಡ ಪರಿಗಣಿಸದೇ ಏಕಪಕ್ಷೀಯವಾಗಿ ಇಲಾಖೆಯವರು ತಂತ್ರಾಂಶವನ್ನು ಬದಲಾಯಿಸುತ್ತಿದ್ದಾರೆಂದಿದ್ದಾರೆ.

ಇದರಿಂದ ಸಾವಿರಾರು ವೃತ್ತಿ ನಿರತ ಪತ್ರ ಬರಹಗಾರರ ಮುಂದಿನ ಭವಿಷ್ಯಕ್ಕೆ ತೊಂದರೆಯಾಗುವ ಎಲ್ಲಾ ಸಾಧ್ಯತೆಗಳು ಇರುತ್ತದೆ. ಕಾವೇರಿ–2 ತಂತ್ರಾಂಶದ ಯಶಸ್ಸಿಗೆ ಪತ್ರಬರಹಗಾರರ ಸಹಕಾರ ಹಾಗೂ ಸಾರ್ವಜನಿಕರಿಗೆ ತಿಳುವಳಿಕೆ ನೀಡುವ ಕಾರ್ಯವನ್ನು ಯಶಸ್ವಿಯಾಗಿ ನಡೆಸಿದರು ಕೂಡ ಸರ್ಕಾರ ಹಾಗೂ ಇಲಾಖೆಯವರು ನಮ್ಮನ್ನು ಕಡೆಗಣಿಸುತ್ತಿರುವುದು ವಿಷಾಧನೀಯ.

ಆದ್ದರಿಂದ ಕರ್ನಾಟದ ರಾಜ್ಯದ ಎಲ್ಲಾ ಅಧಿಕೃತ ಪತ್ರಬರಹಗಾರರು ಒಕ್ಕೂಟವನ್ನು ರಚಿಸಿಕೊಂಡು ಈ ಬಗ್ಗೆ ಬೇಡಿಕೆಗಳನ್ನು ಈಡೇರಿಸಲು ಒಕ್ಕೊರಲಿನ ಮನವಿಯನ್ನು ಸಲ್ಲಿಸುವ ಕಾರ್ಯದಲ್ಲಿ ಪಾಲ್ಗೊಂಡಿರುತ್ತೇವೆ. ಹಾಗೂ ಈ ಕೆಳಕಂಡಂತೆ ನಮ್ಮ ಬೇಡಿಕೆ ಈಡೇರಿಸಬೇಕೆಂದು ಮನವಿಯನ್ನು ಇಲಾಖೆಗೆ ಸಲ್ಲಿಸಿದರು.

1. ಕಾವೇರಿ –2 ತಂತ್ರಾಂಶದಲ್ಲಿ ಪತ್ರ ಬರಹಗಾರರಿಗೆ ಪ್ರತ್ಯೇಕ ಲಾಗಿನ್ ವ್ಯವಸ್ಥೆಯನ್ನು ಕಲ್ಪಿಸಬೇಕು ಹಾಗೂ ಅಧಿಕೃತ ಪರವಾನಗಿ ಪಡೆದ ಪತ್ರ ಬರಹಗಾರರಿಗೆ ನೋಂದಣಿ ಕ್ರಮಗಳನ್ನು ನಿರ್ವಹಿಸಲು ಅನುವುಮಾಡಿಕೊಡಬೇಕು.

2. ಜಿಲ್ಲೆಯ ಬಹುತೇಕ ಉಪನೋಂದಣಿ ಅಧಿಕಾರಿಗಳ ಕಛೇರಿಯಲ್ಲಿ ಅನಧಿಕೃತ ವ್ಯಕ್ತಿಗಳು ಪತ್ರಗಳನ್ನು ಮಾಡಿ ಸರಿಯಾದ ಮಾಹಿತಿಯನ್ನು ಸಾರ್ವಜನಿಕರಿಗೆ ನೀಡದೇ, ನೋಂದಣಿ ನಿಯಮದ ಅರಿವನ್ನು ಹೊಂದಿರದ ಹಾಗೂ ಕಾನೂನಿನ ಅಂಶವನ್ನು ತಿಳಿಯದೇ ಇರುವ ವ್ಯಕ್ತಿಗಳು ಪತ್ರಗಳನ್ನು ನೋಂದಾಯಿಸುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟವನ್ನು ಉಂಟುಮಾಡುತ್ತಿದ್ದಾರೆ. ಅದ್ದರಿಂದ ಉಪನೋಂದಣಿ ಕಛೇರಿಗಳಲ್ಲಿ ಅನಧಿಕೃತ ವ್ಯಕ್ತಿಗಳ ಪಾಲ್ಗೊಳ್ಳುವಿಕೆಯನ್ನು ತಡೆಹಿಡಿಯಬೇಕು.

3. ನಮ್ಮ ಬೇಡಿಕೆಯಂತೆ ಹೊರರಾಜ್ಯಗಳಲ್ಲಿ ಇರುವಂತೆ ನಮ್ಮ ರಾಜ್ಯದಲ್ಲಿಯೂ ಸಹಾ ಪತ್ರ ಬರಹಗಾರರಿಗೆ ಪ್ರತ್ಯೇಕ ಲಾಗಿನ್ ನೀಡಬೇಕು, ನೋಂದಣಿಯಾಗುವ ಎಲ್ಲಾ ಪತ್ರಗಳಿಗೆ ಅಧಿಕೃತ ಪತ್ರ ಬರಹಗಾರರ ಅಥವಾ ಕಾನೂನು ತಿಳಿದಿರುವ ವಕೀಲರ ಸಹಿ ಕಡ್ಡಾಯಗೊಳಿಸಬೇಕು.

ಇಲಾಖೆಯ ಕಾವೇರಿ 3 ತಂತ್ರಾಂಶ ಫೇಸ್ ಲಸ್ ಅನುಷ್ಠಾನವಾದಲ್ಲಿ ತಮ್ಮ ಜೀವನಕ್ಕೆ ಅಧಾರವಾಗಿರುವ ಪತ್ರ ಬರವಣಿಗೆಯ ವೃತ್ತಿಯನ್ನು ಹೊಂದಿರುವ ಹಾಗೂ ಇಲಾಖೆಯಿಂದ ಅಧಿಕೃತವಾಗಿ ಪರವಾನಗಿ ಪಡೆದ ಯುವ ಸಮೂಹಕ್ಕೆ ಮುಂದಿನ ದಿನಗಳಲ್ಲಿ ವೃತ್ತಿ ನಿಂತುಹೋಗುವ ಸಾಧ್ಯತೆ ಹೆಚ್ಚಾಗಿದ್ದು, ಇದರಿಂದ ಪತ್ರ ಬರಹಗಾರರಿಗೆ ಜೀವನಕ್ಕೆ ಅಸರೆಯಾಗಿರುವ ಈ ವೃತಿಯನ್ನು ಕಳೆದುಕೊಳ್ಳುವ ಭೀತಿ ಉಂಟಾಗಿರುತ್ತದೆ.

ಹಾಗೂ ಅವರನ್ನು ಅವಲಂಬಿಸಿರುವ ನೂರಾರು ಕುಟುಂಬದ ಸದಸ್ಯರ ಭವಿಷ್ಯ ಚಿಂತಾಜನಕವಾಗುವ ಎಲ್ಲಾ ಸಾಧ್ಯತೆಗಳು ಇರುತ್ತದೆ. ಅದ್ದರಿಂದ ನಮ್ಮ ಮನವಿಯನ್ನು ಪರಿಗಣಿಸಿ ಬರಹಗಾರರ ವೃತ್ತಿಗೆ ಭದ್ರತೆ ಒದಗಿಸಿಕೊಡಬೇಕು ಎಂದು ಪ್ರಕಟಣೆಯಲ್ಲಿ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಸದಸ್ಯರಾದ ಶ್ರೀನಿವಾಸ್, ಶ್ರಿನಿವಾಸ್ ಎಸ್. ದೊಡ್ಡರಂಗಶೆಟ್ಟಿ, ರಮೇಶ್, ರಿಯಾಜ್ ಅಹಮದ್, ಕೃಷ್ಣಮೂರ್ತಿ, ಮುರಳಿ, ದಿಲ್ಪಿತ್, ಜಗದೀಶ್,ಚಂದ್ರಶೇಖರ್,

## ಕಲಾ ಕುಂಚ ಕೇರಳ ಗಡಿನಾಡಿನ ಶಾಖೆಯ ಸಹಯೋಗದೊಂದಿಗೆ ಸುಸಂಪನ್ನಗೊಂಡ ಗೀತಾ ಸಪ್ತಾಹ



**ದಾವಣಗೆರೆ:** ಕೊಂಡೆವೂರು ಎಸ್ ಎಸ್ ಎನ್ ವಿ ಪಿ ಶಾಲೆ ಕೊಂಡೆವೂರಲ್ಲಿ ಕಲಾ ಕುಂಚ ಕೇರಳ ಗಡಿನಾಡ ಘಟಕದ ಸಹಯೋಗದೊಂದಿಗೆ ಡಿಸೆಂಬರ್ ಒಂದರಿಂದ 7ನೇ ತಾರೀಖಿನವರೆಗೆ ಗೀತಾ ಜಯಂತಿಯ ಅಂಗವಾಗಿ ಗೀತಾ ಸಪ್ತಾಹ ಜರಗಿತು.

ಡಿಸೆಂಬರ 1 ನೇ ತಾರೀಕಿಗೆ ಗೀತಾ ಜ್ಞಾನ ಯಜ್ಞದ ಪ್ರಧಾನ ಗುರುಗಳಾದ ಶ್ರೀಯುತ ಸುಬ್ರಾಯ ನಂದೋಡಿ ಅವರಿಂದ ಗೀತಾಸಪ್ತಾಹದ ಉದ್ಘಾಟನೆ ಶಾಲೆಯ ಪ್ರಧಾನ ವೇದಿಕೆಯಲ್ಲಿ ಜರಗಿತು. ನಂತರ ಪ್ರತಿದಿನ ಗೀತಾ ಮಹಾತ್ಮೆಯನ್ನು ಮಕ್ಕಳಿಂದ ಹೇಳಿಸಿ ಶ್ರೀಯುತರಾದ ಮನೋಜ್ ಮತ್ತು ಚಂದ್ರಶೇಖರ್ ಶ್ರೀಮತಿಯರಾದ ತಾರಾಲತಾ, ಸುಮಾ ಹಾಗು ಸ್ವಾತಿಯವರು ಶ್ಲೋಕ ಅರ್ಥಕ್ಕೆ ಸಂಬಂಧಪಟ್ಟ ಕಥೆ ಹೇಳಿ ಮಕ್ಕಳನ್ನು ಗೀತಾ ಅಧ್ಯಯನಕ್ಕೆ ಪ್ರೋತ್ಸಾಹಿಸಿದರು.

ಏಳನೇ ದಿನ ಬೆಳಗ್ಗೆ 9 ಗಂಟೆಗೆ ಕೊಂಡೆವೂರು ಗಾಯತ್ರಿ ಮಂದಿರದಲ್ಲಿ ಪೂಜಿಸಲ್ಪಟ್ಟ ಶ್ರೀಮದ್ ಭಗವದ್ಗೀತಾ ಪುಸ್ತಕವನ್ನು ಶ್ರೀ ಶ್ರೀ ಯೋಗಾನಂದ ಸರಸ್ವತಿ ಸ್ವಾಮೀಜಿಯವರ ಜೊತೆಗೆ ಗೀತಾಮಾತೆಯನ್ನು ಬ್ರಹ್ಮವಾಹಕರ ವೇಷ ಧರಿಸಿದ ವಿದ್ಯಾರ್ಥಿ ವೇದಾಂತ ಕಾರಂತ್ ಹೊತ್ತುಕೊಂಡು ಗೀತಾ ಪಠಣ ಹಾಗೂ ಚಂಡೆ ವಾದ್ಯ ಘೋಷದೊಂದಿಗೆ ಮೆರವಣಿಗೆ ಮಾಡಲಾಯಿತು.

ಸಭೆಯಲ್ಲಿ ಗೀತಾ ಆರತಿಯನ್ನು ಮಾಡಿ ಪರಮಪೂಜ್ಯ ಸ್ವಾಮೀಜಿಯವರು ಆಶೀರ್ವಚನವಿತ್ತರು

ನಂತರ ಮಕ್ಕಳು ಫಲಹಾರ ಮುಗಿಸಿ ಸ್ಪರ್ಧೆಗೆ ಅಣಿಯಾದರು. ನಾಲ್ಕು ಹಂತಗಳಲ್ಲಿ ಸ್ಪರ್ಧೆ ಏಕಕಾಲದಲ್ಲಿ ನಡೆಯಿತು, ನಂತರ ಗೀತಾ ಪಠಣ ಮಕ್ಕಳಿಂದ ಸಾಮೂಹಿಕವಾಗಿ ನೆರವೇರಿತು.

ಕೊನೆಗೆ ಸಮರೋಪ ಸಮಾರಂಭವು ಶಾಲಾ ಆಡಳಿತ ಅಧಿಕಾರಿಯಾಗಿ ಶ್ರೀಯುತ ಗಿರಿಧರ್ ರಾವ್ ಇವರ ಅಧ್ಯಕ್ಷತೆಯಲ್ಲಿ ನೆರವೇರಿತು. ಶ್ರೀಮತಿ ಬಿ ವಿದ್ಯಾ ರಾವ್ ನಿವೃತ್ತ ಅಧಿಕಾರಿ ಕುದುರೆಮುಖ ಕಬ್ಬಿಣ ಅದಿರು ಕಾರ್ಖಾನೆ, ಹಾಗೂ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರು ಕೇರಳ ಗಡಿನಾಡ ಘಟಕ ಶ್ರೀಯುತ ಜಯಪ್ರಕಾಶ್ ತೊಟ್ಟೆತೋಡಿಯವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಬಹುಮಾನ ವಿತರಣೆ ಮಾಡಿದರು. ಕೇರಳ ಗಡಿನಾಡ ಘಟಕದ ಅಧ್ಯಕ್ಷರು ಶ್ರೀಮತಿ ಜಯಲಕ್ಷ್ಮಿ ಕಾರಂತರು ಕಾರ್ಯಕ್ರಮದ ನಿರ್ವಹಣೆ ಮಾಡಿದರು, ಶ್ರೀಮತಿ ರೇಖಾ ಪ್ರದೀಪ್, ಇಡೀ ಕಾರ್ಯಕ್ರಮದ ಮುಖ್ಯ ಸಂಘಟನೆಯನ್ನು ಮಾಡಿದರು, ಶ್ರೀಯುತ ಚಂದ್ರಶೇಖರ್ ಮತ್ತು ಶ್ರೀಮತಿ ಗಾಯತ್ರಿ ಅವರು ಕಾರ್ಯಕ್ರಮದ ಸಂಪೂರ್ಣ ಹೊಣೆಗಾರಿಕೆಯನ್ನು ವಹಿಸಿದರು, ಶ್ರೀಯುತ ಚಂದ್ರಶೇಖರ್‌ವರ ವಂದನಾರ್ಪಣೆಯೊಂದಿಗೆ ಕಾರ್ಯಕ್ರಮ ಸಂಪನ್ನಗೊಂಡಿತು.

## ವಿಕಲ ಚೇತನರಿಗೆ ಮೊದಲ ಆದ್ಯತೆ ನೀಡಿ : ಲತಾಕುಮಾರಿ



**ಹಾಸನ** : ವಿವಿಧ ಇಲಾಖೆಗಳ ಮೂಲಕ ನೀಡುವ ಸರ್ಕಾರದ ಸವಲತ್ತುಗಳನ್ನು ನೀಡುವಾಗ ವಿಕಲಚೇತನರಿಗೆ ಮೊದಲ ಆದ್ಯತೆ ನೀಡುವಂತೆಜಿಲ್ಲಾಧಿಕಾರಿ ಲತಾಕುಮಾರಿಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿ ಲ್ಲಾ ಧಿ ಕಾ ರಿ ಅ ವ ' ರ ' ಕ ' ಚ ' ೀ ರಿ ಸಭಾಂಗಣದಲ್ಲಿಇಂದು ನಡೆದ ವಿಕಲಚೇತನರಕುಂದುಕೊರತೆ ಅಹವಾಲು ಸ್ವೀಕಾರ ಸಭೆಯಲ್ಲಿ ಮಾತನಾಡಿದಅವರು ಸ್ಥಳೀಯ ಸಂಸ್ಥೆಗಳಲ್ಲಿ ವಿಕಲಚೇತನರಿಗೆ ಶೇಕಡ 5 ರಷ್ಟುಅನುದಾನ ಮೀಸಲಿಟ್ಟುಅವರ ಬೆಳವಣಿಗೆಗೆ ಪೂರಕವಾಗಿಸದ್ಬಳಕೆಗೆ ಮಾಡುವಂತೆ ತಿಳಿಸಿದರು.ಸಾರ್ವಜನಿಕ ಸ್ಥಳಗಳಲ್ಲಿ, ಕಲಾ ಭವನ, ಶಾಲೆ–ಕಾಲೇಜು, ಆಸ್ಪತ್ರೆಗಳಲ್ಲಿ ಎಲ್ಲಾ ಕಡೆಗಳಲ್ಲಿಯೂ ವಿಕಲಚೇತನರಿಗೆ ನೆರವಾಗುವಂತೆರ‍್ಯಾಂಪ ್ಇರಬೇಕುಎಂದರು.ಎಲ್ಲಾ ಸರ್ಕಾರಿ ಆಸ್ಪತ್ರೆಗಳನಾಮಫಲಕದಲ್ಲಿಜಿಲ್ಲಾಅಂಗವಿಕಲರಕಲ್ಯಾಣಅಧಿಕಾರಿಅವರ ಹೆಸರು ಮೊಬೈಲ್ ನಂಬರ್‌ಗೆ ಸಂಬಂಧಿಸಿದ ಮಾಹಿತಿಯನ್ನು ಅಳವಡಿಸಲು ಸೂಚಿಸಿದರಲ್ಲದೆ, ಪ್ರತಿಗ್ರಾಮ ಪಂಚಾಯಿತಿಯಲ್ಲಿ ವಿಕಲಚೇತನರಗ್ರಾಮ ಸಭೆ ನಡೆಸಲುಕ್ರಮವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸ ' ವ ' ' ಜ ದ ' ಲ್ಲಿ ವಿ ಕ ಲ ಚ ೀ ತ ನ ' ರ ' ನ ್ ್ನ ಕ ' ಡ ' ೆ ಗ ' ಣಿ ಸ ' ದ ೆ ಸಮಾನತೆಯಿಂದ ನೋಡಬೇಕು. ಅವರಜೀವನವನ್ನುಉತ್ತಮರೀತಿಯಲ್ಲಿ ರೂಪಿಸಿಕೊಳ್ಳಲು ಅವರಿಗೆಅಗತ್ಯವಿರುವ ಸಾಧನ ಸಲಕರಣೆಗಳು, ಶಿಕ್ಷಣ, ಆರೋಗ್ಯ ಸೌಲಭ್ಯಗಳನ್ನು ನಂತರಯಾರ ಮೇಲೂ ಅವಲಂಬಿತರಾಗದಂತೆ ಸ್ವಯಂಉದ್ಯೋಗವನ್ನು ಪಡೆದುಕೊಳ್ಳಲು ಕೌಶಲ್ಯ ತರಬೇತಿಗಳನ್ನು ನೀಡುವ ಮೂಲಕ ಉದ್ಯೋಗದಲ್ಲಿ ತೊಡಗಿಕೊಳ್ಳಲು ಉತ್ತೇಜನ ನೀಡಬೇಕುಎಂದು ತಿಳಿಸಿದರು.

ವಿಶೇಷವಾಗಿ ಜಿಲ್ಲಾ ಮಟ್ಟದಲ್ಲಿ ವಿಶೇಷ ಚೇತರಿಗಾಗಿಯೇಉದ್ಯೋಗ ಮೇಳ ಆಯೋಜಿಸಲು ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ವಿಕಲಚೇತರತಂದೆಅಥವಾತಾಯಿ ಸರ್ಕಾರಿ ನೌಕರಿಯಲ್ಲಿದ್ದು, ನಿವೃತ್ತ ಹೊಂದಿದ್ದಲ್ಲಿಅವರ ಮಕ್ಕಳಿಗೆ ಪಿಂಚಣಿ ನೀಡುವ ಸೌಲಭ್ಯವಿರುತ್ತದೆ. ಇದರಕುರಿತು ಹೆಚ್ಚಿನ ಪ್ರಚಾರ ನೀಡಿಎಂದು ತಿಳಿಸಿದರು.

ಸ್ಥಳೀಯ ಸಂಸ್ಥೆ ಮಟ್ಟದಲ್ಲಿ ವಿಕಲಚೇತರಿಗೆಆದ್ಯತೆ ಮೇರೆಗೆ ವಸತಿಯೋಜನೆಯಡಿ ಸೌಲಭ್ಯಕಲ್ಪಿಸಲು ಸೂಚಿಸಿದರಲ್ಲದೆ, ಉಚಿತ ಕಾನೂನು ನೆರವುಒದಗಿಸಲುಕ್ರಮವಹಿಸಬೇಕು ಎಂದರು.

ಪ್ರತಿ ಮಾಹೆ ವಿಕಲ ಚೇತರ ಮನೆ ಬಾಗಿಲಿಗೆ ಪಡಿತರತಲುಪಿಸಲು ಕ್ರಮಕೈಗೊಳ್ಳುವಂತೆ ತಿಳಿಸಿದರಲ್ಲದೆ, ವಿಕಲಚೇತರುಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಲು ಅಗತ್ಯಕ್ರೀಡಾ ಪರಿಕರಗಳನ್ನು ಕಡ್ಡಾಯವಾಗಿಒದಗಿಸುವಂತೆ ತಿಳಿಸಿದರು.

ಸ ಭ ೆ ಯ ಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ॥ ಅನಿಲ್‌ಕುಮಾರ್, ಹಿಮ್ಸ್‌ನಮಾನಸಿಕ ವಿಭಾಗದ ಮುಖ್ಯಸ್ಥರಾದಡಾ॥ ಸಂತೋಷ್, ಹಿರಿಯ ವಕೀಲರಾದಚಂದ್ರಶೇಖರ್, ಜಿಲ ್ಲಾಅಂಗವಿಕಲರಕಲ್ಯಾಣಾಧಿಕಾರಿಅನುಪಮಾ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

## ಕುವೆಂಪು ವಿವಿಯಿಂದ ಶ್ರೀಕಾಂತ ಬಿರಾದರರವರಿಗೆ ಪಿಹೆಚ್‌ಡಿ ಪ್ರದಾನ



**ಶಿವಮೊಗ್ಗ:** ಮೂಡಲಗಿ ಶ್ರೀ ಶ್ರೀಪಾದಬೋಧ ಸ್ವಾಮೀಜಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಭೌತಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀಕಾಂತ ಬಿರಾದರರವರು ಭೌತಶಾಸ್ತ್ರ ವಿಷಯದಲ್ಲಿ ಡಾ. ಚಂದ್ರಶೇಖರ ಎಂ.ಎನ್. ಮತ್ತು ಪ್ರೊ. ದೇವಿದಾಸ್ ಜಿ.ಬಿ ಅವರ ಮಾರ್ಗದರ್ಶನದಲ್ಲಿ ಸಂಶೋಧಿಸಿದ "ಸಿಂಥೇಸಿಸ್ ಆಂಡ್ ಕ್ಯಾರೇಕ್ಟರೈಜೇಷನ್ ಆಫ್ ಹ್ಯವಿ ಮೆಟಲ್ ಆಕ್ಸೈಡ್ ಡೋಪ್ಡ್ ಬೋರೇಟ್ ಗ್ಲಾಸೆಸ್ ಫಾರ್ ರೇಡಿಯೇಷನ್ ಶೀಲ್ಡಿಂಗ್ ಅಪ್ಲಿಕೇಷನ್" ಎಂಬ ಪ್ರಬಂಧಕ್ಕೆ ಶಂಕರಘಟ್ಟ ಕುವೆಂಪು ವಿಶ್ವವಿದ್ಯಾಲಯವು ಪಿಹೆಚ್‌ಡಿ ನೀಡಿ ಗೌರವಿಸಿದೆ.

ಇವರು ತಮ್ಮ ಪ್ರಬಂಧದಲ್ಲಿ ಕಿರಣ ರಕ್ಷಣೆಗೆ ಸೂಕ್ತವಾದ ನವೀನ ಬೋರೇಟ್ ಗ್ಲಾಸ್ ವಸ್ತುಗಳ ಅಭಿವೃದ್ಧಿ ಮತ್ತು ಅವುಗಳ ಗುಣಲಕ್ಷಣಗಳನ್ನು ಸಂಶೋಧಿಸಿದ್ದಾರೆ. ಈ ಅಧ್ಯಯನವು ಕಿರಣ ರಕ್ಷಣಾ ವಸ್ತುಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವ ವಿಷಯದಲ್ಲದಿ ಮಹತ್ವದ ಮಾಹಿತಿಯನ್ನು ಒದಗಿಸುತ್ತದೆ. ಭವಿಷ್ಯದಲ್ಲಿ ಯಂತ್ರಗಳು, ವೈದ್ಯಕೀಯ ಉಪಕರಣಗಳು ಮತ್ತು ಇತರ ರೇಡಿಯೇಷನ್ ಅಪ್ಲಿಕೇಶನ್‌ಗಳಿಗೆ ಬಳಸಬಹುದಾದ ಶಿಲ್ಡಿಂಗ್ ವಸ್ತುಗಳ ಅಭಿವೃದ್ಧಿಗೆ ದಾರಿತೋರಬಹುದೆಂದು ಶ್ರೀಕಾಂತ ಬಿರಾದರ ತಿಳಿಸಿದ್ದಾರೆ.

ಶ್ರೀಕಾಂತ ಬಿರಾದರರಿಗೆ ಕಾಲೇಜಿನ ಪ್ರಾಂಶುಪಾಲರು, ಆಡಳಿತ ಮಂಡಳಿ, ಸಹೋದ್ಯೋಗಿಗಳು ಮತ್ತು ವಿದ್ಯಾರ್ಥಿಗಲು ಅಭಿನಂದಿಸಿದ್ದಾರೆ. ಸಂಶೋಧನೆಗೆ ಸಹಕರಿಸಿದ ಗುರುಗಳು, ಕಾಲೇಜು ಮತ್ತು ಮನೆಯವರ ಬೆಂಬಲಕ್ಕೆ ಶ್ರೀಕಾಂತ ಬಿರಾದರ ಧನ್ಯವಾದ ತಿಳಿಸಿದ್ದಾರೆ.

## ವಿದ್ಯೆ, ವಾಣಿಜ್ಯ, ಉದ್ಯಮದ ಮೂಲಕ ನಾಡನ್ನು ಕಟ್ಟಿದ ಧೀಮಂತ ನಾಯಕ ಎಸ್ಸೆಸ್



**ದಾವಣಗೆರೆ:** ಡಾ.ಶಾಮನೂರು ಶಿವಶಂಕರಪ್ಪ ಅವರ ನಿಧನ ವೀರಶೈವ ಲಿಂಗಾಯತ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ. ವಿದ್ಯೆ, ವಾಣಿಜ್ಯ, ಉದ್ಯಮದ ಮೂಲಕವಾಗಿ ಈ ನಾಡನ್ನು ಕಟ್ಟಿದ ಧೀಮಂತ ನಾಯಕ. ವೀರಶೈವ ಲಿಂಗಾಯತದಂತಹ ಬಹುದೊಡ್ಡ ಸಮಾಜದ ರಾಷ್ಟ್ರೀಯ ನಾಯಕರಾಗಿದ್ದರೂ ಸರ್ವಜಾತಿ, ಜನಾಂಗವನ್ನು ಪ್ರೀತಿಸುವಂತಹ ಸಾಮರಸ್ಯದ ನಾಯಕರಾಗಿದ್ದರು.

ವಿಶಾಲ ಮನೋಭಾವದವರಾಗಿದ್ದರೂ ನೇರ ನುಡಿಯ ನಿರ್ಧಾಕ್ಷಿಣ್ಯ ವ್ಯಕ್ತಿತ್ವವನ್ನು ಹೊಂದಿದ್ದ ಅಮೃತ ಪುರುಷರಾಗಿದ್ದರು. ವೈಯಕ್ತಿಕವಾಗಿ ದೈವ ಭಕ್ತರಾಗಿದ್ದರೂ ಎಂದೆಂದಿಗೂ ರಾಜಕೀಯದಲ್ಲಿ ಧಮವನ್ನು ಬಯಸದೇ ಬಹುಮುಖ ಚಿಂತನೆಯನ್ನು ಒಳಗೊಂಡಿದ್ದ ವಿಶಾಲ ಹೃದಯದವರಾಗಿದ್ದರು. ಇಂತಹ ಪರಿಪೂರ್ಣ ವ್ಯಕ್ತಿತ್ವವನ್ನು ಕರ್ನಾಟಕ ಕಳೆದುಕೊಂಡಿರುವುದು ಈ ಸಮಾಜಕ್ಕೆ ದೊಡ್ಡ ನಷ್ಟವಾಗಿದೆ.

ಎಲ್.ಎಚ್.ಅರುಣ್‌ಕುಮಾರ್, ನಿಕಟಪೂರ್ವ ಅಧ್ಯಕ್ಷರು, ಜಿಲ್ಲಾ ವಕೀಲರ ಸಂಘ, ದಾವಣಗೆರೆ.

## ವೀರ ಶೈವ ಲಿಂಗಾಯತ ಸಮುದಾಯದ ಬಹುದೂಡ್ಡ ಶಕ್ತಿ

**ಹೊನ್ನಾಳಿ** : ವೀರ ಶೈವ ಲಿಂಗಾಯತ ಸಮುದಾಯದ ಬಹುದೂಡ್ಡ ಶಕ್ತಿ ಮತ್ತು ಜನನಾಯಕ ಕಠಿಣ ಪರಿಶ್ರಮದಿಂದ ಜಿಲ್ಲೆ ಮತ್ತು ರಾಜ್ಯದಲ್ಲಿ ಬಹು ದೂಡ್ಡ ಶಿಕ್ಷಣ ಕ್ರತಿಯನ್ನು ಮಾಡಿ ರಾಜಕೀಯ ಕ್ಷೇತ್ರದಲ್ಲಿ ಬಹು ದೂಡ್ಡ ಸ್ಥಾನ ಮಾನವನ್ನು ಹೊಂದಿದ ವ್ಯಕ್ತಿ ಕೊಡುಗೈದಾನಿಗಳು ಮಾಜಿ ಲೋಕಸಭಾ ಸದಸದಯರು ಮಾಜಿ ಸಚಿವರು ಹಾಲಿ ಶಾಸಕರಾದ ಶಾಮನೂರು ಶಿವಶಂಕರಪ್ಪರವರು ಸಮಾಜದ ಏಕತೆ ಮತ್ತು ಏಳಿಗೆಗಾಗಿ ನಿರಂತರ ಶ್ರಮಿಸಿದ ಇವರ ಅಗಲಿಕೆಯಿಂದ ನಾಡು ಒಬ್ಬ ಹಿರಿಯ ಸಾಧಕ ರಾಜಕಾರಣಿಯನ್ನು ಕನ್ನಡ ನಾಡಿನ ಜನತೆ ಕಳೆದು ಕೊಂಡಿದೆ ಶ್ರೀಯುತರ ಅತ್ಮಕ್ಕೆ ದೇವರು ಚಿರಶಾಂತಿಯನ್ನು ಕರುಣಿಸಲಿ ಜೋತೆಗೆ ಅವರ ಕುಟುಂಬಕ್ಕೆ ಹಿರಿಯರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಆ ಭಗವಂತ ದಯಪಾಲಿಸಲಿ ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ತಿಳಿಸಿದರು

## ವಿವಿಧ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಹಾಸನ** : ಕರ್ನಾಟಕ ಕ್ರಿಶ್ಚಿಯನ್ ಸಮುದಾಯಅಭಿವೃದ್ಧಿ ನಿಗಮ (ನಿ) ಹಾಸನ ಜಿಲ್ಲೆ ವತಿಯಿಂದ 2025–26ನೇ ಸಾಲಿನ ಕ್ರೀಯಾಯೋಜನೆಯಲ್ಲಿಅನುಮೋದಿತ ಕಾರ್ಯಕ್ರಮಗಳಾದ ಅರಿವು ವಿದ್ಯಾಭ್ಯಾಸ ಸಾಲ ಯೋಜನೆ, ವಿದೇಶಿ ವಿದ್ಯಾಭ್ಯಾಸ ಸಾಲ ಯೋಜನೆ, ಸ್ವಾಲಂಬಿ ಸಾರಥಿಯೋಜನೆ, 'ಶ್ರಮಶಕ್ತಿ' ಯೋಜನೆ, 'ಶ್ರಮಶಕ್ತಿ' ವಿಶೇಷ ಮಹಿಳಾ ಯೋಜನೆ, ವೃತ್ತಿಪ್ರೋತ್ಸಾಹಯೋಜನೆ, ಗಂಗಾ ಕಲ್ಯಾಣಯೋಜನೆ, ವ್ಯಾಪಾರ ಉದ್ದಿಮೆ/ನೇರಸಾಲ ಯೋಜನೆ ಮತ್ತು ಮಹಿಳಾ ಸ್ವ–ಸಹಾಯ ಗುಂಪುಗಳಿಗೆ ಸಹಾಯಧನ ಯೋಜನೆಗಳಿಗೆ ಅರ್ಹ ಫಲಾನುಭವಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲುಡಿ.20ರವರೆಗೆ ವಿಸ್ತರಿಸಲಾಗಿದÉ. Website: https://kccdclonline.karnataka.gov.in ಮುಖೇನ ಅರ್ಜಿ ಸಲ್ಲಿಸಬಹುದಾಗಿರುತ್ತದೆಎಂದುಕರ್ನಾಟಕ ಕ್ರಿಶ್ಚಿಯನ್ ಸಮುದಾಯಅಭಿವೃದ್ಧಿ ನಿಗಮದಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

## ಇಂದು ರೈತರ ಕುಂದು ಕೊರತೆ ಸಭೆ

**ಹಾಸನ** : ಹಾಸನ ತಾಲ್ಲೂಕು ವ್ಯಾಪ್ತಿಯಎಲ್ಲಾರೈತಾಪಿ ವರ್ಗದವರಿಗೆ ಸಾರ್ವಜನಿಕ ಹಾಗೂ ಜನತೆಗೆ ಸಾಮಾಜಿಕ ಶೈಕ್ಷಣಿಕ ಹಾಗೂ ಕೃಷಿ ಚಟುವಟಿಕೆಗಳಿಗೆ ವಿವಿಧ ಇಲಾಖೆಗಳಲ್ಲಿ ದೊರೆಯಬೇಕಾದ ಸೌಲಭ್ಯಗಳು ನಿಗಧಿತ ಅಶವಧಿಯೊಳಗೆ ದೊರೆಯದೇಇದ್ದಾಗತಮ್ಮ ಅಹವಾಲನ್ನು ಸ್ವೀಕರಿಸಲು ಸರ್ಕಾರಏಕೀಕೃತ ಸಾರ್ವಜನಿಕದೂರು ನಿವಾರಣಾತಂತ್ರಾಂಶದಲ್ಲಿ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಿದ್ದು ಸಾರ್ವಜನಿಕರುತಮ್ಮ ಅಹವಾಲನ್ನು ಸಲ್ಲಿಸಲುಎಲ್ಲಾತಾಲ್ಲೂಕು ಮಟ್ಟದ ಅಧಿಕಾರಿಗಳು ಒಂದೆಡೆಇರುವುದರಿಂದತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ನೇರವಾಗಿತಮ್ಮ ಅಹವಾಲನ್ನುದಾಖಲಿಸಲು ತಾಲ್ಲೂಕು ಮಟ್ಟದಲ್ಲಿಡಿ.17ರಂದು ಬೆಳಿಗ್ಗೆ 10 ಗಂಟೆಗೆತಾಲ್ಲೂಕು ಪಂಚಾಯಿತಿಕಾರ್ಯಾಲಯ ಹಾಸನ ಇಲ್ಲಿರೈತರಕುಂದುಕೊರತೆ ಸಭೆಯನ್ನು ಆಯೋಜಿಸಿದ್ದು ಸದರಿ ದಿನದಂದು ಸಾರ್ವಜನಿಕರುಖುದ್ದು ಹಾಜರಾಗಿತಮ್ಮ ಅಹವಾಲನ್ನು ಸಲ್ಲಿಸಲುಹಾಸನ ತಾಲ್ಲೂಕುತಹಸೀಲ್ದಾರ್‌ಅವರು ತಿಳಿಸಿದ್ದಾರೆ.

# ಸೈಬರ್ ಭದ್ರತಾ ಕ್ಷೇತ್ರದಲ್ಲಿನ ಸಾಧನೆ



**ಚಿಕ್ಕಮಗಳೂರು:** ಜಿಲ್ಲೆಯ ಮುದಿಗೆರೆ ತಾಲೂಕಿನವನಾದ ನಿನಾದ್ ಗೌಡ ಅವರ ಸೈಬರ್ ಭದ್ರತಾ ಕ್ಷೇತ್ರದಲ್ಲಿನ ಸಾಧನೆ ಇಂದು ಅನೇಕ ಯುವಕರಿಗೆ ಪ್ರೇರಣೆಯಾಗಿದೆ. ಹಲವು ವರ್ಷಗಳ ಕನಸು, ಕಳೆದ ಮೂರು ತಿಂಗಳುಗಳ ನಿರಂತರ ಶ್ರಮ, ನಿದ್ದೆಯಿಲ್ಲದ ರಾತ್ರಿಗಳು ಮತ್ತು ಬೆಳಗ್ಗೆಯವರೆಗೆ ನಡೆದ ಪ್ರಯತ್ನಗಳ ಫಲವಾಗಿ ಅವರು ನಾಸಾ ಹಾಲ್ ಆಫ್ ಫೇಮ್ ಪಟ್ಟಿಗೆ ಸೇರ್ಪಡೆ ಗೊಂಡಿದ್ದಾರೆ.

ಈ ಪಯಣದಲ್ಲಿ ಅವರು ಅನೇಕ ಬಾರಿ ವಿಫಲರಾದರು. ಕೆಲವೊಮ್ಮೆ ಮನಸ್ಸು ಕುಗ್ಗಿತು, ಆತ್ಮವಿಶ್ವಾಸ ಕಳೆದುಕೊಂಡ ಸಂದರ್ಭಗಳೂ ಬಂದವು. ಆದರೂ ಅವರು ಪ್ರಯತ್ನವನ್ನು ಕೈಬಿಡಲಿಲ್ಲ.ಸವಾಲುಗಳು ಎದುರಾದಾಗ, ಕೈಬಿಡದಿರುವುದನ್ನು ಕಲಿಸಿದ ತಮ್ಮ ಆದರ್ಶ ವ್ಯಕ್ತಿಗಳಿಂದ ಪ್ರೇರಣೆ ಪಡೆದರು, ಲಿಯೋನೆಲ್ ಮೆಸ್ಸಿ ಸಾಧನೆ ಎಂದರೆ ನಿರಂತರತೆ.ಮಂಕಿ ಡಿ.ಲಫಿ ಎಷ್ಟೇ ಅಸಾಧ್ಯವಾಗಿದ್ದರೂ ನಿಮ್ಮ ಕನಸನ್ನು ಕೈಬಿಡಬೇಡಿ.ನಾರುತೊ ಉಜುಮಾಕಿ? ಕೈಬಿಡದವರು ತಮ್ಮ ಭಾಗ್ಯವನ್ನೇ ಮರುಬರೆಯುತ್ತಾರೆ.

"ಒಂದು ಸಲ ಇನ್ನೊಂದು ಬಾರಿ ಪ್ರಯತ್ನಿಸಿದ ಸೋಲಿಗನೇ ನಿಜವಾದ ವಿಜೇತ." ನಿನಾದ್‌ಗೌಡ ಅವರು ತಮ್ಮ ಸೈಬರ್ ಭದ್ರತಾ ಸಂಶೋಧನಾ ಕಾರ್ಯದಲ್ಲಿ ನಾಸಾದ ಒಂದು ಉಪಡೊಮೇನ್‌ನಲ್ಲಿ ಆಡಳಿತಾತ್ಮಕ ಪ್ರವೇಶಕ್ಕೆ ಸಂಬಂಧಿಸಿದ ಗಂಭೀರ ಭದ್ರತಾ ದೌರ್ಬಲ್ಯವನ್ನು ಗುರುತಿಸಿ, ಅದನ್ನು ಜವಾಬ್ದಾರಿಯುತವಾಗಿ ನಾಸಾ Vulnerability Disclosure Program ಮೂಲಕ ವರದಿ ಮಾಡಿದ್ದಾರೆ.

ಈ ಮಹತ್ವದ ಕೊಡುಗೆಗೆ ಪ್ರತಿಫಲವಾಗಿ ನಾಸಾ ? ನ್ಯಾಷನಲ್ ಏರೋನಾಟಿಕ್ಸ್ ಅಂಡ್ ಸ್ಪೇಸ್ ಆಡಳಿತವು ಅವರಿಗೆ ಅಧಿಕೃತ ಲೆಟರ್ ಆಫ್ ರೆಕಗ್ನೈಸೇಸನ್ ನೀಡಿ ಗೌರವಿಸಿದ್ದು, ಅವರ ಹೆಸರನ್ನು ನಾಸಾ ಹಾಲ್ ಆಫ್ ಫೇಮ್ ಪಟ್ಟಿಯಲ್ಲಿ ಸೇರಿಸಲಾಗಿದೆ.

ತಮ್ಮ ವಿದ್ಯಾಭ್ಯಾಸದ ಬಗ್ಗೆ ಮಾತನಾಡಿದ ಅವರು,ನಾನು ನನ್ನ 10ನೇ ತರಗತಿಯನ್ನು ಕೇಂದ್ರಿಯ ವಿದ್ಯಾಲಯ, ಚಿಕ್ಕಮಗಳೂರುನಲ್ಲಿ ಪೂರ್ಣಗೊಳಿಸಿದ್ದೇನೆ. ಪ್ರಸ್ತುತ ನಾನು ಉಜಿರೆಯ ಎಸ್‌ಡಿಎಂ ಪಾಲಿಟೆಕ್ನಿಕ್‌ನಲ್ಲಿ ಅಂತಿಮ ವರ್ಷದ ಕಂಪ್ಯೂಟರ್ ಸೈನ್ಸ್ ವಿದ್ಯಾರ್ಥಿಯಾಗಿ ಅಧ್ಯಯನ ನಡೆಸುತ್ತಿದ್ದೇನೆಂದು ತಿಳಿಸಿದರು.

ಇಷ್ಟಕ್ಕೆ ಅವರ ಪ್ರಯಾಣ ಅಂತ್ಯವಾಗಿಲ್ಲ. ಪ್ರಸ್ತುತ ಇನ್ನೂ ಎರಡು ಗಂಭೀರ ಭದ್ರತಾ ದೌರ್ಬಲ್ಯಗಳು ಪರಿಶೀಲನೆಯಲ್ಲಿದ್ದು, ಅವುಗಳ ಪರಿಹಾರ ಕಾರ್ಯವನ್ನು ನಾಸಾದ ಭದ್ರತಾ ತಂಡ ಕೈಗೊಂಡಿದೆ. ಮುಂದಿನ ದಿನಗಳಲ್ಲಿ ಅವುಗಳಿಗೂ ಮಾನ್ಯತೆ ದೊರಕುವ ಸಾಧ್ಯತೆ ಇದೆ. ಯುವಕರಿಗೆ ಸಂದೇಶ ನೀಡಿರುವ ಅವರು,"ಕನಸನ್ನು ಹಿಂಬಾಲಿಸುತ್ತಿರುವ ಎಲ್ಲರೂ ಕೈಬಿಡಬೇಡಿ. ನಿಮ್ಮ ಜೀವನವನ್ನು ಬದಲಾಯಿಸುವ ಅವಕಾಶ ಇನ್ನೊಂದು ಪ್ರಯತ್ನದ ದೂರದಲ್ಲಿರಬಹುದು" ಎಂದು ಹೇಳಿದರು.

# ರಾಷ್ಟ್ರೀಯಲೋಕ ಅದಾಲತ್: ಜಿಲ್ಲೆಯಲ್ಲಿ 1.09 ಲಕ್ಷ ಪ್ರಕರಣಗಳ ಇತ್ಯರ್ಥ

ಹಾವೇರಿ: ಜಿಲ್ಲೆಯ ನ್ಯಾಯಾಲಯಗಳಲ್ಲಿ ಶನಿವಾರ ಜರುಗಿದ ರಾಷ್ಟ್ರೀಯಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಇತ್ಯರ್ಥಕ್ಕೆ ಬಾಕಿ ಇರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳುಸೇರಿ ಇತ್ಯರ್ಥಕ್ಕೆ ಗುರುತಿಸಲ್ಪಟ್ಟ 1,53,910 ಪ್ರಕರಣಗಳಲ್ಲಿ 1,09,092 ಪ್ರಕರಣಗಳು ಇತ್ಯರ್ಥಗೊಂಡಿದ್ದು,ರೂ. 50,43,29,223 ಮೊತ್ತದ ರಾಜೀಯಾಗಿದೆ ಹಾಗೂ 16 ಕೌಟುಂಬಿಕ ಪ್ರಕರಣಗಳಲ್ಲಿ ದಂಪತಿಗಳು ರಾಜೀಮಾಡಿಕೊಂಡಿದ್ದಾರೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನುಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿರಾದಾರ ದೇವಿಂದ್ರಪ್ಪ ಎನ್. ಅವರು ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ಬಾಕಿ ಇರುವ ಇತ್ಯರ್ಥಕ್ಕೆ ಗುರುತಿಸಾದ 6,162 ಪ್ರಕರಣಗಳಪೈಕಿ 5362 ಪ್ರಕರಣಗಳು ಇತ್ಯರ್ಥಗೊಂಡಿದ್ದು, ರೂ. 27,96,43,321/–ಗಳ ರಾಜೀಯಾಗಿದೆ. ವ್ಯಾಜ್ಯಪೂರ್ವ ಪ್ರಕರಣಗಳಲ್ಲಿ ಇತ್ಯರ್ಥಕ್ಕೆ ಗುರುತಿಸಾದ 147,748 ಪ್ರಕರಣಗಳಲ್ಲಿ 1,03,730 ಪ್ರಕರಣಗಳುಇತ್ಯರ್ಥಗೊಂಡಿದ್ದು, ರೂ. 22,46,85,902/– ಗಳ ಮೊತ್ತದ ರಾಜೀಯಾಗಿದೆ.ಹಾನಗ್‌ನಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ಐದು ವರ್ಷಕ್ಕೆ ಮೇಲ್ಪಟ್ಟ ಓ.ಎಸ್.ನಂ.31/2020



ದಾವೆಯ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜಿ ಸಂದಾನದ ಮೂಲಕ ಇತ್ಯರ್ಥವಾಗಿರುತ್ತದೆ.ಹಾವೇರಿ ಜಿಲ್ಲಾ ಕೌಟಂಬಿಕ ನ್ಯಾಯಾಲಯದಲ್ಲಿ ಎರಡು, ರಾಣೇಬೆನ್ನೂರಲ್ಲಿ ಆರು, ಶಿಗ್ಗಾಂವದಲ್ಲಿ ಐದು, ಸವಣೂರನಲ್ಲಿ ಎರಡು ಹಾಗೂ ಬ್ಯಾಡಗಿಯಲ್ಲಿ ಒಂದು ಹೀಗೆ ಒಟ್ಟು 16 ಕೌಟುಂಬಿಕ ಪ್ರಕರಣಗಳಲ್ಲಿದಂಪತಿಗಳು ರಾಜಿಮಾಡಿಕೊಂಡು ಮತ್ತೆ ಒಂದಾಗಿದ್ದಾರೆ.

ಈ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಜಿಲ್ಲಾ ನ್ಯಾಯವಾದಿಗಳ ಸಂಘದ ಹಾಗೂ ಜಿಲ್ಲೆಯ ವ್ಲಾತಾಲೂಕಾ ನ್ಯಾಯವಾದಿಗಳ ಸಂಘದ ಸದಸ್ಯರು, ಹಾವೇರಿ ಜಿಲ್ಲೆಯ ಎಲ್ಲ ನ್ಯಾಯಾಧೀಶರು, ಅಭಿಯೋಜನೆ ಇಾಖೆ, ಆರಕ್ಷಕ ಇಾಖೆಯವರು, ಇತರೇ ಇಾಖೆಯವರು ಹಾಗೂ ಕಕ್ಷಿಗಾರರ ಸಹಕಾರದೊಂದಿಗೆರಾಷ್ಟ್ರೀಯ ಲೋಕ ಅದಾಲತ್ ತುಂಬಾ ಯಶಸ್ವಿಯಾಗಿ ಜರುಗಿದೆ ಎಂದು ತಿಳಿಸಿದ್ದಾರೆ. ಈ ಸಂದರ್ಭದಲ್ಲಿಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯಕಾರ್ಯದರ್ಶಿಗಳಾದ ಶ್ರೀಮತಿ ಶ್ರೀಶೈಲಜಾ ಅವರು ಉಪಸ್ಥಿತರಿದ್ದರು.

**ಎಲ್ಲ ನ್ಯಾಯಾಲಯಗಳಲ್ಲಿ ಬಾಕಿ ಇರುವ ಇತ್ಯರ್ಥಕ್ಕೆ ಗುರುತಿಸಾದ 6,162 ಪ್ರಕರಣಗಳಪೈಕಿ 5362 ಪ್ರಕರಣಗಳು ಇತ್ಯರ್ಥಗೊಂಡಿದ್ದು, ರೂ. 27,96,43,321/–ಗಳ ರಾಜೀಯಾಗಿದೆ. ವ್ಯಾಜ್ಯಪೂರ್ವ ಪ್ರಕರಣಗಳಲ್ಲಿ ಇತ್ಯರ್ಥಕ್ಕೆ ಗುರುತಿಸಾದ 147,748 ಪ್ರಕರಣಗಳಲ್ಲಿ 1,03,730 ಪ್ರಕರಣಗಳುಇತ್ಯರ್ಥಗೊಂಡಿದ್ದು, ರೂ. 22,46,85,902/– ಗಳ ಮೊತ್ತದ ರಾಜೀಯಾಗಿದೆ.**

# ವಿವಿಧ ಯೋಜನೆಗಳ ಸೌಲಭ್ಯಕ್ಕೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಹಾವೇರಿ:** ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಪ್ರಸಕ್ತ 2025–26ನೇ ಸಾಲಿನಲ್ಲಿ ಚೇತನಾ ಯೋಜನೆ, ಧನಶ್ರೀ ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ, ಮಾಜಿ ದೇವದಾಸಿ ಪುನರ್ವಸತಿ ಯೋಜನೆ ಹಾಗೂ ಉದ್ಯೋಗಿನಿ ಸೌಲಭ್ಯಕ್ಕೆ ಅರ್ಜಿ ಸಲ್ಲಿಲಸು ಅವಧಿ ವಿಸ್ತರಿಸಲಾಗಿದೆ.

ಅರ್ಹ ಮಹಿಳೆಯರು ಗ್ರಾಮ ಒನ್, ಬಾಪೂಜಿ ಸೇವಾ ಕೇಂದ್ರ, ಬೆಂಗಳೂರು ಒನ್, ಕರ್ನಾಟಕ ಒನ್ ಕೇಂದ್ರಗಳಲ್ಲಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ದಿನಾಂಕ 15–01–2026ರೊಳಗಾಗಿ ಅರ್ಜಿ ಸಲ್ಲಿಸಬೇಕು. ಧನಶ್ರೀ ಯೋಜನೆ, ಲಿಂಗತ್ವ ಅಲ್ಪ ಸಂಖ್ಯಾತರ ಪುನರ್ವಸತಿ ಯೋಜನೆಗಳಡಿ ಅರ್ಜಿಗಳನ್ನು ಆನ್ ಲೈನ್ ಮತ್ತು ಆಫ್ ಲೈನ್ ಎರಡರಲ್ಲೂ ಸಹ ಅರ್ಜಿಸಲ್ಲಿಸಲು ಅವಕಾಶ ನೀಡಲಾಗಿದೆ.ಆಫ್ ಲೈನ್ ಅರ್ಜಿಗಳನ್ನು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಆಡಳಿತ ಭವನ, ಎ–ಬ್ಲಾಕ್,2ನೇ ಮಹಡಿ, ದೇವಗಿರಿ ರಸ್ತೆ ಹಾವೇರಿ ಕಚೇರಿಗೆ ಸಲ್ಲಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಣೇಬೆನ್ನೂರ ಹಿರಿಯ ನಾಗರಿಕರ ಮೌಲ್ಯಮಾಪನಾ ಶಿಬಿರ ಸ್ಥಳ ಬದಲಾವಣೆ

**ಹಾವೇರಿ:** ಕೇಂದ್ರ ಸರ್ಕಾರದ ರಾಷ್ಟ್ರೀಯ ವಯೋಶ್ರೀ (ಖಿಗಿಜ) ಯೋಜನೆಯಡಿ ಹಾವೇರಿ ಜಿಲ್ಲಾ ವ್ಯಾಪ್ತಿಯಲ್ಲಿನ ಅರ್ಹ ಹಿರಿಯ ನಾಗರಿಕರಿಗೆ ಅಗತ್ಯವಿರುವ ಸಾಧನ ಸಲಕರಣೆಗಳನ್ನು ಗುರುತಿಸಿ ವಿತರಿಸಲು ವಿಶೇಷ ವೈದ್ಯಕೀಯ ಮೌಲ್ಯಮಾಪನಾ ಶಿಬಿರ ಡಿಸೆಂಬರ್ 16 ರಂದು ರಾಣೇಬೆನ್ನೂರು ತಾಲೂಕಿನ ತಾಲೂಕು ಆಸ್ಪತ್ರೆಯಲ್ಲಿ ಆಯೋಜಿಸಿದ ಶಿಬಿರವನ್ನು ಕಾರಣಾಂತರಗಳಿಂದ ಕನ್ನಡ ಸಾಹಿತ್ಯ ಪರಿಷತ್ತ ಭವನದಲ್ಲಿ ಆಯೋಜಿಸಲಾಗಿದೆ.

ರಾಣೇಬೆನ್ನೂರು ತಾಲೂಕಿನ ಹಿರಿಯ ನಾಗರಿಕರು ಮೌಲ್ಯಮಾಪನಾ ಶಿಬಿರಗಳ ಪ್ರಯೋಜನ ಪಡೆಯಬೇಕು. ಹೆಚ್ಚಿನ ಮಾಹಿತಿಗಾಗಿ ರಾಣೇಬೆನ್ನೂರು ತಾ.ಎಮ್.ಆರ್.ಡಬ್ಲ್ಯೂ ತಿಪ್ಪೇಶ ಗಾಡಿ ಮೊ. 9481343768 ಸಂಪರ್ಕಿಸಬಹುದೆಂದು ಜಿಲ್ಲಾ ವಿಕಲಚೇತಮರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿಆಹ್ವಾನ

**ಹಾಸನ :** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದತಲಾಒಬ್ಬ ಅಭ್ಯರ್ಥಿಗಳನ್ನು ವೃತ್ತಿತರಬೇತಿಆಯ್ಕೆಗಾಗಿಅ ರ್ಜಿಆಹ್ವಾನಿಸಲಾಗಿದೆ. ಪತ್ರಿಕೋದ್ಯಮ ಪದವೀಧರರುಅಥವಾ ಪತ್ರಿಕೋದ್ಯಮ ಸ್ನಾತಕೋತ್ತರ ಪದವೀಧರರಿಗೆ ಹಾಸನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿಯಲ್ಲಿ 2026 ರಜನವರಿಯಿಂದಡಿಸೆಂಬರ್ ವರೆಗೆ 12 ತಿಂಗಳ ಅವಧಿಯಅಪ್ರೆಂಟಿಸ್‌ತರಬೇತಿ ನೀಡಲಾಗುವುದು. ಕರ್ನಾಟಕದಲ್ಲಿಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತ್ತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್‌ಜ್ಞಾನವಿರುವಕನ್ನಡ ಭಾಷೆ ಬಳಸಲು ಪ್ರಬುದ್ಧತೆಇರುವ ಅಭ್ಯರ್ಥಿಗಳು ಮಾತ್ರಅರ್ಜಿ ಸಲ್ಲಿಸಬಹುದಾಗಿದೆ.

ಮೆರಿಟ್ ಹಾಗೂ ಸಂದರ್ಶನದಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅರ್ಜಿ ಸಲ್ಲಿಸಲು 2025 ರಡಿಸೆಂಬರ್ 26 ಕೊನೆಯ ದಿನಾಂಕವಾಗಿದೆ. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ತರಬೇತಿಯಅವಧಿ ವೇಳೆ ಮಾಹೆಯಾನ 15 ಸಾವಿರರೂಪಾಯಿ ಸ್ಟೈಫಂಡ್‌ನೀಡಲಾಗುವುದು. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದುಅವಧಿಗೆಆಯ್ಕೆ ಮಾಡಲುಅವಕಾಶವಿರುವುದಿಲ್ಲ. ವಿಶೇಷಘಟಕಯೋಜನೆಯಡಿ ಹಾಗೂ ಗಿರಿಜನಉಪಯೋಜನೆಂ ುಡಿಜಿಲ್ಲೆಯಲ್ಲಿಅರ್ಹ ಅಭ್ಯರ್ಥಿಗಳು ದೊರೆಯದೆಇದ್ದಲ್ಲಿ ನೆರೆಯ ಜಿಲ್ಲೆಗಳಿಂದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು.

ಹಿರಿಯ ಸಹಾಯಕ ನಿರ್ದೇಶಕರಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಭವನ, ಬಿ.ಎಂ. ರಸ್ತೆ ಹಾಸನ ಇಲ್ಲಿಗೆ ಡಿ.26 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿಕಚೇರಿ ಸಂಪರ್ಕಿಸಿ ಪಡೆಯಬಹುದಾಗಿದೆ.

# ತಿಮ್ಮಪ್ಪಯ್ಯನಹಳ್ಳಿ ಶಾಲೆ ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ

**ಚಳ್ಳಕೆರೆ:** ತಾಲೂಕಿನ ತಳಕು ಹೋಬಳಿ ತಿಮ್ಮಪ್ಪಯ್ಯನಹಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲಾ ಮಕ್ಕಳು ಶುಕ್ರವಾರ ಮೈಸೂರಿನಲ್ಲಿ ಆರಂಭವಾಗಿರುವ ಜಾನಪದ ನೃತ್ಯ ಪ್ರದರ್ಶನದಲ್ಲಿ ಭಾಗವಹಿಸಿದ್ದಾರೆ. ರಾಷ್ಟ್ರೀಯ ಜನಸಂಖ್ಯೆ ಶಿಕ್ಷಣ ಯೋಜನೆ ವತಿಯಿಂದ ನಡೆಯುವ ಜಾನಪದ ಚಟುವಟಿಕೆಯಲ್ಲಿ ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದಿದ್ದ ಶಾಲಾ ತಂಡ ರಾಜ್ಯ ಮಟ್ಟದ ಕಾರ್ಯಕ್ರಮದಲ್ಲಿ ಪ್ರತಿನಿಧಿಸಿದ್ದಾರೆ.

# ಬಿಸಿಯೂಟದಲ್ಲಿ ಹುಳುಗಳು ಪತ್ತೆ



**ಕೊಪ್ಪಳ:** ಕೊಪ್ಪಳ ತಾಲ್ಲೂಕಿನ ಹಳೆ ನಿಂಗಾಪುರ ಸರ್ಕಾರಿ ಶಾಲೆಯಲ್ಲಿ ಮಧ್ಯಾಹ್ನದ ಬಿಸಿಯೂಟದಲ್ಲಿ ಹುಳುಗಳು ಪತ್ತೆಯಾಗಿದ್ದು, ಈ ವಿಡಿಯೋ ಇದೀಗ ವೈರಲ್ ಆಗುತ್ತಿದೆ. ಶಾಲೆಯಲ್ಲಿ ನೀಡಲಾಗುತ್ತಿರುವ ಊಟ ಮತ್ತು ನೈರ್ಮಲ್ಯದ ಬಗ್ಗೆ ಪೋಷಕರು ಮತ್ತು ವಿದ್ಯಾರ್ಥಿಗಳು ಕಳವಳ ವ್ಯಕ್ತಪಡಿಸಿದ್ದಾರೆ.

ಹಳೆ ನಿಂಗಾಪುರ ಸರ್ಕಾರಿ ಶಾಲೆಯ ಮಕ್ಕಳಿಗೆ ಬಡಿಸಿದ ಊಟದಲ್ಲಿ ಹುಳುಗಳು ಕಂಡುಬಂದ ನಂತರ, ವಿದ್ಯಾರ್ಥಿಗಳು ಗಾಬರಿಗೊಂಡು ತಕ್ಷಣವೇ ಸಿಬ್ಬಂದಿ ಮತ್ತು ಪೋಷಕರಿಗೆ ಘಟನೆಯ ಬಗ್ಗೆ ತಿಳಿಸಿದ್ದಾರೆ. ಅಕ್ಷರ ದಾಸೋಹದ ಮೂಲಕ ಅಕ್ಕಿಯನ್ನು ವಿತರಿಸಲಾಗುತ್ತದೆ ಮತ್ತು ಅವುಗಳನ್ನು ದೀರ್ಘಕಾಲದವರೆಗೆ ಸಂಗ್ರಹಿಸಲಾಗುತ್ತದೆ ಎಂದು ಶಾಲಾ ಅಧಿಕಾರಿಗಳು ಹೇಳಿದ್ದಾರೆ.

ವಿದ್ಯಾರ್ಥಿಗಳು ಹುಳುಗಳನ್ನು ಕಂಡ ನಂತರ ಅನ್ನವನ್ನು ಎಸೆದು ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಊಟದ ಸಿಬ್ಬಂದಿಯ ನಿರ್ಲಕ್ಷ್ಯವೇ ಈ ಘಟನೆಗೆ ಕಾರಣ ಎಂದು ಅವರು ಆರೋಪಿಸಿದರು.

ಶಾಲೆಯ ಬಳಿ ಜಮಾಯಿಸಿದ ಪೋಷಕರು, ಅಕ್ಕಿ ಗುಣಮಟ್ಟವನ್ನು ಪರಿಶೀಲಿಸುತ್ತಿಲ್ಲ. ಅಡುಗೆಗೆ ಬಳಸಿರುವ ಅಕ್ಕಿಯನ್ನು ದೀರ್ಘಕಾಲದವರೆಗೆ ಸಂಗ್ರಹಿಸಿರಬಹುದು

ಶಾಲಾ ಅಭಿವೃದ್ಧಿ ಸಮಿತಿಯ ಅಧ್ಯಕ್ಷ ಹನುಮಂತಪ್ಪ ಹಟ್ಟಿ ಮಾತನಾಡಿ, ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ನಿರ್ವಹಿಸುವ ಅಕ್ಷರ ದಾಸೋಹ ಅಧಿಕಾರಿಗಳಿಂದ ಅಕ್ಕಿ ಬರುತ್ತದೆ. ಈ ವಿಷಯ ನಮ್ಮ ಗಮನಕ್ಕೆ ಬಂದಿದೆ. ನಾನು ಅಡುಗೆಯವರಿಗೆ ಕರೆ ಮಾಡಿ ಅಕ್ಕಿಯನ್ನು ಚೆನ್ನಾಗಿ ತೊಳೆದು ಬೇಯಿಸಬೇಕೆಂದು ಸೂಚಿಸಿದ್ದೇನೆ. ಹುಳುಗಳಿದ್ದರೆ ಅವರಿಗೆ ತಿಳಿಸಿ ಬದಲಾಯಿಸಬೇಕು. ಆದಾಗ್ಯೂ, ಅಕ್ಷರ ದಾಸೋಹ ಅಧಿಕಾರಿಗಳು ದಾಸ್ತಾನು ಮಾಡಿರುವ ಅಕ್ಕಿಯನ್ನು ವಿತರಿಸುವುದರಿಂದ, ಈ ಸಮಸ್ಯೆ ಉಂಟಾಗುತ್ತಿದೆ' ಎಂದು ಹೇಳಿದರು.

# ಇಂದು ದೆಹಲಿಯಲ್ಲಿ ಒಕ್ಕಲಿಗ ನಾಯಕರ ಸಭೆ



ಬೆಂಗಳೂರು: ರಾಷ್ಟಕವಿ ಕುವೆಂಪು ಅವರಿಗೆ ಭಾರತ ರತ್ನ ಪ್ರಶಸ್ತಿ ನೀಡಲು ರಾಜ್ಯ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಈ ಹಿನ್ನೆಲೆಯಲ್ಲಿ, ಒಕ್ಕಲಿಗ ನಾಯಕತ್ವ ಮತ್ತು ಇತರೆ ಗಣ್ಯರು ಡಿಸೆಂಬರ್ 17 ರಂದು ರಾಷ್ಟ ರಾಜಧಾನಿ ನವದೆಹಲಿಯಲ್ಲಿ ಸಭೆ ನಡೆಸುತ್ತಿದ್ದಾರೆಂದು ತಿಳಿದುಬಂದಿದೆ.

ಕರ್ನಾಟಕ ಸಂಘ ಮತ್ತು ಮೈಸೂರಿನ ಕುವೆಂಪು ವಿಶ್ವಮಾನವ ಕ್ಷೇಮಾಭಿವೃದ್ಧಿ ಟ್ರಸ್ಟ್ ಆಯೋಜಿಸಿರುವ ಪದ್ಮವಿಭೂಷಣ ಕುವೆಂಪು ಕುರಿತ ಕಾರ್ಯಾಗಾರದಲ್ಲಿ ಆದಿಚುನಾನಗಿರಿಯ ಶ್ರೀ ನಿರ್ಮಲಾನಂದನಾಥ ಸ್ವಾಮಿಗಳು ಹಾಗೂ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಭಾಗವಹಿಸಲಿದ್ದಾರೆ.

ಕೇಂದ್ರವು ಕುವೆಂಪು ಅವರಿಗೆ ಮರಣೋತ್ತರವಾಗಿ ಭಾರತ ರತ್ನ ನೀಡಬೇಕೆಂದು ಒತ್ತಾಯಿಸುವ ನಿರ್ಣಯವನ್ನು ಸಭೆಯಲ್ಲಿ ಅಂಗೀಕರಿಸಲಾಗುವುದು ಎಂದು ಮೂಲಗಳು ತಿಳಿಸಿವೆ.

ಸಭೆಯಲ್ಲಿ ಬಿಜೆಪಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಬಿ.ಎಲ್.ಸಂತೋಷ್, ಕೇಂದ್ರ ಸಚಿವರಾದ ಗಜೇಂದ್ರ ಸಿಂಗ್ ಶೇಖಾವತ್, ಎಚ್.ಡಿ.ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ, ಪ್ರಲ್ಹಾದ್ ಜೋಶಿ, ಮತ್ತು ವಿ.ಸೋಮಣ್ಣ, ಬಿಜೆಪಿ ಸಂಸದರಾದ ಡಾ.ಸಿ.ಎನ್.ಮಂಜುನಾಥ್, ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ತೇಜಸ್ವಿ ಸೂರ್ಯ, ಮಾಜಿ ಸಿಎಂ ಎಂ.ವೀರಪ್ಪ ಮೊಯ್ಲಿ, ಟಿ.ಬಿ.ಜಯಚಂದ್ರ, ಚಂದ್ರಶೇಖರ ಕಂಬಾರ, ನಾಡೋಜ ಹಂಪ ನಾಗರಾಜಯ್ಯ, ಕೇಂದ್ರ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಡಾ.ಮಾಧವ ಕೌಶಿಕ್ ಸೇರಿದಂತೆ ಮತ್ತಿತರರು ಭಾಗವಹಿಸುವ ನಿರೀಕ್ಷೆ ಇದೆ.

# ಕಳೆದ ಎರಡೂವರೆ ವರ್ಷಗಳಲ್ಲಿ 2,800ಕ್ಕೂ ಹೆಚ್ಚು ರೈತರು ಆತ್ಮಹತ್ಯೆ, ದೇಶದಲ್ಲಿ 2ನೇ ಸ್ಥಾನದಲ್ಲಿ ಕರ್ನಾಟಕ: ಸಚಿವ ಚಲುವರಾಯಸ್ವಾಮಿ

**ಬೆಂಗಳೂರು:** 2023–24 ರಿಂದ ಇದುವರೆಗೆ ಕರ್ನಾಟಕದಲ್ಲಿ ಒಟ್ಟು 2,809 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರೈತರ ಆತ್ಮಹತ್ಯೆ ಪ್ರಕರಣದಲ್ಲಿ ರಾಜ್ಯವು ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿದೆ ಎಂದು ಸಚಿವ ಎನ್. ಚೆಲುವರಾಯಸ್ವಾಮಿ ರಾಜ್ಯ ವಿಧಾನಸಭೆಗೆ ತಿಳಿಸಿದ್ದಾರೆ.

ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಬಿಜೆಪಿ ಶಾಸಕ ಅರವಿಂದ್ ಬೆಲ್ಲದ್ ಅವರ ಪ್ರಶ್ನೆಗೆ ಲಿಖಿತ ಉತ್ತರ ನೀಡಿದ ಕೃಷಿ ಸಚಿವರು, 2023–24ರಲ್ಲಿ 1,254 ರೈತರ ಆತ್ಮಹತ್ಯೆಗಳು ವರದಿಯಾಗಿವೆ. 2024–25ರಲ್ಲಿ 1,178 ಮತ್ತು 2025–26ರಲ್ಲಿ ಅಂದರೆ ಪ್ರಸಕ್ತ ವರ್ಷ ಇಲ್ಲಿಯವರೆಗೆ 377 ಪ್ರಕರಣಗಳು ದಾಖಲಾಗಿವೆ ಎಂದು ಹೇಳಿದರು.

ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ (ಓಅಖಃ) ಪ್ರಕಾರ, ಕರ್ನಾಟಕವು ರೈತರ ಆತ್ಮಹತ್ಯೆಯಲ್ಲಿ ರಾಷ್ಟ್ರಮಟ್ಟದಲ್ಲಿ ಎರಡನೇ ಸ್ಥಾನದಲ್ಲಿದೆ. ಆದರೂ ಹಿಂದಿನ ಮೂರು ವರ್ಷಗಳಿಗೆ ಹೋಲಿಸಿದರೆ ಆತ್ಮಹತ್ಯೆ ಪ್ರಕರಣದಲ್ಲಿ ಇಳಿಕೆ ಕಂಡುಬಂದಿದೆ ಎಂದರು.

ಸಚಿವರು ಸದನದಲ್ಲಿ ನೀಡಿದ ದತ್ತಾಂಶದ ಪ್ರಕಾರ, ಹಾವೇರಿಯಲ್ಲಿ ಅತಿ ಹೆಚ್ಚು ಆತ್ಮಹತ್ಯೆ ಪ್ರಕರಣಗಳು ವರದಿಯಾಗಿವೆ. ಇದರಲ್ಲಿ 297 ಪ್ರಕರಣಗಳು, ನಂತರ ಬೆಳಗಾವಿಯಲ್ಲಿ 259, ಕಲಬುರಗಿಯಲ್ಲಿ 234, ಧಾರವಾಡದಲ್ಲಿ 195 ಮತ್ತು ಮೈಸೂರಿನಲ್ಲಿ 190 ಪ್ರಕರಣಗಳು ದಾಖಲಾಗಿವೆ.



ಪರಿಹಾರದ ವಿಷಯದಲ್ಲಿ, ರಾಜ್ಯ ಸರ್ಕಾರವು 2023–24ರಲ್ಲಿ 1,081 ಅರ್ಹ ರೈತ ಕುಟುಂಬಗಳಿಗೆ 54 ಕೋಟಿ ರೂಪಾಯಿ, 2024–25ರಲ್ಲಿ 896 ಕುಟುಂಬಗಳಿಗೆ 44.8 ಕೋಟಿ ರೂಪಾಯಿ ಮತ್ತು 2025–26ರಲ್ಲಿ (ನವೆಂಬರ್ ವರೆಗೆ) 193 ಕುಟುಂಬಗಳಿಗೆ 9.65 ಕೋಟಿ ರೂಪಾಯಿ ಪರಿಹಾರವನ್ನು ವಿತರಿಸಿದೆ. 112 ಪ್ರಕರಣಗಳು ಇನ್ನೂ ಪರಿಶೀಲನೆಯಲ್ಲಿವೆ ಎಂದರು.

ತಾಂತ್ರಿಕ ಸಮಸ್ಯೆಗಳಿಂದಾಗಿ ಪರಿಹಾರ ಪಾವತಿ ವಿಳಂಬವಾಗಿದೆ. ಒಮ್ಮೆ ಪರಿಹಾರವಾದರೆ, ಪಾವತಿಗಳನ್ನು ತ್ವರಿತವಾಗಿ ಮಾಡಲಾಗುವುದು ಎಂದರು. 2023–24ರಲ್ಲಿ ವರದಿಯಾದ 1,254 ಆತ್ಮಹತ್ಯೆಗಳಲ್ಲಿ 164 ಪ್ರಕರಣಗಳನ್ನು ತಿರಸ್ಕರಿಸಲಾಗಿದೆ. 1,090 ಕುಟುಂಬಗಳನ್ನು ಪರಿಹಾರಕ್ಕೆ ಅರ್ಹರೆಂದು ಪರಿಗಣಿಸಲಾಗಿದೆ.

2024–25ರಲ್ಲಿ 156 ಪ್ರಕರಣಗಳನ್ನು ತಿರಸ್ಕರಿಸಲಾಗಿದ್ದು, 1,022 ಕುಟುಂಬಗಳು ಸರ್ಕಾರದ ಆರ್ಥಿಕ ಬೆಂಬಲಕ್ಕೆ ಅರ್ಹವಾಗಿವೆ. ಪ್ರಸ್ತುತ ಹಣಕಾಸು ವರ್ಷದಲ್ಲಿ (2025–26) 377 ಆತ್ಮಹತ್ಯೆಗಳಲ್ಲಿ 46 ಪ್ರಕರಣಗಳನ್ನು ತಿರಸ್ಕರಿಸಲಾಗಿದೆ ಮತ್ತು 310 ಕುಟುಂಬಗಳು ಪರಿಹಾರಕ್ಕೆ ಅರ್ಹವಾಗಿವೆ ಎಂದು ಪರಿಗಣಿಸಲಾಗಿದೆ.

2024–25ರಲ್ಲಿ 156 ಪ್ರಕರಣಗಳನ್ನು ತಿರಸ್ಕರಿಸಲಾಗಿದ್ದು, 1,022 ಕುಟುಂಬಗಳು ಬೆಂಬಲಕ್ಕೆ ಅರ್ಹವಾಗಿವೆ. ಪ್ರಸ್ತುತ ಹಣಕಾಸು ವರ್ಷದಲ್ಲಿ (2025–26), 377 ಆತ್ಮಹತ್ಯೆಗಳಲ್ಲಿ 46 ಪ್ರಕರಣಗಳನ್ನು ತಿರಸ್ಕರಿಸಲಾಗಿದೆ. 310 ಕುಟುಂಬಗಳು ಪರಿಹಾರಕ್ಕೆ ಅರ್ಹವಾಗಿವೆ ಎಂದು ಪರಿಗಣಿಸಲಾಗಿದೆ.

## ವಿರೋಧ ಪಕ್ಷ ನಾಯಕ ವಿಜಯೇಂದ್ರ ಖಂಡನೆ



ರೈತರ ಆತ್ಮಹತ್ಯೆಯ ವಿಷಯದಲ್ಲಿ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರವು ನಿರ್ಲಕ್ಷ್ಯ ತೋರಿಸಿದೆ ಎಂದು ಬಿಜೆಪಿ ರಾಜ್ಯ ಅಧ್ಯಕ್ಷ ಬಿ ವೈ ವಿಜಯೇಂದ್ರ ಆರೋಪಿಸಿದರು.


ರೈತರ ಸಂಕಷ್ಟವನ್ನು ಪರಿಹರಿಸುವಲ್ಲಿ ವಿಫಲವಾಗಿರುವ ಈ ಭ್ರಷ್ಟ ಕಾಂಗ್ರೆಸ್ ಸರ್ಕಾರದ ನಿರ್ಲಕ್ಷ್ಯಕ್ಕೆ ಕ್ಷಮೆಯಿಲ್ಲ. ಕಳೆದ ಎರಡೂವರೆ ವರ್ಷಗಳಲ್ಲಿ, ಕರ್ನಾಟಕವು ರೈತರ ಆತ್ಮಹತ್ಯೆಯಲ್ಲಿ ಎರಡನೇ ಸ್ಥಾನದಲ್ಲಿರುವುದು ತೀವ್ರ ದುಃಖಕರ ಸಂಗತಿ ಎಂದು ಎಕ್ಸ್ ಪೋಸ್ಟ್ ನಲ್ಲಿ ತಿಳಿಸಿದ್ದಾರೆ.

ಕಾಂಗ್ರೆಸ್ ಆಡಳಿತದಲ್ಲಿ 2,809 ರೈತರು ಪ್ರಾಣ ಕಳೆದುಕೊಂಡಿದ್ದಾರೆ ಎಂಬುದು ಆಘಾತಕಾರಿ ವಿಷಯ ಎಂದಿದ್ದಾರೆ.

# ಮಾನಸಿಕ ಒತ್ತಡ ನಿರ್ವಹಣೆ ಕುರಿತು ಆನ್‌ಲೈನ್ ಪಾಡ್‌ಕಾಸ್ಟ್ ವಿಡಿಯೋ ಸಂವಾದ

**ಶಿವಮೊಗ್ಗ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ಸಹಯೋಗದೊಂದಿಗೆ ಡಿ.12 ರಂದು ಇನ್‌ಸ್ಪೈರ್ ಎಂಬ ವಿನೂತನ ಕಾರ್ಯಕ್ರಮದಡಿ ಇಗ್ನೈಟ್ ಮೈಂಡ್ & ಇಗ್ನೈಟ್ ಪಾಸಿಟಿವಿಟಿ ಎಂಬ ಘೋಷವಾಕ್ಯದೊಂದಿಗೆ ಆನ್‌ಲೈನ್ ಪಾಡ್‌ಕಾಸ್ಟ್ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ 32 ಮುರಾರ್ಜಿ ದೇಸಾಯಿ ವಸತಿ ಶಾಲೆಗಳು ಮತ್ತು



183 ವಿದ್ಯಾರ್ಥಿ ನಿಲಯಗಳ 5 ನೇ ತರಗತಿಯಿಂದ ಪದವಿ/ಇಂಜಿನಿಯರಿಂಗ್/ಸ್ನಾತಕೋತ್ತರ ಓದುತ್ತಿರುವ ಸುಮಾರು 13 ರಿಂದ 15 ಸಾವಿರ ವಿದ್ಯಾರ್ಥಿಗಳೊಂದಿಗೆ ವಿಡಿಯೋ ಸಂವಾದದ ಮೂಲಕ ಮಕ್ಕಳ ಮಾನಸಿಕ ಒತ್ತಡ ನಿರ್ವಹಣೆ ತಜ್ಞರು ಹಾಗೂ ಆಪ್ತಸಮಾಲೋಚಕರಾದ ಆರ್ ನಾಗೇಶ್ ಇವರು ವಿದ್ಯಾರ್ಥಿಗಳ ಮಾನಸಿಕ ಒತ್ತಡ ನಿರ್ವಹಣೆ, ಆತ್ಮಜ್ಞಾನ, ಕೌಶಲ್ಯಗಳು, ಕನಸುಗಳು, ಕ್ರಿಯಾಶೀಲತೆ, ಸೃಜನಶೀಲತೆ, ಕಲಿಕೆ, ವಿದ್ಯಾರ್ಥಿಗಳ ನಡವಳಿಕೆ, ಒಳ್ಳೆಯ ಹವ್ಯಾಸಗಳು ಮತ್ತು ಕೆಟ್ಟ ಹವ್ಯಾಸಗಳಿಂದಾಗುವ ಪರಿಣಾಮಗಳು, ಹಠಮಾರಿತನದಿಂದಾಗುವ ದುಷ್ಪರಿಣಾಮಗಳು, ಜೀವನದಲ್ಲಿ ಒಳ್ಳೆಯ ಆದರ್ಶಗಳನ್ನು ಹೇಗೆ ಅಳವಡಿಸಿಕೊಳ್ಳಬೇಕು, ವಿದ್ಯಾರ್ಥಿಗಳ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾದ ಧ್ಯೇಯ ಹಾಗೂ ಗುರಿ ಹಾಗೂ ನೀವಂದುಕೊಂಡಂತೆ ನೀವಾಗಿ 'ಬಿದ ದ ಪರ್ಸನ್ ಆಫ್ ಯುವರ್ ಚಾಯ್ಸ್–ಗೋಲ್ ಸೆಟ್ಟಿಂಗ್ ಕುರಿತು ವಿವರಣೆ ನೀಡಿದರು.

ಈ ಆನ್‌ಲೈನ್ ಪಾಡ್‌ಕಾಸ್ಟ್ ವಿಡಿಯೋ ಸಂವಾದದಲ್ಲಿ ಜಿ.ಪಂ ಸಿಇಓ ಹೇಮಂತ್ ಎನ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶ್ರೀನಿವಾಸ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಲ್ಲೇಶಪ್ಪ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಶೋಭಾ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರೀತಿ ಭಾಗವಹಿಸಿದ್ದರು.

## ಬಿಡಾಡಿ ದನಕರುಗಳನ್ನು ಸುಪರ್ದಿಯಲ್ಲಿಯೇ ಕಟ್ಟಿಕೊಳ್ಳಿ

**ಬಳ್ಳಾರಿ:** ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿನ ಬಿಡಾಡಿ ದನಕರುಗಳ ಮಾಲೀಕರು ತಮ್ಮ ಮನೆಯಲ್ಲಿಯೇ ಕಟ್ಟಿಕೊಂಡು ಪೋಷಿಸಬೇಕು ಎಂದು ಸಿರುಗುಪ್ಪ ನಗರಸಭೆ ಪೌರಾಯುಕ್ತ ಗಂಗಾಧರ ಅವರು ತಿಳಿಸಿದ್ದಾರೆ.

ಸಿರುಗುಪ್ಪ ಪಟ್ಟಣದಲ್ಲಿ ಬಿಡಾಡಿ ದನಕರುಗಳ ಹಾವಳಿ ಹೆಚ್ಚಾಗಿದ್ದು, ರಸ್ತೆ ಸೇರಿದಂತೆ ಸಾರ್ವಜನಿಕರಿಗೆ, ವಾಹನ ಸವಾರರಿಗೆ ಸಮಸ್ಯೆಯಾಗುತ್ತಿದೆ. ಹಾಗಾಗಿ ಮಾಲೀಕರು ತಮ್ಮ ತಮ್ಮ ದನಕರುಗಳನ್ನು ತಮ್ಮ ಸುಪರ್ದಿಯಲ್ಲಿಯೇ ಕಟ್ಟಿಕೊಳ್ಳಬೇಕು.

ತಪ್ಪಿದಲ್ಲಿ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

**ಬಳ್ಳಾರಿ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ವಿಷಯ ವ್ಯಾಸಂಗ ಮಾಡಿರುವ ಪದವಿ, ಸ್ನಾತಕೋತ್ತರ ಪದವಿಧರರಿಗೆ ಬಳ್ಳಾರಿ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಲ್ಲಿ ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ತರಬೇತಿಗಾಗಿ ಕರ್ನಾಟಕದಲ್ಲಿ ಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದು. ಮೆರಿಟ್ ಹಾಗೂ ಸಂದರ್ಶನದ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅರ್ಜಿ ಲಕೋಟೆಯ ಮೇಲೆ ಕಡ್ಡಾಯವಾಗಿ ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಎಂದು ನಮೂದಿಸಬೇಕು.

ಆಯ್ಕೆಯಾದ ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಆಯ್ಕೆಯಾಗಿ ತರಬೇತಿಗೆ ಹಾಜರಾಗುವ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ಬಳ್ಳಾರಿ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಅಭ್ಯರ್ಥಿಗಳು ಸ್ನಾತಕೋತ್ತರ ಅಂತಿಮ ವರ್ಷದ ಪದವಿಯ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸಬೇಕು. ಅಂಕಪಟ್ಟಿಯನ್ನು ನಿರೀಕ್ಷಿಸಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.

ತರಬೇತಿಯ ಅವಧಿ ವೇಳೆ ಮಾಹೆಯಾನ 15,000 ರೂ. (ಹದಿನೈದು ಸಾವಿರ ರೂಪಾಯಿಗಳು ಮಾತ್ರ) ಗಳ ಶಿಷ್ಯವೇತನ ನೀಡಲಾಗುವುದು. ಅವಧಿ ಈ ತರಬೇತಿಯು 2026ರ ಕ್ಯಾಲೆಂಡರ್ ಅವಧಿಯ ಜನವರಿ-2026ರ ಮಾಹೆಯಿಂದ ಪ್ರಾರಂಭಗೊಂಡು ಡಿಸೆಂಬರ್-2026ಕ್ಕೆ ಕೊನೆಗೊಳ್ಳಲಿದೆ. ಈ ತರಬೇತಿಯು 12 ತಿಂಗಳ ಅಪ್ರೆಂಟಿಸ್ ತರಬೇತಿಯಾಗಿದ್ದು, ತಾತ್ಕಾಲಿಕವಾಗಿರುತ್ತದೆ.

ತರಬೇತಿಯ ಅವಧಿಯಲ್ಲಿ ಬೇರೆ ಉದ್ಯೋಗ ಮಾಡುವಂತಿಲ್ಲ. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ.

ಆಸಕ್ತರು ಅರ್ಜಿಯನ್ನು 2025ರ ಡಿಸೆಂಬರ್ 26 ರೊಳಗಾಗಿ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ ಆವರಣ, ಬಳ್ಳಾರಿ ಇಲ್ಲಿಗೆ ಸಲ್ಲಿಸಬಹುದಾಗಿದೆ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಿಂದ ಪಡೆಯಬಹುದು ಎಂದು ಹಿರಿಯ ಸಹಾಯಕ ನಿರ್ದೇಶಕ ತುಕಾರಾಂ ರಾವ್ ಬಿ.ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿರುಗುಪ್ಪ ನಗರಸಭೆ: ಬೀದಿನಾಯಿ ದತ್ತು ಪಡೆದು ಪೋಷಿಸಲು ಆಸಕ್ತರಿದ್ದಲ್ಲಿ ಸಂಪರ್ಕಿಸಿ

**ಬಳ್ಳಾರಿ:** ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿನ ಬೀದಿನಾಯಿಗಳನ್ನು ದತ್ತು ಪಡೆದು ಪೋಷಣೆ ಮಾಡಲು ಇಚ್ಚಿಸುವವರು ಹಾಗೂ ಆಶ್ರಣ ತಾಣದಲ್ಲಿರುವ ಬೀದಿನಾಯಿಗಳಿಗೆ ಆಹಾರ ಪೂರೈಸಲು ಇಚ್ಚಿಸುವ ಪ್ರಾಣಿಗಳ ಸಂರಕ್ಷಣೆ ಸಂಕಲ್ಪ ಹೊಂದಿರುವವರು, ಪ್ರಾಣಿಗಳ ಮೇಲೆ ದಯೆ ಇರುವವರು ಕೂಡಲೇ ಸಿರುಗುಪ್ಪ ನಗರಸಭೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದಾಗಿದೆ.

ಬೀದಿನಾಯಿಗಳಿಂದ ಸಾರ್ವಜನಿಕರಿಗೆ ಹಾಗೂ ಸಂಚರಿಸುವ ವಾಹನ ಸವಾರರಿಗೆ ಆಗುವ ತೊಂದರೆ ನಿಯಂತ್ರಿಸಲು ನಗರಸಭೆ ವತಿಯಿಂದ ಹಿಡಿದು ಅವುಗಳನ್ನು ಆಶ್ರಯತಾಣಕ್ಕೆ ಸಾಗಿಸಲಾಗುತ್ತಿದೆ. ಹಾಗಾಗಿ ಆಶ್ರಣ ತಾಣದಲ್ಲಿರುವ ಬೀದಿನಾಯಿಗಳಿಗೆ ಆಹಾರ ಪೂರೈಸಲು ಇಚ್ಚಿಸುವವರು ಇದ್ದಲ್ಲಿ ಎನ್.ಜಿ.ಓ ಸಂಘ ಸಂಸ್ಥೆಗಳು, ಪ್ರಾಣಿದಯಾ ಸಂಘಗಳು ಹಾಗೂ ಇತರೆ ಪ್ರಾಣಿ ಪ್ರಿಯರು ಸಿರುಗುಪ್ಪ ನಗರಸಭೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದು ಎಂದು ಸಿರುಗುಪ್ಪ ನಗರಭೆಯ ಪೌರಾಯುಕ್ತ ಗಂಗಾಧರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.18 ಜಿಲ್ಲಾಮಟ್ಟದ ಪ್ರಬಂಧ ಸ್ಪರ್ಧೆ

**ಚಿಕ್ಕಮಗಳೂರು:** ರಾಷ್ಟ್ರೀಯ ಮತದಾರರ ದಿನಾಚರಣೆಯ ಅಂಗವಾಗಿ ತಾಲ್ಲೂಕು ಹಂತದಲ್ಲಿ ನಡೆದ ಕನ್ನಡ ಪ್ರಬಂಧ ಸ್ಪರ್ಧೆಯಲ್ಲಿ ಪ್ರೌಢಶಾಲಾ ವಿಭಾಗ, ಪದವಿ ಪೂರ್ವ ವಿಭಾಗ ಮತ್ತು ಪದವಿ ಮತ್ತು ಸ್ನಾತಕೋತ್ತರ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದು ವಿಜೇತರಾದ ವಿದ್ಯಾರ್ಥಿಗಳಿಗೆ ಡಿಸೆಂಬರ್ 18 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಬಸವನಹಳ್ಳಿಯ ಸರ್ಕಾರಿ ಬಾಲಕಿಯರ ಪ.ಪೂ.ಕಾಲೇಜಿ(ಪ್ರೌಢಶಾಲಾ ವಿಭಾಗ) ನಲ್ಲಿ ಜಿಲ್ಲಾ ಹಂತದ ಕನ್ನಡ ಪ್ರಬಂಧ ಸ್ಪರ್ಧೆಯನ್ನು ಆಯೋಜನೆ ಮಾಡಲಾಗಿದೆ.

2025-26 ನೇ ಸಾಲಿಗೆ ಭವಿ?ದ ಯುವ ಮತದಾರರಲ್ಲಿ ಚುನಾವಣೆ ಮತ್ತು ಮತದಾನ ಪ್ರಕ್ರಿಯೆಗಳಿಗೆ ಸಂಬಂಧಿಸಿದಂತೆ ಜಾಗೃತಿ ಮೂಡಿಸುವ ಸಲುವಾಗಿ ಸಾಕ್ಷರತಾ ಸಂಘಗಳ ಮೂಲಕ ಈ ಸ್ಪರ್ಧೆಯನ್ನು ಆಯೋಜಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಶುಪಾಲನೆಯಲ್ಲಿ ಉದ್ಯಮಶೀಲತೆ, ವಿನೂತನ ತಂತ್ರಜ್ಞಾನಗಳ ತರಬೇತಿ

**ಗದಗ:** ಪಶುವೈದ್ಯಕೀಯ ಮಹಾವಿದ್ಯಾಲಯ, ಗದಗನಲ್ಲಿ ಪಶುಪಾಲಕ ರೈತರಿಗೆ ಮತ್ತು ಆಸಕ್ತ ಯುವಕ-ಯುವತಿಯರಿಗೆ ಪಶುಪಾಲನೆಯಲ್ಲಿ ಉದ್ಯಮಶೀಲತೆ ಮತ್ತು ವಿನೂತನ ತಂತ್ರಜ್ಞಾನಗಳು ಎಂಬ ವಿಷಯದ ಕುರಿತು ಡಿ. 22 ರಿಂದ ಡಿ. 23ರ ವರೆಗೆ ಎರಡು ದಿನಗಳ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ. ತರಬೇತಿಯು ಉಚಿತವಾಗಿರುತ್ತದೆ, ತರಬೇತಿಗೆ ಮುಂಚಿತವಾಗಿಯೇ ನೊಂದಾಯಿಸುವುದು ಕಡ್ಡಾಯ,

ಆಸಕ್ತ ರೈತರು ಸದರಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಲು, ಮೊಬೈಲ್, ವಾಟ್ಸಪ್ ಅಥವಾ ಈ-ಮೇಲ್ ಮೂಲಕ ತಮ್ಮ ವಿವರಗಳನ್ನು ಕಳುಹಿಸಿ ನೊಂದಣಿ ಮಾಡಿಸಬೇಕು. ತರಬೇತಿಯ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಪಶುವೈದ್ಯಕೀಯ ವಿಸ್ತರಣ ಶಿಕ್ಷಣ ವಿಭಾಗ, ಪಶುವೈದ್ಯಕೀಯ ಮಹಾವಿದ್ಯಾಲಯದ ಮುಖ್ಯಸ್ಥರು ಡಾ.ಶಿವಕುಮಾರ ಕ ರಡ್ಡೇರ, ಸಂಪರ್ಕಿಸಬಹುದಾಗಿದೆ

# ವಸಾಹತು ಶಾಹಿ ವಿಸ್ತರಣಾ ತಂತ್ರಗಳನ್ನರಿಯಲು ಭಾರತೀಯರು ವಿಫಲ

**ಗದಗ:** ಬಹುತ್ವ ರಾಜಕೀಯ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಹೊಂದಿರುವ ಭಾರತಕ್ಕೆ ವ್ಯಾಪಾರಕ್ಕಾಗಿ ಆಗಮಿಸಿದ ವಸಾಹತುಶಾಹಿಗಳಲ್ಲಿ ಬ್ರಿಟಿಷರು ತಮ್ಮ ಪ್ರಾಬಲ್ಯ ಸಾಧಿಸಲು 'ಒಡೆದು ಆಳುವ' ನೀತಿಯನ್ನು ಅನುಸರಿಸಿ ಯಶಸ್ವಿಯಾಗಿ ಬಹುಕಾಲದವರೆಗೆ ಭಾರತವನ್ನಾಳಿದರೆಂದು ಮುಳಗುಂದದ ಆರ್.ಎನ್. ದೇಶಪಾಂಡೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಪ್ರಾಧ್ಯಾಪಕ ಪ್ರೊ. ಕೆ.ಎಂ. ಶಿರೂರ ಹೇಳಿದರು. ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗವು ಐಕ್ಯುಎಸಿ ಅಡಿಯಲ್ಲಿ ಆಯೋಜಿಸಿದ್ದ




'ಭಾರತದಲ್ಲಿ ವಸಾಹತುಶಾಹಿ ವಿಸ್ತರಣೆಗೆ ನಡೆದ ಯುದ್ಧಗಳು' ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡುತ್ತ, ವಸಾಹತುಶಾಹಿಗಳು ಭಾರತದಲ್ಲಿ ರಾಜಕೀಯ ಮತ್ತು ಆರ್ಥಿಕವಾಗಿ ಪ್ರಭುತ್ವ ಸಂಪಾದಿಸಲು ಭಾರತೀಯ ಅರಸರ ದೌರ್ಬಲ್ಯಗಳು ಮತ್ತು ಸಾಮಾಜಿಕ ವ್ಯವಸ್ಥೆಯ ಭಿನ್ನಾಭಿಪ್ರಾಯಗಳನ್ನು ಅಸ್ತ್ರಗಳನ್ನಾಗಿ ಬಳಸಿಕೊಂಡರು. ಅವರ ತಂತ್ರಗಳನ್ನು ಅರಿಯಲು ಭಾರತೀಯ ಅರಸರು ವಿಫಲರಾದರೆಂದು ಹೇಳಿದರು.

ಇತಿಹಾಸ ವಿಭಾಗದ ಮುಖ್ಯಸ್ಥ ಪ್ರೊ. ಅಪ್ಪಣ್ಣ ಹಂಜೆ ಪ್ರಾಸ್ತಾವಿಕವಾಗಿ ಮಾತನಾಡುತ್ತ, ಭಾರತಕ್ಕೆ ವ್ಯಾಪಾರಕ್ಕಾಗಿ ಆಗಮಿಸಿದ ವಸಾಹತುಶಾಹಿಗಳಲ್ಲಿ ಬ್ರಿಟಿಷರು ವ್ಯಾಪಾರದಲ್ಲಿ ತಮ್ಮೊಂದಿಗೆ ಪೈಪೋಟಿ ನಡೆಸಿದ್ದ ಪೋರ್ಚುಗೀಸರು, ಡಚ್ಚರು, ಡೇನರು, ಫ್ರೇಂಚರನ್ನು ರಾಜಕೀಯ ತಂತ್ರಗಳಿಂದ ಹೊರಹಾಕಿ ಸ್ಥಳೀಯ ಅರಸರನ್ನು ಯುದ್ಧಗಳಲ್ಲಿ ಸೋಲಿಸಿ ಭಾರತವನ್ನು ತಮ್ಮ ನಿಯಂತ್ರಣಕ್ಕೆ ತೆಗೆದುಕೊಳ್ಳಲು ಕೈಗೊಂಡ ತಂತ್ರಗಳು ಭಾರತೀಯರ ಏಕತೆಯನ್ನು ನಾಶಪಡಿಸಿದವು ಎಂದು ಹೇಳಿದರು. ಕಾರ್ಯಕ್ರಮವನ್ನು ಉದ್ಘಾಟಿಸಿದ ಐಕ್ಯುಎಸಿ ಸಂಚಾಲಕ ಡಾ. ಜಿತೇಂದ್ರ ಜಹಗೀರದಾರ ವಿದ್ಯಾರ್ಥಿಗಳು ಇತಿಹಾಸವನ್ನು ಕೇವಲ ಪರೀಕ್ಷೆಗೆ ಓದದೆ ಸಮಕಾಲೀನ ಮೌಲ್ಯಗಳನ್ನು ಅರಿಯಲು ಓದಬೇಕೆಂದು ಹೇಳುತ್ತ, ಇತಿಹಾಸವು ಭವಿಷ್ಯತ್ತನ್ನು ಸಮರ್ಪಕವಾಗಿ ರೂಪಿಸಿಕೊಳ್ಳಲು ಹೆದ್ದಾರಿಯಾಗಿದೆ ಎಂದು ಹೇಳಿದರು. ಇತಿಹಾಸ ವಿಭಾಗದ ಪ್ರಾಧ್ಯಾಪಕ ಪ್ರೊ. ಬಸವಂತಪ್ಪ ದೊಡ್ಡಮನಿ ಕಾರ್ಯಕ್ರಮ ನಡೆಸಿಕೊಟ್ಟರು. ಇತಿಹಾಸ ವಿಭಾಗದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಎಸ್.ಎಸ್.ಎಲ್.ಸಿ. ಶಿಕ್ಷಣ ಕ್ಷೇತ್ರ ಮಕ್ಕಳ ಜೀವನದ ಒಂದು ತಿರುವು- ಪ್ರಶಾಂತ್ ಕೆ.ಎಸ್.

**ದಾವಣಗೆರೆ:** ವಿದ್ಯಾರ್ಥಿ, ವಿದ್ಯಾರ್ಥಿನಿಯರು ಮೊಬೈಲ್ ಬಿಟ್ಟು ಶಿಕ್ಷಣದ ಕಡೆ ಹೆಚ್ಚು ಗಮನ ಹರಿಸಬೇಕಾಗಿದೆ ಎಸ್.ಎಸ್.ಎಲ್.ಸಿ. ಶಿಕ್ಷಣ ಕ್ಷೇತ್ರ ಮಕ್ಕಳ ಜೀವನದ ಒಂದು ತಿರುವು ಮಕ್ಕಳು ಮುಂದಿನ ಜೀವನದ ಬಗ್ಗೆ ಈಗಲೇ ಮಾನಸಿಕವಾಗಿ ಬದ್ಧತೆಯಿಂದ, ಕರ್ತವ್ಯನಿಷ್ಠೆಯಿಂದ, ಸಮಯಪ್ರಜ್ಞೆಯೊಂದಿಗೆ ತೊಡಗಿಸಿಕೊಂಡರೆ ಬದುಕು ಸಾರ್ಥಕತೆ ಆಗುತ್ತದೆ. ಉತ್ತಮ ಫಲಿತಾಂಶದೊಂದಿಗೆ ಹೆತ್ತ ತಂದೆ-ತಾಯಿಗಳಿಗೆ ವ್ಯಾಸಂಗ ಮಾಡಿದ ವಿದ್ಯಾಸಂಸ್ಥೆಗೆ ಹುಟ್ಟಿದ ಊರಿಗೆ ಒಳ್ಳೆಯ ಹೆಸರು ತರಬೇಕಾಗಿದೆ ಎಂದು ದಾವಣಗೆರೆ ಪೊಲೀಸ್ ನಿರೀಕ್ಷಕರಾದ ಪ್ರಶಾಂತ್ ಕೆ.ಎಸ್. ತಮ್ಮ ಮನದಾಳದ ಮಾತು ಹಂಚಿಕೊಂಡರು.

ದಾವಣಗೆರೆ ಜಿಲ್ಲಾ ಪೊಲೀಸ್ ಇಲಾಖೆ ಮತ್ತು ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಇತ್ತೀಚಿಗೆ ಪಿ.ಜೆ. ಬಡಾವಣೆಯ ಪೊಲೀಸ್ ಸಮುದಾಯ ಭವನದಲ್ಲಿ ಎಸ್.ಎಸ್.ಎಲ್.ಸಿ. ಮಕ್ಕಳಿಗೆ ಪರೀಕ್ಷಾ ಪೂರ್ವಭಾವಿ ತಯಾರಿ ಉಚಿತ ಕಾರ್ಯಾಗಾರವನ್ನು ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಪೊಲೀಸ್ ಅಧಿಕಾರಿ ರವೀಂದ್ರ ಕಾಳಭೈರವ ಮಾತನಾಡಿ, ಮಕ್ಕಳು ಪರೀಕ್ಷೆಗೆ ಅಷ್ಟೆ ಸೀಮಿತವಾಗದೆ ಮುಂದಿನ ಸಾಧನೆಗಳಿಗೆ ಜಾಗೃತೆಯೊಂದಿಗೆ ಹೆತ್ತ ತಂದೆ-ತಾಯಿಗಳ ಕನಸು ನನಸು ಮಾಡಬೇಕಾಗಿದೆ ಎಂದರು.



ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈಯವರು ಪರೀಕ್ಷೆ ಎದುರಿಸುವ ಧೈರ್ಯ ತುಂಬಿ ಶಿಕ್ಷಣದ ಬಗ್ಗೆ ಮಾರ್ಗದರ್ಶನ ನೀಡಿ, ತಂದೆ-ತಾಯಿಗಳ ಪೊಲೀಸ್ ಅಧಿಕಾರಿಗಳ ಅನುಮತಿ ಪಡೆದು ಉತ್ತಮ ಫಲಿತಾಂಶಕ್ಕೆ ಪ್ರತಿಜ್ಞಾವಿಧಿ ಬೋಧಿಸಿದರು.

ಕಲಾಕುಂಚ ಮಹಿಳಾ ವಿಭಾಗದ ಸಂಸ್ಥಾಪಕರಾದ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿ, ಪೊಲೀಸ್ ಅಧಿಕಾರಿ ವೇದಮೂರ್ತಿ ವೇದಿಕೆಯಲ್ಲಿ ಗೌರವ ಉಪಸ್ಥಿತರಿದ್ದರು. ಪೊಲೀಸ್ ಅಧಿಕಾರಿ ಎಸ್.ವಿ.ಅಣ್ಣಿಗೇರಿಯವರ ಪ್ರಾರ್ಥನೆಯೊಂದಗೆ ಪ್ರಾರಂಭವಾದ ಸಮಾರಂಭಕ್ಕೆ ಕಲಾಕುಂಚದ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ಸ್ವಾಗತಿಸಿ, ನಿರೂಪಣೆ ಮಾಡಿ, ಕೊನೆಯಲ್ಲಿ ವಂದಿಸಿದರು.

## ಕೃಷಿ ಭಾಗ್ಯ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಹಾವೇರಿ:** ಕೃಷಿ ಭಾಗ್ಯ ಯೋಜನೆ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಲಾಗಿದ್ದು, ಕ್ಷೇತ್ರ ಬದು ನಿರ್ಮಾಣ, ಕೃಷಿ ಹೊಂಡ ನಿರ್ಮಾಣ, ನೀರು ಇಂಗದಂತೆ ತಡೆಯಲು ಕೃಷಿ ಹೊಂಡಕ್ಕೆ ಪಾಲಿಥೀನ್ ಹೊದಿಕೆ, ಸುರಕ್ಷತೆಗಾಗಿ ಕೃಷಿ ಹೊಂಡದ ಸುತ್ತಲು ತಂತಿ ಬೇಲಿ ನಿರ್ಮಾಣ, ಹೊಂಡದಿಂದ ನೀರು ಎತ್ತಲು ಡಿಸೇಲ್ ಪಂಪಸೆಟ್ ಬಳಕೆ, ಹಾಗೂ ಬೆಳೆಗಳಿಗೆ ನೀರು ಹಾಯಿಸಲು ಸಿಂಕರ್ ಘಟಕ ಹೀಗೆ ಒಟ್ಟು 6 ಘಟಕಗಳನ್ನು ಕೃಷಿ ಭಾಗ್ಯ ಪ್ಯಾಕೆಜ್ ನಲ್ಲಿ ರೈತರು ಕಡ್ಡಾಯವಾಗಿ ಅಳವಡಿಸಿಕೊಳ್ಳಬಹುದಾಗಿದೆ. ಸಾಮಾನ್ಯ ವರ್ಗದ ರೈತರಿಗೆ ಶೇ.40 ರಿಂದ ಶೇ.90 ರವರೆಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ರೈತರಿಗೆ ಶೇ.50 ರಿಂದ ಶೇ.90 ರವರೆಗೆ ಸಹಾಯಧನವನ್ನು ನೀಡಲಾಗುವುದು. ಆಸಕ್ತ ರೈತರು ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ದಾಖಲಾತಿಗಳೊಂದಿಗೆ ಸಂಬಂಧಪಟ್ಟ ಹೋಬಳಿಯ ರೈತ ಸಂಪರ್ಕ ಕೇಂದ್ರಗಳಿಗೆ ನೀಡಬಹುದಾಗಿರುತ್ತದೆ. ನಿಗದಿತ ಗುರಿಗಿಂತ ಹೆಚ್ಚಿನ ಅರ್ಜಿಗಳು ಸ್ವೀಕೃತವಾಗಿದ್ದಲ್ಲಿ ವಿಯಮಾನುಸಾರ ಪಲಾನುಭವಿಗಳನ್ನು ಆಯ್ಕೆಮಾಡಲಾಗುವುದು. ಅರ್ಜಿಗಳನ್ನು ಜೇಷ್ಠತೆಯ ಅನುಸಾರ ಇಲಾಖೆಯ ಕೆ-ಕಿಸಾನ್ ತಂತ್ರಾಂಶದಲ್ಲಿ ನೋಂದಣಿ ಮಾಡಲಾಗುವುದು, ರೈತರ ಒಟ್ಟು ಹಿಡುವಳಿ ಕ್ಷೇತ್ರದ ಒಂದು ಸರ್ವೇ ನಂಬರನಲ್ಲಿ ಕನಿಷ್ಠ 1 ಎಕರೆ ಜಮೀನು ಇರಬೇಕು. ಈ ಹಿಂದೆ ಕೃಷಿ ಭಾಗ್ಯ ಹಾಗೂ ವಿವಿಧ ಯೋಜನೆಗಳಲ್ಲಿ ಕೃಷಿ ಹೊಂಡ ನಿರ್ಮಾಣ ಮಾಡಿಕೊಂಡಿದ್ದಲ್ಲಿ ಈ ಯೋಜನೆಗೆ ಅರ್ಹತೆ ಹೊಂದಿರುವುದಿಲ್ಲ, ಕೆ.ಕಿಸಾನ್ ತಂತ್ರಾಂಶದಲ್ಲಿ ನೋಂದಾಯಿಸಿದ ಅರ್ಹ ಅರ್ಜಿಗಳನ್ನು ಆಯ್ಕೆ ಮಾಡಿ ಕ್ಷೇತ್ರ ಪರಿಶೀಲನೆ ಕೈಗೊಂಡು ಅರ್ಹ ರೈತರಿಗೆ ತಂತ್ರಾಂಶದ ಮೂಲಕವೇ ಕಾರ್ಯಾದೇಶವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಹಾಗೂ ತಾಲುಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಸಂಪರ್ಕಿಸಬಹುದಾಗಿರುತ್ತದೆ ಎಂದು ಹಾವೇರಿ ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ. ಬಾಸ್ ಸಂಘದ ಅಧ್ಯಕ್ಷರಾಗಿ ಯುವರಾಜ ಮುಟಗಾರ



**ಗದಗ :** ಅಖಿಲ ಕರ್ನಾಟಕ ದರ್ಶನ ತೂಗದೀಪ ಅಭಿಮಾನಿಗಳ ಸಂಘದ ನೂತನ ಅಧ್ಯಕ್ಷರಾಗಿ ನಗರದ ಯುವರಾಜ ಮುಟಗಾರ ಆಯ್ಕೆಯಾದ ಹಿನ್ನಲೆಯಲ್ಲಿ ಮತ್ತು ದರ್ಶನ ಅವರ ನೂತನ ಚಿತ್ರ ಡೆವಿಲ್ ಚಲನಚಿತ್ರ ಯಶಸ್ವಿಯಾಗಲಿ ಎಂದು ಹಾರೈಸಿ ನಗರದ ವಿರೇಶ್ವರ ಪುಣ್ಯಾಶ್ರಮದಲ್ಲಿ ವಿಶೇಷ ಪೂಜೆ ಮಾಡಲಾಯಿತು.

ಈ ಸಂದರ್ಭದಲ್ಲಿ ದರ್ಶನ ಅವರ ಅಭಿಮಾನಿಗಳು ಉಪಸ್ಥಿತರಿದ್ದರು.

## ಡಾ.ಶಾಮನೂರು ಶಿವಶಂಕರಪ್ಪ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ

**ದಾವಣಗೆರೆ:** ಡಾ.ಶಾಮನೂರು ಶಿವಶಂಕರಪ್ಪ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದ ವತಿಯಿಂದ ನಗರದ ಡಾ.ಮೋದಿ ವೃತ್ತದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಭಾವಪೂರ್ಣ ಶ್ರದ್ಧಾಂಜಲಿ ನಮನ ಸಲ್ಲಿಸಲಾಯಿತು.

ಈ ವೇಳೆ ಕರವೇ ಜಿಲ್ಲಾಧ್ಯಕ್ಷ ಎಂ.ಎಸ್. ರಾಮೇಗೌಡ ಮಾತನಾಡಿ, ಶಾಮನೂರು ಶಿವಶಂಕರಪ್ಪ ಮಧ್ಯಮ ವರ್ಗದ ಧ್ವನಿಯಾಗಿದ್ದರು. ದಾವಣಗೆರೆಯು ಶೈಕ್ಷಣಿಕವಾಗಿ ಜ್ಞಾನಕಾಶಿ ಎಂಬ ಬಿರುದು ಬರಲು ಶಿವಶಂಕರಪ್ಪ ಅವರೇ ಕಾರಣ. ಅಂತಹ ಮಹಾನ್ ವ್ಯಕ್ತಿಯನ್ನು ಕಳೆದುಕೊಂಡಿರುವುದು ದಾವಣಗೆರೆಗೆ ತುಂಬಲಾರದ ನಷ್ಟವಾಗಿದೆ ಎಂದರು.

ಹಲವು ವರ್ಷಗಳ ಬೇಡಿಕೆಯಾದ ಗುಂಡಿ ವೃತ್ತದ ಪಾದಾಚಾರಿ ವ್ಯಾಪಾರಿಗಳಿಗೆ ವ್ಯವಸ್ಥಿತವಾಗಿ ಪರ್ಯಾಯ ವ್ಯವಸ್ಥೆ ಕಲ್ಪಿಸುವಲ್ಲಿ ಶಾಮನೂರು ಶಿವಶಂಕರಪ್ಪ ಅವರ ಬಹುದೊಡ್ಡ ಪಾತ್ರವಿದೆ. ಎಷ್ಟೋ ಕಡುಬಡವ ವಿದ್ಯಾರ್ಥಿಗಳಿಗೆ ಮತ್ತು ಪತ್ರಕರ್ತರ ಮಕ್ಕಳಿಗೆ ಸ್ಕಾಲರ್‌ಶಿಪ್ ಕೊಡುವ ಮೂಲಕ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸುವಂತ ಕೆಲಸ ಶಾಮನೂರು ಮಾಡಿದ್ದಾರೆ. ದಾವಣಗೆರೆ, ರಾಜ್ಯ, ಹೊರ ರಾಜ್ಯದ ದೇವಸ್ಥಾನಗಳ ಅಭಿವೃದ್ಧಿಗೂ ಹಣ ನೀಡಿರುವುದು. ಹೀಗೆ ಯಾರೇ ಬಂದರೂ ಅವರ ಕಷ್ಟ ಆಲಿಸಿ ಅವರಿಗೂ ಪರಿಹಾರ ನೀಡುವಲ್ಲಿ ಹಿರಿಯ ಶಾಸಕರು ಯಾವಾಗಲೂ ಮುಂದೆ ಇದ್ದರು.

# 'ಗಂಗಾ ಸ್ನಾನ-ತುಂಗಾ ಪಾನ' ನಾಣ್ಣುಡಿಗೆ ಧಕ್ಕೆ

## ರಾಜ್ಯದ 700 ಕಿಲೋಮೀಟರ್ ನದಿಗಳು ಕಲುಷಿತ!

**ಶಿವಮೊಗ್ಗ:** ಸಾಂಸ್ಕೃತಿಕವಾಗಿ ಶ್ರೀಮಂತವಾಗಿರುವ ಭಾರತದಲ್ಲಿ ನದಿಗಳಿಗೆ ಪೂಜ್ಯ ಸ್ಥಾನ ನೀಡಲಾಗಿದೆ. ಆದರೆ, ಅವುಗಳ ಸ್ವಚ್ಛತೆಯನ್ನು ಸಂಪೂರ್ಣ ಕಡೆಗಣಿಸಲಾಗಿದೆ. ಅದಕ್ಕೆ ರಾಜ್ಯದಲ್ಲಿ ಹರಿಯುವ 12 ನದಿಗಳ ಈಗಿನ ಸ್ಥಿತಿಯೇ ಸಾಕ್ಷಿಯಾಗಿದೆ.

ರಾಜ್ಯಾದ್ಯಂತ ಒಟ್ಟು 693.75 ಕಿ.ಮೀ. ನದಿಗಳು ಕಲುಷಿತಗೊಂಡಿದ್ದು, ಈ ಕಲುಷಿತ ನದಿಗಳಿಂದ ನಗರಗಳು ಮತ್ತು ಪಟ್ಟಣಗಳಿಗೆ ನೀರು ಸರಬರಾಜು ಮಾಡಲಾಗುತ್ತಿದೆ. ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ಮನೆಗಳಿಂದ ಹೊರಹಾಕಲ್ಪಡುವ ಸಂಸ್ಕರಿಸದ ನೀರು ನದಿಗಳಿಗೆ ಸೇರುತ್ತಿದ್ದು, ನೀರಿನ ಗುಣಮಟ್ಟ ಗಮನಾರ್ಹವಾಗಿ ಕುಗ್ಗುತ್ತಿದೆ.

ಅರ್ಕಾವತಿ, ಲಕ್ಷ್ಮಣತೀರ್ಥ, ತುಂಗಭದ್ರಾ, ತುಂಗಾ, ಕಾವೇರಿ, ಕಬಿನಿ, ಕಾಗಿನಾ, ಕೃಷ್ಣಾ, ಶಿಂಷಾ, ಭೀಮಾ ಮತ್ತು ನೇತ್ರಾವತಿ ಕಲುಷಿತ ನದಿಗಳಾಗಿದ್ದು, ಇಲ್ಲಿಯವರೆಗೆ ಈ ನದಿಗಳ ಉದ್ದಕ್ಕೂ 112 ಕಲುಷಿತ ಒಳಚರಂಡಿಗಳನ್ನು ಗುರುತಿಸಲಾಗಿದೆ.



ಬೆಳಗಾವಿಯಲ್ಲಿ ನಡೆದ ವಿಧಾನಮಂಡಲದ ಚಳಿಗಾಲದ ಅಧಿವೇಶನದಲ್ಲಿ ವಿಧಾನಸಭೆಯಲ್ಲಿ ತೀರ್ಥಹಳ್ಳಿ ಶಾಸಕ ಆರಗ ಜ್ಞಾನೇಂದ್ರ ಅವರ ನಕ್ಷತ್ರ ಹಾಕದ ಪ್ರಶ್ನೆಗೆ ಉತ್ತರಿಸಿದ ಅರಣ್ಯ, ಪರಿಸರ ಮತ್ತು ಜೀವವೈವಿಧ್ಯ ಸಚಿವ ಈಶ್ವರ್ ಖಂಡ್ರೆ, ಜೈವಿಕ ರಾಸಾಯನಿಕ ಆಮ್ಲಜನಕ ಬೇಡಿಕೆ (ಬಿಒಡಿ) ಮಟ್ಟವನ್ನು ಆಧರಿಸಿ ನದಿಗಳನ್ನು ಪಿ 1 ರಿಂದ ಪಿ 5 ರವರೆಗೆ ಐದು ವರ್ಗಗಳಾಗಿ ವರ್ಗೀಕರಿಸಲಾಗಿದೆ, ಇದರಲ್ಲಿ ಪಿ 1 ಅತ್ಯಂತ ಕಲುಷಿತವಾಗಿದೆ.

ಲೀಟರ್‌ಗೆ 30 ಮಿ.ಗ್ರಾಂಗಿಂತ ಹೆಚ್ಚಿನ ಬಿಒಡಿ ಮಟ್ಟವನ್ನು ಹೊಂದಿರುವ ನದಿಗಳು ಬರುತ್ತವೆ. ಅರ್ಕಾವತಿಯನ್ನು ಪಿ 1 ಎಂದು ವರ್ಗೀಕರಿಸಲಾಗಿದೆ, ಆದರೆ ಯಾವುದೇ ನದಿಗಳು ಪಿ 2 ಮತ್ತು ಪಿ 3 ವರ್ಗಗಳ ಅಡಿಯಲ್ಲಿ ಬರುವುದಿಲ್ಲ. ತುಂಗಭದ್ರಾ, ಭದ್ರಾ ಮತ್ತು ಶಿಂಷಾ ಪಿ 4 ಅಡಿಯಲ್ಲಿವೆ, ಆದರೆ ಇತರ ಎಂಟು ಕಲುಷಿತ ನದಿಗಳನ್ನು ಪಿ 5 ಅಡಿಯಲ್ಲಿ ವರ್ಗೀಕರಿಸಲಾಗಿದೆ.

ನದಿಪಾತ್ರಗಳಲ್ಲಿರುವ ಪುರಸಭೆಗಳು, ಪಟ್ಟಣಗಳು ಮತ್ತು ಹಳ್ಳಿಗಳಿಂದ ಬರುವ ದೇಶೀಯ ತ್ಯಾಜ್ಯ ನೀರನ್ನು ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ (ಸಿಪಿಸಿಬಿ) ಗುರುತಿಸಿರುವ ಕನಿಷ್ಠ 17 ನದಿಗಳಿಗೆ ಬಿಡಲಾಗುತ್ತಿದೆ ಎಂದು ಖಂಡ್ರೆ ಹೇಳಿದರು.ಮಂಡ್ಯ, ರಾಮನಗರ, ವಿಜಯಪುರ ಮತ್ತು ಕಲುಷಿತ ನದಿಗಳಿಂದ ಮನೆಗಳಿಗೆ ಕುಡಿಯುವ ನೀರನ್ನು ಪೂರೈಸಲಾಗುತ್ತದೆ. ಬಳ್ಳಾರಿ, ವಿಜಯನಗರ ಮತ್ತು ಬಾಗಲಕೋಟೆ ಜಿಲ್ಲೆಗಳ ಕಲುಷಿತ ನದಿ ನೀರನ್ನು ಸ್ಥಳೀಯ ಅಧಿಕಾರಿಗಳು ನೀರು ಸರಬರಾಜಿಗೆ ಬಳಸುತ್ತಾರೆ. 2022-23ರಲ್ಲಿ, ದಕ್ಷಿಣ ಪಿನಾಕಿನಿ, ಅಘನಾಶಿನಿ, ಶರಾವತಿ ಮತ್ತು ಗಂಗಾವಳಿ ನದಿಗಳನ್ನು ಸಹ ಕಲುಷಿತ ಎಂದು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಗುರುತಿಸಿದೆ. ಆದರೆ ಈ ನದಿಗಳು ಕಲುಷಿತವಾಗಿಲ್ಲ ಎಂದು ಸಿಪಿಸಿಬಿಗೆ ಪತ್ರ ಬರೆದು ಪಟ್ಟಿಯಿಂದ ತೆಗೆದುಹಾಕುವಂತೆ ಕೋರಲಾಗಿದೆ. ದಕ್ಷಿಣ ಪಿನಾಕಿನಿ ನದಿಗೆ ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲಾಗುತ್ತಿದೆ ಖಂಡ್ರೆ ಅವರು ಹೇಳಿದರು.ಪರಿಹಾರ ಕ್ರಮಗಳ ಕುರಿತು ಮಾತನಾಡಿದ ಖಂಡ್ರೆ, ರಾಷ್ಟ್ರೀಯ ಹಸಿರು ನ್ಯಾಯಮಂಡಳಿಯ ನಿರ್ದೇಶನಗಳ ಪ್ರಕಾರ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಒಳಚರಂಡಿ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. 12 ಅನುಮೋದಿತ ನದಿ ಪುನರುಜ್ಜೀವನ ಕ್ರಿಯಾ ಯೋಜನೆಗಳ ಅಡಿಯಲ್ಲಿ, ರಾಜ್ಯದಲ್ಲಿ ದಿನಕ್ಕೆ 817.31 ಮಿಲಿಯನ್ ಲೀಟರ್ ಕೊಳಚೆನೀರು ಉತ್ಪತ್ತಿಯಾಗುತ್ತದೆ. ಇದರಲ್ಲಿ 614.1ಮಿಲಿಯನ್ ಲೀಟರ್ ಸಾಮರ್ಥ್ಯದ 41 ಒಳಚರಂಡಿ ಸಂಸ್ಕರಣ ಘಟಕಗಳನ್ನು ಸ್ಥಾಪಿಸಲಾಗಿದೆ, 203.21 ಮಿಲಿಯನ್ ಲೀಟರ್ ನೀರು ಸಂಸ್ಕರಿಸದೆ ಉಳಿಯುತ್ತದೆ.

# ಖೈದಿಗಳಿಗೆ ಮಾನಸಿಕ ಆರೋಗ್ಯಕ್ಕಾಗಿ ಯೋಗ ಶಿಬಿರ

**ದಾವಣಗೆರೆ:** ಜಿಲ್ಲಾ ಕಾರಾಗೃಹ ಅಧೀಕ್ಷಕರಾದ ಆನಂದ ಸಿ ಭಜಂತ್ರಿಯವರ ಅಧ್ಯಕ್ಷತೆಯಲ್ಲಿ ಮತ್ತು ಸಿಬ್ಬಂದಿಗಳ ಸಮ್ಮುಖದಲ್ಲಿ ನಗರದ ಅಷ್ಟಾಂಗ ವಿನ್ಯಾಸ ಯೋಗ ಅಕಾಡೆಮಿ ಹಾಗೂ ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನ ಅಡಿಯಲ್ಲಿ ಇಂದಿನಿಂದ ನಿರಂತರವಾಗಿ ಕಾರಾಗೃಹ ವಾಸಿಗಳಿಗೆ, ಮಾನಸಿಕ ಆರೋಗ್ಯಕ್ಕಾಗಿ ಯೋಗ, ಪ್ರಾಣಾಯಾಮ ಮತ್ತು ಧ್ಯಾನ ಶಿಬಿರದ ಕಾರ್ಯಕ್ರಮವನ್ನು ಗಿಡಕ್ಕೆ ನೀರೆರುವುದರ ಮುಖಾಂತರ ಉದ್ಘಾಟಿಸಲಾಯಿತು.

ಉದ್ಘಾಟನಾ ಕಾರ್ಯಕ್ರಮವನ್ನು ಅಷ್ಟಾಂಗ ವಿನ್ಯಾಸ ಯೋಗ ಅಕಾಡೆಮಿ ಸಂಸ್ಥಾಪಕ ಅಧ್ಯಕ್ಷರಾದ ಯೋಗ ಶಿಕ್ಷಕ ಯೋಗಾಚಾರ್ಯ ವೈದ್ಯ ತೀರ್ಥರಾಜ್ ಹೋಲೂರ್ ಉದ್ಘಾಟಿಸಿದರು.

ಆರೋಗ್ಯವೇ ಭಾಗ್ಯ, ಮಾನಸಿಕ ಆರೋಗ್ಯಕ್ಕೆ ಯೋಗ ತುಂಬಾ ಸಹಕಾರಿ, ಕೋಪವನ್ನು ತಡೆಗಟ್ಟುವ, ಆತಂಕವನ್ನು ದೂರಮಾಡುತ್ತ ಮನೋಬಲವನ್ನು




ಹೆಚ್ಚಿಸುತ್ತದೆ ಅದಕ್ಕಾಗಿ ಇದರ ಸದುಪಯೋಗ । ಪಡಸಿಕೊಳ್ಳವಂತೆ ತಿಳಿಸಿದರು.

ಕಾರ್ಯಕ್ರಮದ ಮತ್ತೋರ್ವ ಯೋಗ ಶಿಕ್ಷಕರಾದ ಯೋಗಾಚಾರ್ಯ ವೈದ್ಯ ಅನಿಲ್ ಕುಮಾರ್ ರಾಯ್ಕರ್ ರವರು ಯೋಗ ಪ್ರಾತ್ಯಕ್ಷತೆ ನಡೆಸಿಕೊಟ್ಟರು.

ಜಿಲ್ಲಾ ಕಾರಾಗೃಹ ಅಧಿಕಾರಿಗಳಾದ ಶ್ರೀಕಂಠ ಮೂರ್ತಿರವರು ಯೋಗದ ಪ್ರಯೋಜನೆ ಪಡೆಯುವಂತೆ ಕರೆಕೊಟ್ಟರು.

ಆಧ್ಯಾತ್ಮಿಕ ಚಿಂತಕ ಉಮೇಶ್ ಬಾಬು ಪಿ.ಕೆ.ಕೊಪ್ಪಿಕರ್ ಜೈಲರ್ ಹಾಗೂ ಎನ್ ಡಿ ದಾಸರ, ಶ್ರೀಕಾಂತ್ ತಳವಾರ, ಶ್ರೀಮತಿ ಸವಿತಾ ಜಿ.ಎಸ್. ಸಹಾಯಕ ಜೈಲರ್‌ಗಳು ಉಪಸ್ಥಿತರಿದ್ದರು.


**ಪುರಸಭಾ ಕಾರ್ಯಾಲಯ, ಚನ್ನಗಿರಿ**

ದಾವಣಗೆರೆ ಜಿ. ಚನ್ನಗಿರಿ ತಾ.577213

ಇ-ಮೇಲ್: ka.channagiri.tmc@gmail.com ವೆಬ್ ಸೈಟ್: www.channagiritown.mrc.

ಕ್ರಮಾಂಕ:ಚ.ಮ.ಸ/ಆ.ಶಾ/ಸಿಆರ್/2025-26 ದಿನಾಂಕ: 11-12-2025

**"ಹರಾಜು ಪ್ರಕಟಣೆ"**

**ಹಸಿ ತ್ಯಾಜ್ಯ ಗೊಬ್ಬರ ಮತ್ತು ಮರುಬಳಕೆ ಒಣ ತ್ಯಾಜ್ಯಗಳ ಬಹಿರಂಗ ಹರಾಜು ಪ್ರಕಟಣೆ**

ಚನ್ನಗಿರಿ ಪುರಸಭೆ ವ್ಯಾಪ್ತಿಯ ಮನೆ-ಮನೆಯಿಂದ ತ್ಯಾಜ್ಯ ಸಂಗ್ರಹಿಸಿ ಬೇರ್ಪಡಿಸಿರುವ ಹಸಿ ತ್ಯಾಜ್ಯವನ್ನು ಪಿಟ್ ಮಾದರಿಯಲ್ಲಿ ಪ್ರಾಯೋಗಿಕವಾಗಿ ಗೊಬ್ಬರವನ್ನಾಗಿ ತಯಾರಿಸಿದ್ದು, ಸ್ಥಳಿಯ ರೈತರಿಗೆ ಹಾಗೂ ಮರುಬಳಕೆಯ ವಿವಿಧ ಬಗೆಯ ವಸ್ತುಗಳನ್ನಾಗಿ ಒಣ ತ್ಯಾಜ್ಯವನ್ನು (ಗುಜರಿ ಐಟಂ) ಬೇರ್ಪಡಿಸಿದ್ದು, ಸದರಿ ಎರಡು ಬಗೆಯ ತ್ಯಾಜ್ಯಗಳನ್ನು ಹರಾಜು ಪ್ರಕ್ರಿಯೆಗಳಲ್ಲಿ ವಿಲೇಪಡಿಸಲು ತೀರ್ಮಾನಿಸಿದ್ದು, ಸ್ಥಳೀಯವಾಗಿ ರೈತರು ಮತ್ತು ಗುಜರಿ ಅಂಗಡಿ ಮಾಲೀಕರು/ನೊಂದಾಯಿತ ಮರುಬಳಕೆ ವಸ್ತುಗಳನ್ನು ಸಂಘ ಸಂಸ್ಥೆಗಳಿಗೆ ಪ್ರಾಯೋಗಿಕವಾಗಿ ಬಹಿರಂಗ ಹರಾಜು ಮೂಲಕ ವಿಲೇಪಡಿಸಲು ತೀರ್ಮಾನಿಸಲಾಗಿದೆ. ಹಾಗೂ ಹರಾಜು ಪ್ರಕ್ರಿಯೆಯನ್ನು ದಿನಾಂಕ: 18-12-2025 ರಂದು ಗುರುವಾರ ಬೆಳಗ್ಗೆ 11-00 ಗಂಟೆಗೆ ನಿಗದಿಪಡಿಸಲಾಗಿದೆ ಕಾರಣ ಆಸಕ್ತರು ಭಾಗವಹಿಸಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಮುಖ್ಯಾಧಿಕಾರಿಗಳು ಮತ್ತು ಆರೋಗ್ಯ ಶಾಖೆಗೆ ಸಂಪರ್ಕಿಸಬಹುದು.

ಸಹಿ/-
ಮುಖ್ಯಾಧಿಕಾರಿ
ಪುರಸಭೆ ಚನ್ನಗಿರಿ

ಸಹಿ/-
ಆಡಳಿತಾಧಿಕಾರಿಗಳು
ಪುರಸಭೆ ಚನ್ನಗಿರಿ

# ಬಿ.ಇಡಿ ಪ್ರ ಶಿಕ್ಷಣಾರ್ಥಿಗಳಿಗೆ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆ

**ಹಾವೇರಿ:** ಶ್ರೀ ಗಳಗನಾಥ ಮತ್ತು ನಾ.ಶ್ರೀ. ರಾಜಪುರೋಹಿತ ಪ್ರತಿಷ್ಠಾನದ ವತಿಯಿಂದ ಹಾವೇರಿ ಜಿಲ್ಲೆಯ ಬಿ.ಇಡಿ ಪ್ರಶಿಕ್ಷಣಾರ್ಥಿಗಳಿಗೆ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯನ್ನು ಜನೇವರಿ 5 ರಂದು ಸೋಮವಾರ ಬೆಳಿಗ್ಗೆ 10 ಗಂಟೆಗೆ ಹಾವೇರಿ ನಗರದ ಟಿ.ಎಂ.ಎ.ಇ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.

ಐತಿಹಾಸಿಕ, ಪೌರಾಣಿಕ, ಕರ್ನಾಟಕಕ್ಕೆ ಸಂಬಂಧಿಸಿದ ಕಲೆ, ಸಾಹಿತ್ಯ, ಸಂಗೀತ, ಕ್ರೀಡೆ ಬೌಗೋಳಿಕ ಮುಂತಾದ ಸಾಮಾನ್ಯ ಜ್ಞಾನ ಒಳಗೊಂಡಂತೆ ಶೇ80 ರಷ್ಟು ಪ್ರಶ್ನೆಗಳು ಹಾಗೂ ಶ್ರೀ ಗಳಗನಾಥ ಮತ್ತು ನಾ.ಶ್ರೀ. ರಾಜಪುರೋಹಿತರ ಕುರಿತು ಶೇ20 ರಷ್ಟು ಪ್ರಶ್ನೆಗಳನ್ನು ಕೇಳಲಾಗುವುದು. ಪ್ರತಿ ಮಹಾವಿದ್ಯಾಲಯದಿಂದ ಒಂದು ತಂಡ ಪಾಲ್ಗೊಳ್ಳಲು ಅವಕಾಶವಿರುತ್ತದೆ. ಒಂದು ತಂಡದಲ್ಲಿ ಈರ್ವರು ಪ್ರಶಿಕ್ಷಣಾರ್ಥಿಗಳು ಪಾಲ್ಗೊಳ್ಳಬೇಕು. ಸ್ಪರ್ಧೆಯಲ್ಲಿ 5 ಕ್ಕಿಂತ ಹೆಚ್ಚು ತಂಡಗಳು ಭಾಗವಹಿಸಿದಲ್ಲಿ 20 ಅಂಕಗಳ ಲಿಖಿತ ಪರೀಕ್ಷೆ ನಡೆಸಲಾಗುವುದು, ಅತೀ ಹೆಚ್ಚು ಅಂಕಗಳನ್ನು ಪಡೆದ 5 ತಂಡಗಳನ್ನು ಮಾತ್ರ ಅಂತಿಮ ಮೌಖಿಕ ಸ್ಪರ್ಧೆಗೆ ಆಯ್ಕೆ ಮಾಡಲಾಗುವುದು. ವಿಜೇತ ತಂಡಗಳಿಗೆ ಪ್ರಥಮ ರೂ.5000/–, ದ್ವಿತೀಯ ರೂ.4,000/– ಹಾಗೂ ತೃತೀಯ ರೂ.3,000/– ಮತ್ತು ಸಮಾಧಾನಕರ ಎರಡು ತಂಡಗಳಿಗೆ ತಲಾ ರೂ.1000/– ಗಳಂತೆ ನಗದು ಹಾಗೂ ಪ್ರಮಾಣ ಪತ್ರ ನೀಡಲಾಗುವುದು.


ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲ ತಂಡಗಳಿಗೂ ಪ್ರಮಾಣ ಪತ್ರ ನೀಡಲಾಗುವುದು. ಪ್ರವೇಶ ಉಚಿತವಾಗಿದ್ದು ಡಿಸೆಂಬರ್ 30 ರೊಳಗಾಗಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, #32, 'ಬಿ', ಬ್ಲಾಕ್ ಎರಡನೇ ಮಹಡಿ ಜಿಲ್ಲಾಡಳಿತ ಭವನ ಹಾವೇರಿ–581110 ವಿಳಾಸಕ್ಕೆ ಪ್ರಾಚಾರ್ಯರರ ಮುಖಾಂತರ ಹೆಸರನ್ನು ನೋಂದಾಯಿಸಬೇಕು. ಹೆಚ್ಚಿನ ಮಾಹಿತಿಗಾಗಿ ಪ್ರತಿಷ್ಠಾನದ ಶ್ರೀ ಹನುಮಂತಗೌಡ ಗೊಲ್ಲರ ಮೊ:9449122464 ಅವರನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಮಾಹಿತಿ ನೀಡದ ಅಧಿಕಾರಿಗಳ ವಿರುದ್ಧ ಅಸಮಾಧಾನ

## ಪ್ರಗತಿ ಪರಿಶೀಲನಾ ಸಭೆ ನಡೆಸಿ ಅಧ್ಯಕ್ಷ ಶಶಿಧರ ಕೋಸಂಬೆ ಹೇಳಿಕೆ

# ಆರ್.ಟಿ.ಇ ಕಾಯ್ದೆ ಪ್ರಾಮಾಣಿಕವಾಗಿ ಅನುಷ್ಠಾನಗೊಳಿಸಿ

**ಬಳ್ಳಾರಿ:** ಜಿಲ್ಲೆಯಲ್ಲಿ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆಯನ್ನು ಪ್ರಾಮಾಣಿಕವಾಗಿ ಅನುಷ್ಠಾನಗೊಳಿಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಅವರು ಅಧಿಕಾರಿಗಳಿಗೆ ಸೂಚಿಸಿದರು.



ನಗರದ ಜಿಲ್ಲಾ ಪಂಚಾಯತ್‌ನ ಹಳೆಯ ನಜೀರ್ ಸಾಬ್ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಆರ್.ಟಿ.ಇ ಕಾಯ್ದೆ ಅನುಷ್ಠಾನ ಕುರಿತು ಶಿಕ್ಷಣ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆಯು 6 ರಿಂದ 14 ವರ್ಷ ವಯಸ್ಸಿನ ಎಲ್ಲಾ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣವನ್ನು ಮೂಲಭೂತ ಹಕ್ಕು ಎಂದು ಗುರುತಿಸುತ್ತದೆ. ಎಲ್ಲಾ ಮಕ್ಕಳಿಗೆ ಶಿಕ್ಷಣದ ಪ್ರವೇಶಕ್ಕೆ ಇರುವ ಆರ್ಥಿಕ ಅಥವಾ ಇತರ ಅಡೆತಡೆಗಳನ್ನು ನಿವಾರಿಸುವುದು ಇದರ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳು ಆರ್.ಟಿ.ಇ ಕಾಯ್ದೆ ಅನುಷ್ಠಾನಕ್ಕಿರುವ ನಿಯಮಾವಳಿಗಳ ಬಗ್ಗೆ ಅರಿವು ಇಲ್ಲದೇ ಇರುವುದು ದುರ್ದೈವದ ಸಂಗತಿ. ಹಾಗಾಗಿ ಅಧಿಕಾರಿಗಳು ಕಾಯ್ದೆಯ ಸಮಗ್ರ ಮಾಹಿತಿ ಹೊಂದುವ ಮೂಲಕ ಮಕ್ಕಳ ಶಿಕ್ಷಣ ಭವಿಷ್ಯಕ್ಕೆ ಕಾರಣೀಭೂತರಾಗಬೇಕು ಎಂದರು.

ಜಿಲ್ಲೆಯಲ್ಲಿ 2021–22 ನೇ ಸಾಲಿನಲ್ಲಿ ಕರೋನಾ ಸಂದರ್ಭದಲ್ಲಿ ಮಕ್ಕಳಿಗೆ ಪೌಷ್ಟಿಕ ಆಹಾರ ನೀಡಲು ಸರ್ಕಾರದಿಂದ ಅನುದಾನ ನೀಡಿದ್ದು, ಮಕ್ಕಳಿಗಾಗಿ ಪೂರ್ಣ ಪ್ರಮಾಣದಲ್ಲಿ ಖರ್ಚು ಮಾಡಲಾಗಿದೆಯೇ? ಮಾಹಿತಿ ಎಲ್ಲಿ? ಎಲ್ಲಾ ಶಾಲೆಗಳಲ್ಲಿ ಉಳಿದುಕೊಂಡಿರುವ ಅನುದಾನ ಎಷ್ಟು? ಶಾಲೆಗಳ ಬ್ಯಾಂಕ್ ಖಾತೆ ಪರಿಶೀಲಿಸಿಲ್ಲವೇ? ಎಂದು ಮಧ್ಯಾಹ್ನ ಬಿಸಿಯೂಟದ ಯೋಜನಾಧಿಕಾರಿಗಳ ಮೇಲೆ ಗರಂ ಆದ ಅವರು, ಕೂಡಲೇ ಮಾಹಿತಿ ನೀಡಬೇಕು. ಸರ್ಕಾರ ಮಕಳಿಗಾಗಿಯೇ ನೀಡಿರುವ ಹಣವಿದೆ. ಮಕ್ಕಳಿಗೆ ತಲುಪಿಸುವ ಕಾರ್ಯ ಏಕೆ ಮಾಡಲಿಲ್ಲ, ಇದಕ್ಕೆ ಯಾರು ಹೊಣೆ ಎಂದು ಕಳವಳ ವ್ಯಕ್ತಪಡಿಸಿದರು.

ಜಿಲ್ಲೆಯಲ್ಲಿ 2021–22 ರಿಂದ 31.03.2025 ರ ಅಂತ್ಯಕ್ಕೆ ಶಾಲೆಗಳ ಎಲ್ಲಾ ಖಾತೆಗಳಲ್ಲಿ ಸೇರಿ ಒಟ್ಟು 2,24,71,138 ಹಣವಿದೆ ಎಂದು ಮಧ್ಯಾಹ್ನ ಬಿಸಿಯೂಟದ ಯೋಜನಾಧಿಕಾರಿಗಳು ಸಭೆಯ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಅಧ್ಯಕ್ಷರು, ಈ ಹಣ ಮಕ್ಕಳಿಗೆ ತಲುಪಬೇಕು, ಇಲ್ಲವೇ ಸರ್ಕಾರಕ್ಕೆ ತಲುಪಬೇಕು ಎಂದರು.

ಆರ್.ಬಿ.ಎಸ್.ಕೆ ತಂಡದ ಅಧಿಕಾರಿಗಳು ಜಿಲ್ಲಾ ಆರೋಗ್ಯಾಧಿಕಾರಿಗಳೊಂದಿಗೆ ಚರ್ಚಿಸಿ, ನಿಯಮಿತವಾಗಿ ಶಾಲೆಗಳಿಗೆ ಭೇಟಿ ನೀಡಿ ಮಕ್ಕಳ ಆರೋಗ್ಯ ತಪಾಸಣೆ ನಡೆಸಬೇಕು. ಆಯೋಗಕ್ಕೆ ಜಿಪಿಎಸ್ ಫೋಟೋ ಸಹಿತ ಮಾಹಿತಿ ಸಲ್ಲಿಸಬೇಕು ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ನಿಯಮಿತವಾಗಿ ಶಾಲೆಗಳಿಗೆ ಭೇಟಿ ನೀಡಬೇಕು. ಮಕ್ಕಳೊಂದಿಗೆ ಸಮಸ್ಯೆಗಳ ಕುರಿತು ಚರ್ಚಿಸಿ ಬೇಕಾದ ವ್ಯವಸ್ಥೆ ಕಲ್ಪಿಸಬೇಕು. ಇದು ಅಧಿಕಾರಿಗಳ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಕಳೆದ ಸಭೆಯಲ್ಲಿ ನಡೆದ ಚರ್ಚೆಗಳ ಕುರಿತು ನಡಾವಳಿಗಳ ಮಾಹಿತಿ ದಾಖಲಿಸದೇ ಇರುವುದರ ಕುರಿತು ಅಧ್ಯಕ್ಷರು ಅಸಮಾಧಾನ ವ್ಯಕ್ತಪಡಿಸಿದರು.

ಸಭೆಯಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ತ್ರಿವೇಣಿ ಪತ್ತಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸುಭದ್ರಾದೇವಿ, ಶಾಲಾ ಮತ್ತು ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಉಮಾದೇವಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸದಸ್ಯರಾದ ಚೆಟ್ಲಾ ವೆಂಕಟೇಶ್, ಗೌಸಿಯಾ, ಕಾನೂನು ಪರಿವೀಕ್ಷಕ ಈಶ್ವರ್ ರಾವ್ ಸೇರಿದಂತೆ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿಆರ್‌ಪಿ, ಸಿಆರ್‌ಪಿ, ಶಾಲಾ ಮುಖ್ಯೋಪಾಧ್ಯಾಯರು ಹಾಗೂ ಇತರರು ಉಪಸ್ಥಿತರಿದ್ದರು.

# ರಾಜ್ಯ ಮಟ್ಟದ ಬಾಲಕ/ಬಾಲಕಿಯರ ಅಥ್ಲೆಟಿಕ್ಸ್– ಜಿಲ್ಲೆಗೆ ಸಮಗ್ರ ಚಾಂಪಿಯನ್‌ಷಿಪ್

**ಶಿವಮೊಗ್ಗ:** ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ಡಿ.5 ರಿಂದ 6 ರವೆಗೆ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದ್ದ 17 ವರ್ಷದೊಳಗಿನ ಪ್ರೌಢಶಾಲಾ ಬಾಲಕ/ಬಾಲಕಿಯರ ರಾಜ್ಯ ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟದಲ್ಲಿ ಶಿವಮೊಗ್ಗ ಜಿಲ್ಲಾ ವಸತಿ ಶಾಲೆಯ ಕ್ರೀಡಾಪಟುಗಳು ಭಾಗವಹಿಸಿ ವಿಜೇತರಾಗಿ ಬಾಲಕ/ಬಾಲಕಿಯ ಸಮಗ್ರ ಚಾಂಪಿಯನ್ಸ್ ಎಂಬ ಬಿರುದನ್ನು ಪಡೆದಿದ್ದಾರೆ.



ಬಾಲಕರ ಅಥ್ಲೆಟಿಕ್ಸ್‌ಲ್ಲಿ ಮಣಿಕಂಠ ಗೌಡ ಎತ್ತರ ಜಿಗಿತದಲ್ಲಿ ಪ್ರಥಮ, ತ್ರಿವಿಧ ಜಿಗಿತದಲ್ಲಿ ದ್ವಿತೀಯ, ಶರತ್ ಕೆ.ಜೆ 400 ಮೀ ಓಟದಲ್ಲಿ ಪ್ರಥಮ, 4*100 ಮೀ ರಿಲೇ ಓಟದಲ್ಲಿ ತೃತೀಯ, ಲಲೀಬ್ 110 ಮೀ ಹರ್ಡಲ್ಸ್ ಓಟದಲ್ಲಿ ಪ್ರಥಮ, ಸಚಿನ್ ಜಾಧವ್ 200 ಮೀ ಓಟದಲ್ಲಿ ದ್ವಿತೀಯ, 100 ಮೀ ಓಟದಲ್ಲಿ ತೃತೀಯ, 4*100 ಮೀ ರಿಲೇ ಓಟದಲ್ಲಿ ತೃತೀಯ, ಆರೋನ್ ಎತ್ತರ ಜಿಗಿತದಲ್ಲಿ ದ್ವಿತೀಯ, ವಂಶಿ 4*100 ಮೀ ರಿಲೇ ಓಟದಲ್ಲಿ ತೃತೀಯ ಸ್ಥಾನಗಳನ್ನು ಪಡೆದಿದ್ದಾರೆ.

ಬಾಲಕಿಯರ ಅಥ್ಲೆಟಿಕ್ಸ್‌ಲ್ಲಿ ಪದ್ಮಾವತಿ ಜಾವೆಲಿನ್ ಎಸೆತದಲ್ಲಿ ಪ್ರಥಮ, 4*100 ಮೀ ರಿಲೇ ಓಟದಲ್ಲಿ ತೃತೀಯ, ಪೋಲ್ ವಾಲ್ಟ್‌ಲ್ಲಿ ಪ್ರಥಮ, ಅಪೂರ್ವ 400 ಮೀ ಹರ್ಡಲ್ಸ್ ಓಟ–ಕೂಟ ದಾಖಲೆ ಪ್ರಥಮ, 4*100 ಮೀ ರಿಲೇ ಓಟದಲ್ಲಿ ತೃತೀಯ, ಅಮೂಲ್ಯ– ತ್ರಿವಿಧ ಜಿಗಿತದಲ್ಲಿ ಪ್ರಥಮ, 4*100 ಮೀ ರಿಲೇ ಓಟದಲ್ಲಿ ತೃತೀಯ, ಸಿರಿ ಕೆ.ಜೆ 100 ಮೀ ಹರ್ಡಲ್ಸ್ ಓಟದಲ್ಲಿ ದ್ವಿತೀಯ, 4*100 ಮೀ ರಿಲೇ ಓಟದಲ್ಲಿ ತೃತೀಯ ಸ್ಥಾನಗಳನ್ನು ಪಡೆದ್ದಾರೆ.

ಬಾಲಕ/ಬಾಲಕಿಯರ ರಾಜ್ಯ ಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟದಲ್ಲಿ ವಿಜೇತರಾಗಿರುವ ಎಲ್ಲಾ ಕ್ರೀಡಾಪುಟಗಳಿಗೆ ಹಾಗೂ ಅಥ್ಲೆಟಿಕ್ ತರಬೇತುದಾರರಾದ ಬಾಳಪ್ಪ ಅವರಿಗೆ ಜಿಲ್ಲಾಧಿಕಾರಿಗಳಾದ ಗುರುದತ್ತ ಹೆಗಡೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರೇಖ್ಯಾ ನಾಯ್ಕ ಹಾಗೂ ಇಲಾಖೆ ಸಿಬ್ಬಂದಿಗಳು ಶುಭ ಹಾರೈಸಿದ್ದಾರೆ.

# ಶ್ರೀ ಮಾದಾರ ಚೆನ್ನಯ್ಯ ಸೇವಾ ಸಮಿತಿ

**ಚಿತ್ರದುರ್ಗ:** ಶ್ರೀ ಮಾದರ ಚನ್ನಯ್ಯ ಮಠದಲ್ಲಿ ಶ್ರೀ ಮಾದಾರ ಚನ್ನಯ್ಯ ಸೇವಾ ಸಮಿತಿ ಚಿತ್ರದುರ್ಗ ಜಿಲ್ಲಾ ಘಟಕದ ಕಾರ್ಯಕಾರಿಣಿ ಸಭೆಯೂ ಬುಧವಾರ ಜರುಗಿತು.

ಈ ಸಭೆಯಲ್ಲಿ ಸ್ವಾಮೀಜಿಗಳ ಮುಖೇನ ನೇಮಿತರಾಗಿರುವ ಪದಾಧಿಕಾರಿಗಳ ಘೋಷಣೆ, ತಾಲೂಕು ಸಮಿತಿಗಳ ರಚನೆ, ಹೊಸ ಕಾರ್ಯಯೋಜನೆ, ಸಂಘಟನೆಯ ವಿಸ್ತರಣೆ ಹಾಗೂ ಸಮಾಜಮುಖಿ ಸೇವೆಗಳ ಬಲವರ್ಧನೆ ಕುರಿತು ಮಹತ್ವದ ನಿರ್ಣಯಗಳು ಕೈಗೊಳ್ಳಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಮಾದರ ಚನ್ನಯ್ಯ ಗುರುಪೀಠದ ಶ್ರೀ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿಗಳು ಇದು ಬೇರೆಯವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ನಾವು ಸಹಾ ಅವರಂತೆ ರಾಜಕಾರಣದಲ್ಲಿ ಮುಂದೆ ಬರಬೇಕು ಸಮಾಜಿಕವಾಗಿ ಮುಂದೆ ಬರಬೇಕು ಸಮಾನತೆಯಲ್ಲಿ ನಮ್ಮನ್ನು ನಾವು ಗುರುತಿಸಿಕೊಳ್ಳಬೇಕಿದೆ. ಇದರ ಬಗ್ಗೆ ಚಿಂತನೆಯನ್ನು ಮಾಡುವ ಉದ್ದೇಶದಿಂದ ಈ ಸಮಿತಿಯನ್ನು ರಚನೆ ಮಾಡಲಾಗಿದೆ ಎಂದರು.

ಇದು ಯಾವುದೇ ಒಂದು ಸಂಘಟನೆಗೆ ಪರ್ಯಾಯವಾಗಲಿ ಅಲ್ಲ, ಯಾವುದೇ ರಾಜಕೀಯ ಪಕ್ಷಕ್ಕೂ ಸಹಾ ಪರ್ಯಾಯ ಎಂದು ಭಾವಿಸಬಾರದು, ಇದು ಶ್ರೀಮಠದ ಮಾರ್ಗದರ್ಶನದಲ್ಲಿ ನಡೆಯುವಂತ ಸಂಘಟನೆಯಾಗಿದೆ. ಇದರಲ್ಲಿ ಕೆಲಸ ಮಾಡುವವರು ಈ ಹಿಂದೆ ಯಾವ ಸಂಘಟನೆಯಲ್ಲಿ ಇದ್ದರು ಎಂದು ಈಗ ಯಾವ ಪಕ್ಷದಲಿ

ಇದ್ದಾರೆ ಮುಂದೆ ಎಲ್ಲಿ ಇರುತ್ತಾರೆ ಎಂಬ ಪ್ರಶ್ನೆ ಬೇಡ, ಇದರ ಅಗತ್ಯ ಇಲ್ಲ ನಾವುಗಳು ಎಲ್ಲೆ ಇರಲ್ಲಿ ನಮ್ಮ ಶ್ರೀ ಮಾದಾರ ಚನ್ನಯ್ಯ ಸೇವಾ ಸಮಿತಿಗೆ ಬದ್ದರಾಗಿರಬೇಕು ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ರವಿ ಮಲ್ಲಾಪುರ ಸಮುದಾಯದ ಅಸ್ತಿತ್ವ ಅಸ್ಮಿತೆಗೆ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿಗಳ ಸುಮಾರು ಎರಡೂವರೆ ದಶಕಗಳ ಸಾಧನೆ ಅನನ್ಯ. ಪರಮಪೂಜ್ಯರ ಮಾರ್ಗದರ್ಶನದಂತೆ ರಾಜ್ಯ,ಜಿಲ್ಲಾ,ತಾಲೂಕು ಮಟ್ಟದಲ್ಲಿ ಸೇವಾಸಮಿತಿಯ ಸಂಘಟನಾ ಬಲವರ್ಧನೆ ನಮ್ಮ ಮೊದಲ ಗುರಿಯಾಗಲಿದೆ. ಮತ್ತಿತರರು ಯುವಶಕ್ತಿಯ ಭಾಗವಹಿಸುವಿಕೆ, ಶಿಕ್ಷಣದ ಮಹತ್ವ, ಸಮುದಾಯ ಒಗ್ಗಟ್ಟು ಮತ್ತು ರಾಜಕೀಯ ಸಬಲೀಕರಣ ಕುರಿತು ಅಭಿಪ್ರಾಯ ಹಂಚಿಕೊಂಡರು.

ಈ ಸಂದರ್ಭದಲ್ಲಿ. ಜಿಲ್ಲಾಧ್ಯಕ್ಷ ಶ್ರೀ ಪರಶುರಾಮ್ ಪ್ರಧಾನ ಕಾರ್ಯದರ್ಶಿಯಾದ ರವಿ ಕುಮಾರ್ ಬ್ಯಾಲಹಾಳ್ ಖಜಾಂಚಿದ ನಾಗರಾಜಪ್ಪ ಎಲ್. ದೇವರಾಜ್. ಅನಂತ್. ಪೋಲಿಸ್ ಬೇಟೆ ಪ್ರಸನ್ನ. ರಾಮಾಂಜನೇಯ. ಶ್ರೀನಿವಾಸ್. ಶಿವಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಅಂಚೆ ಇಲಾಖೆಯ ಡಾಕ್ ಅದಾಲತ್ತ

**ಹಾವೇರಿ:** ಹಾವೇರಿ ಅಂಚೆ ವಿಭಾಗದ ಅಂಚೆ ಇಲಾಖೆಯ ಡಾಕ್ ಅದಾಲತ್ತ ಡಿಸೆಂಬರ್ 23 ರಂದು ಬೆಳಿಗ್ಗೆ 10 ಗಂಟೆಗೆ ಹಾವೇರಿ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಅದಾಲತ್ತನಲ್ಲಿ ತೀರ್ಮಾನಿಸುವ ಅಹವಾಲುಗಳಿದ್ದಲ್ಲಿ, ದಿನಾಂಕ 19–12–2025ರೊಳಗಾಗಿ ಅಹವಾಲುಗಳನ್ನು ಲಿಖಿತವಾಗಿ ಅಂಚೆ ಅಧೀಕ್ಷಕರು, ಹಾವೇರಿ ಅಂಚೆ ವಿಭಾಗ, ಹಾವೇರಿ–581110 ಈ ವಿಳಾಸಕ್ಕೆ ಅಥವಾ ಇ–ಅಂಚೆ(dohaveri.ka@indiapost.gov.in ) ಗೆ ಕಳಿಹಿಸಬಹುದು. ಡಾಕ್ ಅದಾಲತ್ತನಲ್ಲಿ ಹಾಜರಾಗುವವರಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ ಎಂದು ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# KGF ಚಾಪ್ಟರ್ 2 ಸಹ–ನಿರ್ದೇಶಕ ಕೀರ್ತನ್ ನಾಡಗೌಡ ಮಗ ಲಿಫ್ಟ್‌ನಲ್ಲಿ ಸಿಲುಕಿ ದಾರುಣ ಸಾವು..!



**ಹೈದರಾಬಾದ್:** ಕೆಜಿಎಫ್ ಚಾಪ್ಟರ್ 2 ಸಹ–ನಿರ್ದೇಶಕರಾದ ಕೀರ್ತನ್ ನಾಡಗೌಡ ಅವರ ನಾಲ್ಕು ವರ್ಷದ ಪುತ್ರ ಆಕಸ್ಮಿಕವಾಗಿ ಲಿಫ್ಟ್‌ನಲ್ಲಿ ಸಿಲುಕಿ ಸಾವನ್ನಪ್ಪಿರುವ ದಾರುಣ ಘಟನೆ ಸೋಮವಾರ ನಡೆದಿದೆ.

ಕೀರ್ತನ್ ನಾಡಗೌಡ ಮತ್ತು ಅವರ ಪತ್ನಿ ಸಮೃದ್ಧಿ ಪಟೇಲ್ ಅವರ ಪುತ್ರ ನಾಲ್ಕೂವರೆ ವರ್ಷದ ಚಿರಂಜೀವಿ ಸೋನಾರ್ಷ್ ಕೆ. ನಾಡಗೌಡ ಲಿಫ್ಟ್‌ನಲ್ಲಿ ಸಿಲುಕಿ ಸಾವನ್ನಪ್ಪಿದ್ದಾರೆ.

ಪುತ್ರನನ್ನು ಕಳೆದುಕೊಂಡ ನಿರ್ದೇಶಕರ ಕುಟುಂಬ ತೀವ್ರ ದುಃಖದಲ್ಲಿದೆ. ಈ ವಿಷಯ ತಿಳಿದ ನಂತರ, ಅನೇಕ ಚಲನಚಿತ್ರ ಮತ್ತು ರಾಜಕೀಯ ವ್ಯಕ್ತಿಗಳು ಕೀರ್ತನ್ ನಾಡಗೌಡ ಕುಟುಂಬಕ್ಕೆ ಸಂತಾಪ ಸೂಚಿಸುತ್ತಿದ್ದಾರೆ. ಆಂಧ್ರಪ್ರದೇಶ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಕೂಡ ಟ್ವೀಟ್ ಮಾಡಿ ಸಂತಾಪ ಸೂಚಿಸಿದ್ದಾರೆ. ಕೀರ್ತನ್ ನಾಡಗೌಡ ಕನ್ನಡ ಚಿತ್ರರಂಗದಲ್ಲಿ ಹಲವು ಚಿತ್ರಗಳಿಗೆ ನಿರ್ದೇಶನ ವಿಭಾಗದಲ್ಲಿ ಕೆಲಸ ಮಾಡಿದ್ದಾರೆ. ಪ್ಯಾನ್ ಇಂಡಿಯಾ ದಾಖಲೆ ಬರೆದ ಕೆಜಿಎಫ್ ಚಿತ್ರಕ್ಕೆ ಎರಡನೇ ಸಹ–ನಿರ್ದೇಶಕರಾಗಿಯೂ ಕೆಲಸ ಮಾಡಿದ್ದಾರೆ.

# ಕುರ್ಚಿ ಕದನ: ಅಧಿವೇಶನ ಬಳಿಕ 'ಕೈ' ಕಮಾಂಡ್ ಚರ್ಚೆ ಸಾಧ್ಯತೆ..!

**ಬೆಂಗಳೂರು:** ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಕಾವು ಇನ್ನೂ ಆರಿಲ್ಲ. ದೆಹಲಿಯಲ್ಲಿ ಇತ್ತೀಚೆಗೆ ನಡೆದ ಮತಗಳ್ಳತನ ರ್ಯಾಲಿಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಉತ್ತಮ ರೀತಿಯಲ್ಲಿ ಭಾಗವಹಿಸಿದ್ದು, ಹೈಕಮಾಂಡ್ ಆಯೋಜಿಸಿದ್ದ ಭೋಜನಕೂಟದಲ್ಲಿ ಭಾಗಿಯಾಗಿದ್ದರು. ಇದರ ಬೆನ್ನಲ್ಲೇ ಅಧಿವೇಶನ ಪೂರ್ಣಗೊಂಡ ಬಳಿಕ ನಾಯಕತ್ವ ಬದಲಾವಣೆ ವಿಚಾರ ಮತ್ತೆ ಮುನ್ನೆಲೆಗೆ ಬರುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ.



ಮುಖ್ಯಮಂತ್ರಿ ಸಿದ್ದರಾಮಯ್ಯ– ಡಿಕೆ.ಶಿವಕುಮಾರ್ ನಡುವೆ ಹೈಕಮಾಂಡ್ ಸಮ್ಮುಖದಲ್ಲಿ ಮಾತುಕತೆ ನಡೆಯಲಿದ್ದು, ಡಿಸೆಂಬರ್ 20 ಅಥವಾ 21 ರಂದು ಮಾತುಕತೆಗೆ ದಿನಾಂಕ ನಿಗದಿಯಾಗುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ನಾಯಕತ್ವ ಬದಲಾವಣೆ ವಿಚಾರ ಈಗಾಗಲೇ ರಾಜ್ಯದಲ್ಲಿ ಗೊಂದಲಗಳನ್ನು ಮೂಡಿಸಿದ್ದು, ಈ ಹಿನ್ನೆಲೆಯಲ್ಲಿ ಪರಿಸ್ಥಿತಿಯಿನ್ನು ಚಾಣಕ್ಯತನದಿಂದ ಎದುರಿಸಲು, ತಂತ್ರಗಳನ್ನು ಹೈಕಮಾಂಡ್ ಅಳವಡಿಸಿಕೊಳ್ಳುತ್ತಿದೆ. ಈ ಮೂಲಕ ಅಧಿಕಾರ ವರ್ಗಾವಣೆಯನ್ನು ಸುಗಮ ರೀತಿಯಲ್ಲಿ ನಡೆಸಲು ಮುಂದಾಗಿದೆ.

ನಾಯಕತ್ವ ವಿಚಾರವಾಗಿ ಸಿದ್ದರಾಮಯ್ಯ ಹಾಗೂ ಡಿಕೆ.ಶಿವಕುಮಾರ್ ಅವರು ಪ್ರಯತ್ನ ನಡೆಸಿದ್ದರು. ಆದರೆ, ಪ್ರಯತ್ನ ವಿಫಲವಾಗಿತ್ತು. ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆ.ಸಿ. ವೇಣುಗೋಪಾಲ್ ಅವರು ಸೋನಿಯಾ ಅವರ ಬಳಿ ಭೇಟಿಗೆ ಅವಕಾಶ ಕೋರಿದ್ದರು. ಆದರೆ, ಸೋನಿಯಾ ಗಾಂಧಿಯವರು ನಿರಾಕರಿಸಿದ್ದರು.

2023ರಲ್ಲಿ ಕರ್ನಾಟಕದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗ ಅಧಿಕಾರ ಹಂಚಿಕೆ ಒಪ್ಪಂಕ್ಕೆ ಹೈಕಮಾಂಡ್ ಸಾಕ್ಷಿಯಾಗಿದೆಯೇ ವಿನಃ ಪಕ್ಷವಲ್ಲ. ಹೀಗಾಗಿ ಯಾವುದೇ ನಿರ್ಧಾರವನ್ನು ನಮ್ಮ ಸಮ್ಮುಖದಲ್ಲೇ ತೆಗೆದುಕೊಳ್ಳಲು ಅವಕಾಶ ನೀಡಲಾಗುತ್ತದೆ. ಈ ನಿಟ್ಟಿನಲ್ಲಿ ಇಬ್ಬರೂ ನಾಯಕರು ಮಾತುಕತೆ ನಡೆಸಲಿ ಎಂದು ಸೋನಿಯಾ ಸಲಹೆ ನೀಡಿದ್ದು, ಈ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಹಾಗೂ ಡಿಕೆ.ಶಿವಕುಮಾರ್ ಅವರು ಉಪಾಹಾರ ಸಭೆ ನಡೆಸಿದ್ದರು ಎಂದು ತಿಳಿದುಬಂದಿದೆ.

ಈ ನಡುವೆ ದೆಹಲಿಯಲ್ಲಿ ನಡೆದ ವೋಟ್ ಚೋರಿ ರ್ಯಾಲಿ ವೇಳೆ ಹೈಕಮಾಂಡ್ ಭೋಜನಕೂಟವನ್ನು ಆಯೋಜಿಸಿದ್ದು, ಈ ಭೋಜನಕೂಟದಲ್ಲಿ ಡಿಕೆ.ಶಿವಕುಮಾರ್ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಸಂಸದೆ ಪ್ರಿಯಾಂಕಾ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಇತರರು ಹಾಜರಿದ್ದರು, ಈ ಸಭೆಯಲ್ಲಿ ಸಿದ್ದರಾಮಯ್ಯ ಅವರ ಅನುಪಸ್ಥಿತಿ ಎಲ್ಲರ ಹುಬ್ಬೇರುವಂತೆ ಮಾಡಿತ್ತು.

# ಡಾ. ಶಾಮನೂರು ಶಿವಶಂಕರಪ್ಪನವರಿಗೆ ಭಾವಪೂರ್ಣ ಶ್ರದ್ಧಾಂಜಲಿ



**ದಾವಣಗೆರೆ** : ಕೆ.ಟಿ.ಜೆ. ನಗರದ 2ನೇ ಮುಖ್ಯರಸ್ತೆ, 15ನೇ ಕ್ರಾಸ್‌ನಲ್ಲಿ ಡಾ. ಶಾಮನೂರು ಶಿವಶಂಕರಪ್ಪನವರಿಗೆ ಭಾವಪೂರ್ಣ ಶ್ರದ್ಧಾಂಜಲಿ

ಹಿರಿಯ ದಾವಣಗೆರೆ ದಕ್ಷಿಣ ವಿಧಾನಸಭಾ ನೆಚ್ಚಿನ ಶಾಸಕರು, ಅಖಿಲ ಭಾರತ ವೀರಶೈವ ಮಹಾಸಭೆಯ ಅಧ್ಯಕ್ಷರು, ಬಾಪೂಜಿ ವಿದ್ಯಾಸಂಸ್ಥೆಯ ಗೌರವ ಕಾರ್ಯದರ್ಶಿಗಳು, ಕೊಡುಗೈ ದಾನಿಗಳು ಆದ ಸನ್ಮಾನ್ಯ ಡಾ. ಶಾಮನೂರು ಶಿವಶಂಕರಪ್ಪನವರು ನಿಧನರಾಗಿರುವುದು ಸಮಾಜಕ್ಕೆ ತುಂಬಲಾರದ ನಷ್ಟವಾಗಿರುತ್ತದೆ. ಭಗವಂತನು ಮೃತರ ಆತ್ಮಕ್ಕೆ ಚಿರಶಾಂತಿ ಕರುಣಿಸಲೆಂದು ಮತ್ತು ಕುಟುಂಬ ವರ್ಗದವರಿಗೆ ಭಗವಂತನು ದುಃಖ ಭರಿಸುವ ಶಕ್ತಿಯನ್ನು ದಯಪಾಲಿಸಲಿ ಎಂದು ಪ್ರಾರ್ಥಿಸುತ್ತ ಕೆ.ಟಿ.ಜೆ. ನಗರದ 2ನೇ ಮೇನ್, 15ನೇ ಕ್ರಾಸ್‌ನಲ್ಲಿ ಭಾವಪೂರ್ಣ ಶ್ರದ್ಧಾಂಜಲಿ ಕಾರ್ಯಕ್ರಮವನ್ನು ದಿನಾಂಕ: 15–12–2025 ರಂದು ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಮುಖಂಡರಾದ ಕೆ.ಹೆಚ್. ಚೈತನ್ಯಕುಮಾರ್, ಸೋಮಲಾಪುರ ಹನುಮಂತಪ್ಪ, ನಾಗೇಂದ್ರ ಬಂಡೀಕರ್, ಡಿ.ಎನ್. ಜಗದೀಶ್, ನಾಗರಾಜ್ ಎಂ.ಜೆ., ಮಾನು ಎಸ್., ಕೇರಂ ಗಣೇಶ್, ನಾಗರಾಜ್ ಹೆಚ್., ಕಲ್ಪತರು ಶ್ರೀನಿವಾಸ್, ಗೋಣೆಪ್ಪ ಹೆಚ್., ಆದಾಪುರ ನಾಗರಾಜ್, ಬಿ.ಕೆ. ವೆಂಕಟೇಶ್, ವೆಂಕಟೇಶ್ ಹೆಚ್., ಸಾಲೇಶ್ವರ ಎಸ್.ಎನ್., ರಾಜು ರೇಡಿಯಂ, ಕಾರ್ತಿಕ್, ಗುರುಮೂರ್ತಿ, ವಿಜಯಕುಮಾರ್, ಶಿವಮೂರ್ತಿ ಎಸ್., ಕೇರಂ ಬಸವರಾಜ್, ಮಹಾದೇವಮ್ಮ ಬಸವಕೇಂದ್ರ, ಮೈಲಾರಪ್ಪ, ಅಂಜಿನಪ್ಪ, ಜಗನ್ನಾಥ್ ಪಿಳ್ಳೆ, ಶ್ರೀಧರ್, ಪ್ರಕಾಶ್, ಸುಲೇಮಾನ್, ರಿಯಾಜ್, ಅಕ್ರಮ್ ಬಾಷಾ, ದುಗ್ಗಪ್ಪ, ಪ್ರದೀಪ್ ಗೌಡ್ರು, ಶರತ್, ಚಂದ್ರು ಮತ್ತಿತರರು ಭಾಗವಹಿಸಿದ್ದರು.

# ಚಳಿಗಾಲದ ಅಧಿವೇಶನ ಒಂದು ವಾರ ವಿಸ್ತರಿಸಲು ಸ್ಪೀಕರ್‌ಗೆ ವಿಪಕ್ಷ ನಾಯಕ ಆರ್ ಅಶೋಕ್ ಪತ್ರ

**ಬೆಳಗಾವಿ:** ರಾಜ್ಯ ವಿಧಾನಸಭೆಯ ಚಳಿಗಾಲದ ಅಧಿವೇಶನವನ್ನು ಇನ್ನೂ ಒಂದು ವಾರ ವಿಸ್ತರಿಸುವಂತೆ ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಸೋಮವಾರ ಸ್ಪೀಕರ್ ಯು.ಟಿ. ಖಾದರ್ ಅವರನ್ನು ಕೋರಿದ್ದಾರೆ.

ಸ್ಪೀಕರ್ ಅವರಿಗೆ ಬರೆದ ಪತ್ರದಲ್ಲಿ, ರಾಜ್ಯಕ್ಕೆ ಸಂಬಂಧಿಸಿದ ಹಲವಾರು ಸಮಸ್ಯೆಗಳನ್ನು ಚರ್ಚಿಸಿ ಅವುಗಳಿಗೆ ಪರಿಹಾರಗಳನ್ನು ಕಂಡುಕೊಳ್ಳುವ ಅವಶ್ಯಕತೆಯಿದೆ ಎಂದು ಹೇಳಿದ್ದಾರೆ.

ಡಿಸೆಂಬರ್ 8 ರಂದು ಬೆಳಗಾವಿಯಲ್ಲಿ ಪ್ರಾರಂಭವಾದ ಅಧಿವೇಶನ ಈ ತಿಂಗಳ 19 ರವರೆಗೆ ನಡೆಯಲಿದೆ. "ಡಿಸೆಂಬರ್ 8 ರಿಂದ 19 ರವರೆಗೆ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನವನ್ನು ನಡೆಸಲು ನಿರ್ಧರಿಸಲಾಗಿತ್ತು ಆದರೆ ಕೆಲವು ಕಾರಣಗಳಿಂದಾಗಿ, ಅಧಿವೇಶನವನ್ನು 2 ದಿನಗಳವರೆಗೆ ಕಡಿಮೆ ಮಾಡಲಾಗಿದೆ" ಎಂದು ಅಶೋಕ್ ಹೇಳಿದರು.

ಹಾಲಿ ಶಾಸಕರಾದ ಎಚ್.ವೈ. ಮೇಟಿ ಮತ್ತು ಶಾಮನೂರು ಶಿವಶಂಕರಪ್ಪ ಅವರ ನಿಧನಕ್ಕೆ ಸಂತಾಪ ಸೂಚಿಸಿದ ನಂತರ ಡಿಸೆಂಬರ್ 8 ಮತ್ತು 15 ರಂದು ಸದನವನ್ನು ಮುಂದೂಡಲಾಗಿದೆ.

ರಾಜ್ಯಕ್ಕೆ ಸಂಬಂಧಿಸಿದಂತೆ ಅನೇಕ ಜ್ವಲಂತ ಸಮಸ್ಯೆಗಳಿವೆ, ಅಧಿವೇಶನದಲ್ಲಿ ಚರ್ಚೆ ಬಾಕಿ ಇದೆ. ಈ ಎಲ್ಲಾ ಸಮಸ್ಯೆಗಳಿಗೆ ಪರಿಹಾರಗಳನ್ನು ಕಂಡುಹಿಡಿಯಲು, ಪ್ರಸ್ತುತ ಅಧಿವೇಶನವನ್ನು ಇನ್ನೊಂದು ವಾರ ವಿಸ್ತರಿಸಲು ನಾನು ನಿಮ್ಮನ್ನು ವಿನಂತಿಸುತ್ತೇನೆ" ಎಂದು ಅಶೋಕ್ ಹೇಳಿದ್ದಾರೆ.ಕಳೆದ ಒಂದು ವಾರದಿಂದ ಸದನ ನಿಯಮಿತ ಪ್ರಶ್ನೋತ್ತರ ಅವಧಿಗಳ ಜೊತೆಗೆ, ಉತ್ತರ ಕರ್ನಾಟಕ ಮತ್ತು ಅದರ ಅಭಿವೃದ್ಧಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಚರ್ಚಿಸುತ್ತಿದೆ. ಮಂಡಿಸಲಾದ ಹಲವಾರು ಪ್ರಮುಖ ಮಸೂದೆಗಳನ್ನು ಇನ್ನೂ ಪರಿಗಣನೆಗೆ ಮತ್ತು ಅಂಗೀಕಾರಕ್ಕೆ ತೆಗೆದುಕೊಳ್ಳಲಾಗಿಲ್ಲ.ಮಹಾರಾಷ್ಟ್ರದ ಗಡಿಯಲ್ಲಿರುವ ಬೆಳಗಾವಿ, 2006 ರಿಂದ ವರ್ಷಕ್ಕೊಮ್ಮೆ ಶಾಸಕಾಂಗ ಅಧಿವೇಶನಗಳನ್ನು ಆಯೋಜಿಸುತ್ತಿದೆ.

# ಅಖಿಲ ಭಾರತೀಯ ಪೊಲೀಸ್ ಜೂಡೋ ಕ್ಲಸ್ಟರ್–2025 ಕ್ರೀಡೆಯಲ್ಲಿ ಬೆಳ್ಳಿ ಪದಕವನ್ನು ಪಡೆದಿರುವ ಶ್ರೀ. ಗಿರೀಶ್ ಟಿ




**ಚಿಕ್ಕಮಗಳೂರು :** ಅಕ್ಟೋಬರ್–2025 ರಲ್ಲಿ ಜಮ್ಮು ಕಾಶ್ಮೀರದ ಶ್ರೀನಗರದಲ್ಲಿ ನಡೆದ 10 ನೇ ಅಖಿಲ ಭಾರತೀಯ ಪೊಲೀಸ್ ಜೂಡೋ ಕ್ಲಸ್ಟರ್–2025 ರಲ್ಲಿ Pencak Silat ಕ್ರೀಡೆಯಲ್ಲಿ ಬೆಳ್ಳಿ ಪದಕವನ್ನು ಪಡೆದಿರುವ ಶ್ರೀ. ಗಿರೀಶ್ ಟಿ ಎಸ್, ಹೆಡ್ ಕಾನ್ಸ್ ಟೇಬಲ್, ಚಿಕ್ಕಮಗಳೂರು ಜಿಲ್ಲೆ ರವರನ್ನು ಜಿಲ್ಲಾ ಪೊಲೀಸ್ ಕಛೇರಿಯಲ್ಲಿ ಇಂದು ಡಾ. ವಿಕ್ರಮ ಅಮಟೆ, ಐಪಿಎಸ್, ಪೊಲೀಸ್ ಅಧೀಕ್ಷಕರು ಅಭಿನಂದಿಸಿದರು.

## ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ, ಯುಟ್ಯೂಬ್ ಸ್ಟಾರ್ ಮ್ಯೂಸಿಕ್ ಮೈಲಾರಿ ಮೇಲೆ ಕೇಸ್



**ಬಾಗಲಕೋಟೆ:** ಬೆಳಗಾವಿ ಮೂಲದ ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಆರೋಪದಲ್ಲಿ ಯೂಟ್ಯೂಬ್‌ನಲ್ಲಿ ಟ್ರೆಂಡಿಂಗ್ ಸ್ಟಾರ್ ಎಂದು ಗುರುತಿಸಿಕೊಂಡಿರುವ ಜಾನಪದ ಗಾಯಕ ಮ್ಯೂಸಿಕ್ ಮೈಲಾರಿ ಸೇರಿ ಏಳು ಜನರ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿದೆ. ಘಟನೆ 2025ರ ಅಕ್ಟೋಬರ್ 24ರಂದು ಬಾಗಲಕೋಟೆ ಜಿಲ್ಲೆಯ ಮಹಾಲಿಂಗಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿರುವುದಾಗಿ ಆರೋಪಿಸಲಾಗಿದೆ. ಬೆಳಗಾವಿ ಜಿಲ್ಲೆಯ ಗ್ರಾಮವೊಂದರಲ್ಲಿ ಹನುಮಂತ ದೇವರ ಓಕುಳಿ ಪ್ರಯುಕ್ತ ಆಯೋಜಿಸಿದ್ದ ಆರ್ಕೆಸ್ಟ್ರಾ ಕಾರ್ಯಕ್ರಮದಲ್ಲಿ ಹಾಡಲು ಮ್ಯೂಸಿಕ್ ಮೈಲಾರಿ ಆಗಮಿಸಿದ್ದ. ಇದೇ ಆರ್ಕೆಸ್ಟ್ರಾದಲ್ಲಿ ಅಪ್ರಾಪ್ತ ಬಾಲಕಿ ಡ್ಯಾನ್ಸ್ ಮಾಡಲು ಬಂದಿದ್ದಳು ಎನ್ನಲಾಗಿದೆ. ಕಾರ್ಯಕ್ರಮದ ವೇಳೆ ಲಾಡ್ಜ್‌ಗೆ ಕರೆದುಕೊಂಡು ಹೋಗಿ ಲೈಂಗಿಕ ದೌರ್ಜನ್ಯ ಎಸಗಲಾಗಿದೆ ಎಂದು ಬಾಲಕಿ ಪೊಲೀಸರಿಗೆ ನೀಡಿದ ದೂರಿನಲ್ಲಿ ಆರೋಪಿಸಿದ್ದಾಳೆ. ಅಲ್ಲದೆ, ಅತ್ಯಾಚಾರ ಎಸಗಿ ವಿಡಿಯೋ ಮಾಡಿಕೊಂಡಿದ್ದಾರೆ ಎಂದು ಗಂಭೀರ ಆರೋಪ ಮಾಡಿದ್ದಾಳೆ. ಸದ್ಯ ಮ್ಯೂಸಿಕ್ ಮೈಲಾರಿ ಸೇರಿದಂತೆ ಏಳು ಜನರು ಅಪರಾಧ ಎಸಗಿದ್ದಾರೆ ಎಂದು ಬಾಲಕಿ ಆರೋಪಿಸಿದ್ದಾಳೆ. ಡಿಸೆಂಬರ್ 14ರಂದು ಚಿಕ್ಕೋಡಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು, ನಂತರ ಪ್ರಕರಣವನ್ನು ಡಿಸೆಂಬರ್ 15ರಂದು ಮಹಾಲಿಂಗಪುರ ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗಿದೆ. ಬಾಗಲಕೋಟೆ ಜಿಲ್ಲೆಯ ಮಹಾಲಿಂಗಪುರ ಠಾಣೆಯಲ್ಲಿ ಮ್ಯೂಸಿಕ್ ಮೈಲಾರಿ ಸೇರಿ ಏಳು ಜನರ ವಿರುದ್ಧ ಪೋಕ್ಸೋ ಕಾಯ್ದೆಯಡಿ ಎಫ್‌ಐಆರ್ ದಾಖಲಾಗಿದೆ. ಮ್ಯೂಸಿಕ್ ಮೈಲಾರಿ ಹಾಡಿದ್ದ ಹಾಡು ಇತ್ತೀಚೆಗೆ ಸೋಷಿಯಲ್ ಮೀಡಿಯಾದಲ್ಲಿ ಭಾರೀ ವೈರಲ್ ಆಗಿತ್ತು. ಅದರಲ್ಲೂ, ವಿಶೇಷವಾಗಿ ಬಾಗಲಕೋಟೆ ಬಸ್ ಸ್ಟ್ಯಾಂಡ್ ನಾಗ ಹಾಡು ಹೆಚ್ಚು ಜನಪ್ರಿಯತೆ ಪಡೆದುಕೊಂಡಿತ್ತು.

## ಪ್ರಿಯತಮೆಯ ಖಾಸಗಿ ವಿಡಿಯೋ ಗಂಡನಿಗೆ ಕಳಿಸಿದ ಪಾಪಿ, ಪ್ರಿಯಕರನ ಮನೆ ಎದುರೇ ವಿವಾಹಿತೆ ಧರಣಿ



**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಒಂದು ವಿಚಿತ್ರ ಘಟನೆ ನಡೆದಿದೆ. ಮಹಿಳೆಯೊಬ್ಬಳು ಮದುವೆಯಾಗಿ 20 ದಿನ ಕಳೆಯುವುದರೊಳಗೆ ಆಕೆಯ ದಾಂಪತ್ಯಕ್ಕೆ ಆಕೆಯ ಮಾಜಿ ಪ್ರಿಯತಮನೇ ವಿಲನ್ ಆಗಿದ್ದಾನೆ. ಪ್ರಿಯತಮನ ಕೃತ್ಯದಿಂದ ಆಕೆಯನ್ನು ಗಂಡ ಮನೆಯಿಂದ ಹೊರಹಾಕಿದ್ದು, ಇದೀಗ ನೊಂದ ಯುವತಿ ಇದಕ್ಕೆಲ್ಲಾ ಪ್ರಿಯಕರನೇ ಕಾರಣ ಎಂದು ಆತನ ಮನೆಯ ಎದುರು ಧರಣಿ ನಡೆಸಿರುವ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲೂಕಿನ ಪಲಿಚೆರ್ಲು ಗ್ರಾಮದಲ್ಲಿ ನಡೆದಿದೆ.

ಅವರಿಬ್ಬರು 4 ವರ್ಷ ಪರಸ್ಪರ ಪ್ರೀತಿಸಿದರೂ ಮದುವೆಯಾಗಲು ಜಾತಿ ಅಡ್ಡ ಬಂದಿತ್ತು. ಕೊನೆಗೆ ಪ್ರಿಯತಮೆ ಮನೆಯವರು ತೋರಿಸಿದ ಯುವಕನನ್ನು ಮದುವೆಯಾಗಿ ಗಂಡನ ಜೊತೆ ಹೋಗಿದ್ದಳು. ಆದರೆ ಮದುವೆಯಾಗಿ 20 ದಿನ ಕಳೆಯುವುದರೊಳಗೆ ಆಕೆಯ ಪ್ರಿಯಕರ ವಿಲನ್ ಆಗಿದ್ದು, ತಾವಿಬ್ಬರು ಜೊತೆಯಾಗಿದ್ದಾಗ ಮಾಡಿಕೊಂಡಿದ್ದ ಖಾಸಗಿ ವಿಡಿಯೋಗಳನ್ನು ಆಕೆಯ ಗಂಡನಿಗೆ ಕಳುಹಿಸಿದ್ದಾನೆ. ಇದರಿಂದ ಕೆರಳಿ ಕೆಂಡವಾದ ಆಕೆಯ ಗಂಡ, ತಾನು ಕಟ್ಟಿದ್ದ ತಾಳಿ ಕಿತ್ತುಕೊಂಡು ಆಕೆಯನ್ನು ಮನೆಯಿಂದ ಹೊರಹಾಕಿದ್ದಾನೆ. ನೊಂದ ಯುವತಿ ಪ್ರಿಯಕರನ ಮನೆಯ ಮುಂದೆ ಬಂದು ಕುಳಿತು ಧರಣಿ ನಡೆಸಿದ್ದಾಳೆ.

ಪಲಿಚೆರ್ಲು ಗ್ರಾಮದ ಅಂಬರೀಶ್, ಬೇರೆ ಜಾತಿಯಾಗಿದ್ರೂ ಕೆಂಪನಹಳ್ಳಿ ಗ್ರಾಮದ ಯುವತಿಯನ್ನು 4 ವರ್ಷಗಳಿಂದ ಪರಸ್ಪರ ಪ್ರೀತಿಸುತ್ತಿದ್ದ. ಇಬ್ಬರು ಜೊತೆ ಜೊತೆಯಾಗಿ ಫೋಟೋ ವಿಡಿಯೋ ತೆಗೆಸಿಕೊಂಡಿದ್ದರಂತೆ. ಆದ್ರೆ ಈ ವಿಚಾರ ಯುವತಿ ಮನೆಯಲ್ಲಿ ಗೊತ್ತಾಗಿ ಯುವತಿಗೆ ಬೇರೆ ಯುವಕನ ಜೊತೆ ಮದುವೆ ನಿಶ್ಚಯ ಮಾಡಿದ್ದಾರೆ. ಈ ವೇಳೆ ಪ್ರಿಯಕರ ಸಹ ಬೇರೆ ಬೇರೆ ಜಾತಿ ಇದ್ದದ್ದರಿಂದ ಸಮಸ್ಯೆ ಬೇಡ, ನೀನು ಮನೆಯವರು ನೋಡಿದವನನ್ನು ಮದುವೆಯಾಗುವಂತೆ ಹೇಳಿದ್ದನಂತೆ. ಹೀಗಾಗಿ ಪ್ರೇಮಾ ಬೇರೆ ಯುವಕನನ್ನು ಮದುವೆ ಮಾಡಿಕೊಂಡಿದ್ದಳು.

ಅಷ್ಟರಲ್ಲೇ ಪ್ರಿಯಕರ ಅಂಬರೀಶ್ ಮತ್ತು ಇನ್ನೂ ಕೆಲವರು ಸೇರಿ ಆಕೆಯ ಹಳೆಯ ಫೋಟೋ ವಿಡಿಯೊಗಳನ್ನು ಗಂಡನಿಗೆ ಕಳುಹಿಸಿದ್ದಾರಂತೆ. ಇದರಿಂದ ರೊಚ್ಚಿಗೆದ್ದ ಗಂಡ ಆಕೆಯನ್ನು ಮನೆಯಿಂದ ಹೊರಹಾಕಿದ್ದಾನೆ. ಹೀಗಾಗಿ ನೊಂದ ಯುವತಿ ಪ್ರಿಯಕರ ಅಂಬರೀಶ್ ಮನೆ ಎದುರು ಧರಣಿ ನಡೆಸಿ ನ್ಯಾಯಕ್ಕಾಗಿ ಹೋರಾಟ ನಡೆಸಿದ್ದಾಳೆ. ಅಂಬರೀಶ್ ಮನೆ ಬಿಟ್ಟು ಪರಾರಿಯಾಗಿದ್ದಾನೆ.

## ಸಮ ಸಮಾಜದ ನಿರ್ಮಾಣಕ್ಕೆ ಯುವ ಜನತೆ ಪಣತೊಡಬೇಕು ಎಂದು ನಟ ಚೇತನ್ ಕರೆ

**ಶಿಡ್ಲಘಟ್ಟ:** ರಾಷ್ಟ್ರಕವಿ ಕುವೆಂಪು ಅವರ ಸರ್ವರಿಗೂ ಸಮಬಾಳು, ಸಮಪಾಲು ಪರಿಕಲ್ಪನೆಯ ಸಮಾನತೆ ಮತ್ತು ನ್ಯಾಯದೊಂದಿಗೆ ಸಮಸಮಾಜದ ನಿರ್ಮಾಣಕ್ಕೆ ಯುವ ಜನತೆ ಪಣತೊಡ ಬೇಕೆಂದು ನಟ ಸಾಮಾಜಿಕ ಹೋರಾಟಗಾರ ಚೇತನ್ ಹೇಳಿದರು. ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸಮಾನತೆಯ ಕರ್ನಾಟಕ ನಿರ್ಮಾಣ ಭವಿಷ್ಯದ ಕುರಿತು ಚರ್ಚಾ ಕಾರ್ಯಕ್ರಮದಲ್ಲಿ ವಿವಿಧ ಪ್ರಗತಿಪರ ಸಂಘಟನೆಗಳ ಪದಾಧಿಕಾರಿ ಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು ದೇಶದಲ್ಲಿ ಭೀಮರಾವ್ ಅಂಬೇಡ್ಕರ್ ಚಿಂತನೆಯ ಸಮಸಮಾಜದ ನಿರ್ಮಾಣ ಆಗಬೇಕೆನ್ನುವ ದಿಶೆಯಲ್ಲಿ ನಾನು ಕರ್ನಾಟಕ ರಾಜ್ಯಾದ್ಯಂತ ಪ್ರವಾಸ ಹಮ್ಮಿಕೊಂಡಿದ್ದು, ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದ್ದು ಇದರ ಭಾಗವಾಗಿ ಶಿಡ್ಲಘಟ್ಟಕ್ಕೆ ಬಂದಿದ್ದೇನೆ ಎಂದರು.ಪ್ರಸ್ತುತ ದೇಶದ ರಾಜಕೀಯ ಕಲುಷಿತಗೊಂಡಿದೆ. ಉತ್ತಮ ಸಮಾಜ ನಿರ್ಮಾಣಕ್ಕೆ ನಾವೆಲ್ಲಾ ಪಣ ತೊಡಬೇಕಿದೆ ಸಮಾನತೆ ವಿಚಾರದಲ್ಲಿ ಆಗಿರೋ ಅನ್ಯಾಯ ಸರಿಪಡಿಸಿ ಮುಂದಿನ ಪೀಳಿಗೆಗೆ ಆಗದಂತೆ ಎಚ್ಚರವಹಿಸಬೇಕಿದೆ ಎಂದರು.ಸಂವಿಧಾನದ ಆದರ್ಶಗಳನ್ನು ಎತ್ತಿಹಿಡಿಯಬೇಕಾದರೆ ಬ್ರಾಹ್ಮಣ್ಯ ವ್ಯವಸ್ಥೆ, ಬಂಡವಾಳ ಶಾಹಿ ವ್ಯವಸ್ಥೆ ಹಾಗೂ ಆರ್ಥಿಕ ಅಸಮಾನತೆಗಳಿಗೆ ಕಡಿವಾಣ ಹಾಕಿ, ಸಮಾಜದ ಎಲ್ಲಾ ವರ್ಗಗಳಿಗೆ ಅವಕಾಶಗಳು ಮುಕ್ತವಾಗಿ ದೊರೆಯುವಂತೆ ಮಾಡಬೇಕಾಗಿದೆ ಎಂದು ಹೇಳಿದರು. ಒಳ್ಳೆ ಕೆಲಸಗಳನ್ನು ಮಾಡಲು ನಾವು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇವೆ. ಉತ್ತಮ ಸಮಾಜ ವನ್ನು ಕಟ್ಟಲು ಹೋರಾಟವೇ ಮುಖ್ಯ. ಸಮ ಸಮಾಜ ನಿರ್ಮಾಣಕ್ಕೆ ಜನರ ಬೆಂಬಲ ಬೇಕು. ನಾವು ಬೆಳೆಯುವುದಲ್ಲದೆ ನಮ್ಮೊಡನೆ ಜನರು ಬದಲಾಗಬೇಕು ಸಮ ಸಮಾಜ ನಿರ್ಮಾಣ ವಾಗಬೇಕೆಂದು ತಿಳಿಸಿದರು.

### ಆಮದು ಸುಂಕ ಹೆಚ್ಚಿಸಿದ ಮೆಕ್ಸಿಕೊ

# ಆದ್ಯತೆ ವ್ಯಾಪಾರ ಒಪ್ಪಂದಕ್ಕೆ ಮುಂದಾದ ಭಾರತ



**ನವದೆಹಲಿ:** ಆಮದು ಸುಂಕಗಳನ್ನು ಹೆಚ್ಚಿಸಿರುವ ಮೆಕ್ಸಿಕೋದೊಂದಿಗೆ ವ್ಯಾಪಾರ ಒಪ್ಪಂದವನ್ನು ಮುಂದುವರಿಸಲು ನಿರ್ಧರಿಸಿರುವ ಭಾರತ ಆದ್ಯತೆಯ ವ್ಯಾಪಾರ ಒಪ್ಪಂದಕ್ಕೆ ಪ್ರಸ್ತಾವನೆ ಸಲ್ಲಿಸಿದೆ. ಇದರಿಂದ ಎರಡು ರಾಷ್ಟ್ರಗಳ ವ್ಯಾಪಾರ ಪಾಲುದಾರರು ತಮ್ಮ ನಡುವೆ ವ್ಯಾಪಾರ ಮಾಡುವ ಸೀಮಿತ ಸಂಖ್ಯೆಯ ಸರಕುಗಳ ಮೇಲಿನ ಆಮದು ಸುಂಕಗಳನ್ನು ಗಮನಾರ್ಹವಾಗಿ ಕಡಿಮೆ ಮಾಡಲಿದ್ದಾರೆ ಅಥವಾ ಸಂಪೂರ್ಣವಾಗಿ ತೆಗೆದುಹಾಕಲಿದ್ದಾರೆ. ಇದು ಎರಡು ರಾಷ್ಟ್ರಗಳಿಗೆ ಲಾಭದಾಯಕವಾಗಿರಲಿದೆ ಎಂದು ವಾಣಿಜ್ಯ ಕಾರ್ಯದರ್ಶಿ ರಾಜೇಶ್ ಅಗರ್ವಾಲ್ ತಿಳಿಸಿದ್ದಾರೆ.

ಭಾರತವು ಮೆಕ್ಸಿಕೋ ವಿಧಿಸಿರುವ ಹೆಚ್ಚಿನ ಆಮದು ಸುಂಕದಿಂದ ಹೆಚ್ಚಿನ ನಷ್ಟವಾಗದಿರಲು ಹೊಸ ಪ್ರಸ್ತಾಪವನ್ನು ಮುಂದಿಟ್ಟಿದೆ. ಈ ಕುರಿತು ಸೋಮವಾರ ಮಾಹಿತಿ ನೀಡಿರುವ ವಾಣಿಜ್ಯ ಕಾರ್ಯದರ್ಶಿ ರಾಜೇಶ್ ಅಗರ್ವಾಲ್, ದೇಶೀಯ ರಫ್ತುದಾರರಿಗೆ ಸಹಾಯ ಮಾಡಲು ಭಾರತವು ಮೆಕ್ಸಿಕೋದೊಂದಿಗೆ ಆದ್ಯತೆಯ ವ್ಯಾಪಾರ ಒಪ್ಪಂದವನ್ನು ಪ್ರಸ್ತಾಪಿಸಿದೆ ಎಂದು ಹೇಳಿದ್ದಾರೆ.

ನ್ಯಾಷನಲ್ ಹೆರಾಲ್ಡ್ ಪ್ರಕರಣ; ರಾಹುಲ್, ಸೋನಿಯಾ ಗಾಂಧಿಗೆ ಬಿಗ್ ರಿಲೀಫ್

ಮೆಕ್ಸಿಕೋದೊಂದಿಗೆ ಮುಕ್ತ ವ್ಯಾಪಾರ ಒಪ್ಪಂದ ಹೊಂದಿದ್ದ ಭಾರತ, ಚೀನಾ, ದಕ್ಷಿಣ ಕೊರಿಯಾ, ಥೈಲ್ಯಾಂಡ್ ಮತ್ತು ಇಂಡೋನೇಷ್ಯಾ ಸೇರಿದಂತೆ ಇನ್ನು ಹಲವು ರಾಷ್ಟ್ರಗಳಿಗೆ ವ್ಯಾಪಕ ಶ್ರೇಣಿಯ ಸರಕುಗಳ ಮೇಲೆ ಶೇ. 5 ರಿಂದ ಶೇ.50 ರಷ್ಟು ಹೆಚ್ಚಿನ ಆಮದು ಸುಂಕಗಳನ್ನು ವಿಧಿಸಲು ಮೆಕ್ಸಿಕೋ ನಿರ್ಧರಿಸಿದೆ. ಈ ಹಿನ್ನೆಲೆಯಲ್ಲಿ ಭಾರತವು ಇದೀಗ ಆದ್ಯತೆಯ ವ್ಯಾಪಾರ ಒಪ್ಪಂದವನ್ನು ಮೆಕ್ಸಿಕೋದೊಂದಿಗೆ ಪ್ರಸ್ತಾಪ ಮಾಡಿದೆ ಎಂದು ಹೇಳಿದರು.

ಸದ್ಯಕ್ಕೆ ಆದ್ಯತೆಯ ವ್ಯಾಪಾರ ಒಪ್ಪಂದಕ್ಕೆ ಮಾತುಕತೆ ನಡೆಸಲಾಗುತ್ತಿದೆ. ಇದು ಸದ್ಯ ಇರುವ ಸಮಸ್ಯೆಗಳ ಪರಿಹಾರಕ್ಕೆ ತ್ವರಿತ ಮಾರ್ಗವಾಗಿದೆ. ಮುಕ್ತ ವ್ಯಾಪಾರ ಒಪ್ಪಂದದ ಕುರಿತು ಮಾತುಕತೆಗೆ ಸಾಕಷ್ಟು ಸಮಯ ಬೇಕಾಗುತ್ತದೆ. ಇದರ ಕುರಿತು ಮುಂದಿನ ದಿನಗಳಲ್ಲಿ ಮಾತುಕತೆ ನಡೆಸಲಾಗುವುದು ಎಂದರು.

ಮುಕ್ತ ವ್ಯಾಪಾರ ಒಪ್ಪಂದದಲ್ಲಿ ಎರಡು ರಾಷ್ಟ್ರಗಳ ವ್ಯಾಪಾರ ಪಾಲುದಾರರು ವ್ಯಾಪಾರ ಮಾಡುವ ಗರಿಷ್ಠ ಸಂಖ್ಯೆಯ ಸರಕುಗಳ ಮೇಲಿನ ಆಮದು ಸುಂಕಗಳನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತಾರೆ ಅಥವಾ ತೆಗೆದುಹಾಕುತ್ತಾರೆ. ಆದ್ಯತೆಯ ವ್ಯಾಪಾರ ಒಪ್ಪಂದದಲ್ಲಿ ಸೀಮಿತ ಸಂಖ್ಯೆಯ ಉತ್ಪನ್ನಗಳ ಮೇಲಿನ ಸುಂಕಗಳನ್ನು ಕಡಿತಗೊಳಿಸಲಾಗುತ್ತದೆ ಅಥವಾ ತೆಗೆದುಹಾಕಲಾಗುತ್ತದೆ ಎಂದು ಅವರು ಹೇಳಿದರು.

ಮೆಕ್ಸಿಕೋ ವಿಧಿಸಿರುವ ಹೆಚ್ಚಿನ ಸುಂಕಗಳ ವಿರುದ್ಧವಾಗಿ ವಿಶ್ವ ವ್ಯಾಪಾರ ಸಂಸ್ಥೆಗೆ ದೂರು ನೀಡುವ ಹಾಗಿಲ್ಲ. ಯಾಕೆಂದರೆ ಅವರು ವಿಶ್ವ ವ್ಯಾಪಾರ ಸಂಸ್ಥೆಯ ನಿಯಮಗಳನ್ನು ಅನುಸರಿಸಿ ಸುಂಕ ಪರಿಷ್ಕರಣೆ ಮಾಡಿದ್ದಾರೆ. ಅವರು ಭಾರತದ ವಿರುದ್ಧ ಯಾವುದೇ ಕಠಿಣ ಕ್ರಮಕ್ಕೆ ಮುಂದಾಗಿಲ್ಲ. ಹೀಗಾಗಿ ನಾವು ಆದ್ಯತೆಯ ವ್ಯಾಪಾರ ಒಪ್ಪಂದವನ್ನು ಪ್ರಸ್ತಾಪ ಮಾಡಿದ್ದೇವೆ ಎಂದರು.

ಆದ್ಯತೆಯ ವ್ಯಾಪಾರ ಒಪ್ಪಂದವು ಸದ್ಯದ ಪರಿಸ್ಥಿತಿಯಲ್ಲಿ ಹೊಂದಾಣಿಯ ದಾರಿಯಾಗಿದೆ. ಭಾರತೀಯ ಪೂರೈಕೆ ಸರಪಳಿಗಳಿಗೆ ಅಗತ್ಯವಿರುವ ರಿಯಾಯಿತಿಗಳನ್ನು ಇದರಿಂದ ಪಡೆಯಲು ಪ್ರಯತ್ನಿಸಬಹುದು. ಅವರ ಸರಕುಗಳನ್ನು ಭಾರತಕ್ಕೆ ರಫ್ತು ಮಾಡಿದರೆ ನಾವು ಅವರಿಗೂ ಕೆಲವು ರಿಯಾಯಿತಿಗಳನ್ನು ನೀಡಬಹುದು ಎಂದು ಅಗರ್‌ವಾಲ್ ತಿಳಿಸಿದರು.

## ಭಯೋತ್ಪಾದನೆ ನಿಗ್ರಹಕ್ಕೆ ಭಾರತದೊಂದಿಗೆ ಕೈಜೋಡಿಸಿದ ಜೋರ್ಡಾನ್



**ಅಮ್ಮನ್:** ಭಯೋತ್ಪಾದನೆ ನಿಗ್ರಹ ಸೇರಿದಂತೆ ಐದು ಪ್ರಮುಖ ಒಪ್ಪಂದಗಳಿಗೆ ಭಾರತ ಮತ್ತು ಜೋರ್ಡಾನ್ ಸಹಿ ಹಾಕಿವೆ. ಪ್ರಧಾನಿ ನರೇಂದ್ರ ಮೋದಿ ಮತ್ತು ದೊರೆ ಅಬ್ದುಲ್ಲಾ ವರನ್ನು ಸೋಮವಾರ ಅಮ್ಮನ್‌ನಲ್ಲಿ ಭೇಟಿಯಾಗಿ ಮಾತುಕತೆ ನಡೆಸಿದರು. ಈ ವೇಳೆ ಅವರಿಬ್ಬರು ಎರಡು ರಾಷ್ಟ್ರಗಳ ನಡುವಿನ ರಕ್ಷಣಾ, ವ್ಯಾಪಾರ, ಇಂಧನ ಮತ್ತು ಡಿಜಿಟಲ್ ವಲಯಗಳಲ್ಲಿ ಪರಸ್ಪರ ಸಹಕಾರಕ್ಕೆ ಒಪ್ಪಂದಕ್ಕೆ ಸಹಿ ಹಾಕಿ ಅಂತಿಮಗೊಳಿಸಿದರು. 37 ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ಭಾರತದ ಪ್ರಧಾನಿಯೊಬ್ಬರು ಜೋರ್ಡಾನ್ ಗೆ ಭೇಟಿ ನೀಡಿದ್ದಾರೆ.

ಅಮ್ಮನ್‌ನಲ್ಲಿ ಸೋಮವಾರ ಭೇಟಿಯಾದ ಪ್ರಧಾನಿ ನರೇಂದ್ರ ಮೋದಿ ಮತ್ತು ರಾಜ ಅಬ್ದುಲ್ಲಾ ಖಖ ಅವರು ಸುದೀರ್ಘ ಚರ್ಚೆ ನಡೆಸಿದ ಬಳಿಕ ಐದು ತಿಳುವಳಿಕೆ ಒಪ್ಪಂದಗಳಿಗೆ ಸಹಿ ಹಾಕಿದರು. ಈ ವೇಳೆ ಭಯೋತ್ಪಾದನೆ ನಿಗ್ರಹ, ಗಾಜಾ ಸೇರಿದಂತೆ ಪ್ರಾದೇಶಿಕ ಅಭಿವೃದ್ಧಿ ಮತ್ತು ದ್ವಿಪಕ್ಷೀಯ ಸಹಕಾರಕ್ಕೆ ಭಾರತ ಮತ್ತು ಜೋರ್ಡಾನ್ ಒಪ್ಪಿಕೊಂಡಿತು.

ತೈಲ ಹಗರಣ: ಶ್ರೀಲಂಕಾ ಮಾಜಿ ಕ್ರಿಕೆಟಿಗ ಅರ್ಜುನ ರಣತುಂಗ ಬಂಧನ

ವ್ಯಾಪಾರ, ಹೂಡಿಕೆ, ರಕ್ಷಣೆ, ಭದ್ರತೆ, ಭಯೋತ್ಪಾದನೆ ನಿಗ್ರಹ, ರಸಗೊಬ್ಬರ, ಕೃಷಿ, ನವೀಕರಿಸಬಹುದಾದ ಇಂಧನ ಮತ್ತು ಪ್ರವಾಸೋದ್ಯಮದಂತಹ ಕ್ಷೇತ್ರಗಳಲ್ಲಿ ಸಹಕಾರವನ್ನು ವಿಸ್ತರಿಸಲು ಎರಡು ರಾಷ್ಟ್ರಗಳ ನಡುವೆ ಮಾತುಕತೆ ನಡೆಯಿತು.

ಭಯೋತ್ಪಾದನೆ ಮತ್ತು ಉಗ್ರವಾದವನ್ನು ಎದುರಿಸುವಲ್ಲಿ ರಾಜ ಅಬ್ದುಲ್ಲಾ ಖಖ ಅವರ ಪಾತ್ರವನ್ನು ಶ್ಲಾಘಿಸಿದ ಪ್ರಧಾನಿ ಮೋದಿ,ಈ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಗಾಗಿ ಭಾರತ ಬೆಂಬಲವಾಗಿರುವುದಾಗಿ ಭರವಸೆ ನೀಡಿದರು.

ಜೋರ್ಡಾನ್, ಇಥಿಯೋಪಿಯಾ, ಒಮಾನ್ ಪ್ರವಾಸದಲ್ಲಿರುವ ಪ್ರಧಾನಿ ಮೋದಿ ತಮ್ಮ ಪ್ರವಾಸದ ಮೊದಲ ಹಂತದಲ್ಲಿ ಜೋರ್ಡಾನ್‌ಗೆ ಭೇಟಿ ನೀಡಿದರು. ಭಾರತೀಯ ಪ್ರಧಾನಿಯೊಬ್ಬರು 37 ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ಜೋರ್ಡಾನ್‌ಗೆ ಭೇಟಿ ನೀಡಿದರು. ಇದೇ ಸಂದರ್ಭದಲ್ಲಿ ಎರಡೂ ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ 75 ನೇ ವಾರ್ಷಿಕೋತ್ಸವವನ್ನು ಸಂಭ್ರಮಿಸಲಾಗುತ್ತಿದೆ. ಪ್ರಧಾನಿ ಮೋದಿ ಅವರನ್ನು ಜೋರ್ಡಾನ್ ಪ್ರಧಾನಿ ಜಾಫರ್ ಹಸನ್ ಅವರು ಅಮ್ಮನ್‌ನ ವಿಮಾನ ನಿಲ್ದಾಣದಲ್ಲಿ ಸ್ವಾಗತಿಸಿದರು.

ಬಳಿಕ ಮೋದಿ ಅವರು ಹುಸೇನಿಯಾ ಅರಮನೆಯಲ್ಲಿ ರಾಜ ಅಬ್ದುಲ್ಲಾ ಖಖ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಅನಂತರ ನಿಯೋಗ ಮಟ್ಟದ ಮಾತುಕತೆ ನಡೆಸಿ, ಎರಡು ದೇಶಗಳ ನಡುವಿನ ಸಂಬಂಧಗಳು, ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯ ವಿನಿಮಯ ಮಾಡಿಕೊಂಡರು.

## ಲೂಥ್ರಾ ಸಹೋದರರನ್ನು ವಶಕ್ಕೆ ಪಡೆಯಲು ಗೋವಾ ಪೊಲೀಸರು ಸಿದ್ಧ

**ನವದೆಹಲಿ:** 25 ಜನರ ಸಾವಿಗೆ ಕಾರಣವಾದ ಗೋವಾ ನೈಟ್‌ಕ್ಲಬ್ ಬೆಂಕಿಯ ಆರೋಪಿಗಳಾದ ಲೂಥ್ರಾ ಸಹೋದರರನ್ನು ಮಂಗಳವಾರ ಥೈಲ್ಯಾಂಡ್‌ನಿಂದ ಭಾರತಕ್ಕೆ ಕರೆತರಲಾಗುತ್ತಿದೆ.

ದುರಂತದ ನಂತರ ಸೌರಭ್ ಮತ್ತು ಗೌರವ್ ಫುಕೆಟ್‌ಗೆ ಪಲಾಯನ ಮಾಡಿದ್ದರು. ಆದರೆ ಥಾಯ್ ಅಧಿಕಾರಿಗಳು ಅವಧಿ ಮೀರಿದ ಅವಧಿಯಲ್ಲಿ ಅಲ್ಲಿಯೇ ಉಳಿದಿದ್ದಕ್ಕಾಗಿ ಅವರನ್ನು ಬಂಧಿಸಿದರು.

ಅವರ ಭಾರತೀಯ ಪಾಸ್‌ಪೋರ್ಟ್‌ಗಳನ್ನು ಅಮಾನತುಗೊಳಿಸಲಾಯಿತು, ಇದು ಅವರನ್ನು ಗಡೀಪಾರು ಮಾಡಲಾಗಿದೆ.

ಸಹೋದರರು ಇಂಡಿಗೋ ವಿಮಾನದಲ್ಲಿ ಮಧ್ಯಾಹ್ನ 1.45 ರ ಸುಮಾರಿಗೆ ಇಂದಿರಾ ಗಾಂಧಿ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ತಲುಪುವ ನಿರೀಕ್ಷೆಯಿದೆ. ಗೋವಾ ಪೊಲೀಸರ ತಂಡವು ದೆಹಲಿ ಪೊಲೀಸರೊಂದಿಗೆ ಆಗಮಿಸಿದ ನಂತರ ಔಪಚಾರಿಕವಾಗಿ ಅವರನ್ನು ವಶಕ್ಕೆ ಪಡೆಯಲಿದೆ. ವಿಚಾರಣೆಗಾಗಿ ಗೋವಾಕ್ಕೆ ಕರೆದೊಯ್ಯಲು ಟ್ರಾನ್ಸಿಟ್ ರಿಮಾಂಡ್‌ನಲ್ಲಿ ಇರಿಸಲಾಗುವುದು ಮತ್ತು ಡಿಸೆಂಬರ್ 17 ರಂದು ಮಾಪುಸಾ ಮ್ಯಾಜಿಸ್ಟ್ರೇಟ್ ನ್ಯಾಯಾಲಯದ ಮುಂದೆ ಹಾಜರುಪಡಿಸುವ ಸಾಧ್ಯತೆಯಿದೆ.

ಗೋವಾ ನೈಟ್‌ಕ್ಲಬ್‌ನಲ್ಲಿ ಬೆಂಕಿ ಅವಘಡ ಉತ್ತರ ಗೋವಾದ ಅರ್‌ಪೋರಾದಲ್ಲಿರುವ ನೈಟ್ ಕ್ಲಬ್‌ನಲ್ಲಿ ನಡೆದ ಭೀಕರ ಅಗ್ನಿ ದುರಂತದಲ್ಲಿ 25 ಜನರು ಸಾವನ್ನಪ್ಪಿದ್ದಾರೆ. ಮಧ್ಯರಾತ್ರಿ ಅಡುಗೆ ಮನೆಯಲ್ಲಿ ಗ್ಯಾಸ್ ಸಿಲಿಂಡರ್ ಸ್ಫೋಟಿಸಿದ ಪರಿಣಾಮ ನೈಟ್ ಕ್ಲಬ್ ಹೊತ್ತಿ ಉರಿದಿದೆ. ಈ ವೇಳೆ ಹಲವರು ಸಜೀವ ದಹನವಾಗಿದ್ದರೆ, ಉಳಿದವರಿಗೆ ಗಂಭೀರ ಗಾಯಗಳಾಗಿವೆ. ರಾಜಧಾನಿ ಪಣಜಿಯಿಂದ ಸುಮಾರು 25 ಕಿ.ಮೀ ದೂರದಲ್ಲಿರುವ ಅರ್ಪೋರಾ ಗ್ರಾಮದಲ್ಲಿರುವ ಬಿರ್ಚ್ ಬೈ ರೋಮಿಯೋ ಲೇನ್ ಕ್ಲಬ್?ನಲ್ಲಿ ಈ ದುರ್ಘಟನೆ ನಡೆದಿದೆ. ಘಟನೆಯಿಂದ ಕ್ಲಬ್ ಸಂಪೂರ್ಣ ಬೆಂಕಿ ಹೊತ್ತಿ ಉರಿದಿದೆ.

ನಂತರ, ಘಟನೆಯ ಬಗ್ಗೆ ಮ್ಯಾಜಿಸ್ಟೀರಿಯಲ್ ತನಿಖೆಗೆ ಸಿಎಂ ಆದೇಶಿಸಿದ್ದಾರೆ. ಈವರೆಗೆ ಪ್ರಕರಣ ಸಂಬಂಧ ಆರು ಜನರನ್ನು ಬಂಧಿಸಲಾಗಿದ್ದು, ಗೋವಾ ಸರ್ಕಾರದ ಆದೇಶದಂತೆ ಲೂಥ್ರಾ ಸಹೋದರರ ಒಡೆತನದಲ್ಲಿದ್ದ ಇನ್ನೊಂದು ನೈಟ್‌ಕ್ಲಬ್‌ನ್ನು ನೆಲಸಮಗೊಳಿಸಲಾಗಿದೆ. ಇನ್ನೂ ಈಗಾಗಲೇ ಈ ಸಂಬಂಧ ಮೂವರು ಹಿರಿಯ ಅಧಿಕಾರಿಗಳನ್ನು ಅಮಾನತುಗೊಳಿಸಿ, ಗೋವಾ ಸಿಎಂ ಆದೇಶ ಹೊರಡಿಸಿದ್ದಾರೆ.

"ನಾವು ಸಹ ಸಂತ್ರಸ್ತರು" ಗೋವಾ ನೈಟ್ ಕ್ಲಬ್ ಮಾಲೀಕರಿಂದ ಬಂಧನ ಪೂರ್ವ ಜಾಮೀನು ಅರ್ಜಿ ಪ್ರಕರಣವನ್ನು ನಿರ್ವಹಿಸಲು ಗೋವಾ ಸರ್ಕಾರ ಕಾನೂನು ಮತ್ತು ಪ್ರಾಸಿಕ್ಯೂಷನ್ ಇಲಾಖೆಗಳಿಂದ ವಿಶೇಷ ಕಾನೂನು ತಂಡವನ್ನು ರಚಿಸಿದೆ. ಪೊಲೀಸರು ಭಾರತೀಯ ನ್ಯಾಯ ಸಂಹಿತಾದ ಸೆಕ್ಷನ್ 105 ಅನ್ನು ಅನ್ವಯಿಸಿದ್ದಾರೆ.

### ಏರ್‌ಪೋರ್ಟ್ ಪಾರ್ಕಿಂಗ್ ರೂಲ್ಸ್ ವಿರುದ್ಧ ಸಿಡಿದೆದ್ದ ಕ್ಯಾಬ್ ಚಾಲಕರು;

# ಹಿಂಸಾಚಾರಕ್ಕೆ ತಿರುಗಿದ ಪ್ರತಿಭಟನೆ, ಪೊಲೀಸರಿಂದ ಲಾಠಿ ಚಾರ್ಜ್



**ಬೆಂಗಳೂರು:** ಬೆಂಗಳೂರು ಏರ್‌ಪೋರ್ಟ್‌ನ ಹೊಸ ಪಾರ್ಕಿಂಗ್ ನಿಯಮದ ವಿರುದ್ಧ ಟ್ಯಾಕ್ಸಿ ಚಾಲಕರು ಸಿಡಿದೆದ್ದಿದ್ದು, ಸಾದಹಳ್ಳಿ ಟೋಲ್ ಬಳಿ ನಡೆಸಿದ ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿದೆ.

ವಿಮಾನ ನಿಲ್ದಾಣದ ಬಳಿಯ ಸಾದಹಳ್ಳಿ ಗೇಟ್ ಟೋಲ್ ಪ್ಲಾಜಾ ಬಳಿ, ಒಕ್ಕೂಟದ ಸಂಸ್ಥಾಪಕ ಮತ್ತು ರಾಜ್ಯ ಅಧ್ಯಕ್ಷ ಜಿ. ನಾರಾಯಣಸ್ವಾಮಿ ನೇತೃತ್ವದಲ್ಲಿ ಪ್ರತಿಭಟನೆ ನಡೆದಿದ್ದು, ಪ್ರತಿಭಟನೆ ಹಿಂಸಾಚಾರಕ್ಕೆ ತಿರುಗಿದೆ.

ಪ್ರತಿಭಟನೆಗಿಳಿದಿರುವ ಕ್ಯಾಬ್ ಚಾಲಕರು ರಸ್ತೆ ತಡೆ ನಡೆಸಿದ್ದು, ಈ ವೇಳೆ ಕಲ್ಲು ತೂರಾಟವೂ ನಡೆದಿದೆ ಎಂದು ತಿಳಿದುಬಂದಿದೆ.

ಹೊಸ ದಂಡ ನೀತಿ ವಿರೋಧಿಸಿ ಕನ್ನಡ ಪರ ಸಂಘಟನೆ ಮತ್ತು ಏರ್ಪೋರ್ಟ್ ಟ್ಯಾಕ್ಸಿ ಚಾಲಕರು ಸಾದಹಳ್ಳಿ ಬಳಿ ಟೋಲ್ ತಡೆದು ಆಕ್ರೋಶ ಹೊರಹಾಕಿದ್ದು, ಪ್ರತಿಭಟನೆ ಜೋರಾಗುತ್ತಿದ್ದಂತೆ ನಾರಾಯಣಸ್ವಾಮಿ ಅವರನ್ನ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಈ ವೇಳೆ ಮಾತಾಡಿದ ಚಾಲಕರ ಸಂಘದ ನಾರಾಯಣಸ್ವಾಮಿ ಅವರು, ಡಿಸಿಪಿ ಮಧ್ಯಸ್ಥಿಕೆ ವಹಿಸಿದ್ದಾರೆ. 17 ವರ್ಷದಿಂದ ಸುದೀರ್ಘ ಸೇವೆ ಮಾಡುತ್ತಿದ್ದೇವೆ. ಸೈಡ್ ಪಿಕ್ ಅಪ್ ನಿಂದ ತೊಂದರೆ ಆಗುತ್ತಿದೆ. ನಾವು ಯಾವ ರೀತಿ ತೊಂದರೆ ಕೊಟ್ಟಿಲ್ಲ. ಇದೆಲ್ಲಾ ಬಿಐಎಎಲ್ ಅವರ ಕುತಂತ್ರ ಡಿಸಿಪಿ ಅವರು 2 ದಿನದ ಕಾಲಾವಕಾಶ ಕೇಳಿದ್ದಾರೆ. ನಾವು 4 ದಿನ ತಡೆಯುತ್ತೇವೆ. ಆಗಲೂ ಬಗ್ಗಲಿಲ್ಲ ಎಂದರೆ, ಉಪವಾಸ ಸತ್ಯಾಗ್ರಹ ಮಾಡುತ್ತೇವೆಂದು ಎಚ್ಚರಿಕೆ ನೀಡಿದ್ದಾರೆ.

ಈ ನಡುವೆ ಪರಿಸ್ಥಿತಿಯ ಸೂಕ್ಷ್ಮತೆ ಅರಿತ ಪೊಲೀಸರು ಪ್ರತಿಭಟನಾನಿರತ ಚಾಲಕರನ್ನು ಚದುರಿಸಲು ಯತ್ನಿಸಿದ್ದು, ಲಾಠಿ ಚಾರ್ಜ್ ನಡೆಸಿದ್ದಾರೆ. ಇದರ ಬೆನ್ನಲ್ಲೇ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ.

ಯಲ್ಲೋ ಬೋರ್ಡ್ ಗಳಿಗೆ ದಂಡ ಪ್ರಯೋಗಕ್ಕೆ ಮುಂದಾಗಿರುವ ವಿಮಾನ ನಿಲ್ದಾಣದ ಆಡಳಿತ ಮಂಡಳಿ, ನಿಲುಗಡೆ ಸ್ಥಳಗಳಲ್ಲಿ 8 ನಿಮಿಷದವರೆಗೆ ಕಾಯಬಹುದು. ಬಳಿಕ 8 ರಿಂದ 13 ನಿಮಿಷದ ವರೆಗೆ ವಾಹನ ನಿಲ್ಲಿಸಿದರೆ 150 ರೂ ದಂಡ ವಿಧಿಸುವುದು. 13 ರಿಂದ 18 ನಿಮಿಷದ ವರೆಗೆ ಕ್ಯಾಬ್ ನಿಲ್ಲಿಸಿದರೆ 300 ರೂ ದಂಡ ಹಾಕುವುದಾಗಿ ಹಾಗೂ ಇನ್ನೂ ನಿರ್ಲಕ್ಷ್ಯ ತೋರಿದವರ ವಾಹನ ಟೋಯಿಂಗ್ ಮಾಡುವುದಾಗಿ ನಿಯಮ ಜಾರಿಗೆ ತಂದಿದೆ.

ಈ ನಡುವೆ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ (ಬಿಐಎಎಲ್) ನಿರ್ವಹಿಸುವ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಹೇಳಿಕೆ ನೀಡಿದ್ದು, ಹೊಸ ನಿಯವು ಪ್ರಯಾಣಿಕರಿಗೆ ಸುರಕ್ಷಿತ, ಸುಗಮ ಮತ್ತು ಉತ್ತಮ ಅನುಭವವನ್ನು ನೀಡಲು ರೂಪಿಸಲಾಗಿದೆ.

"ಬಿಎಲ್‌ಆರ್ ವಿಮಾನ ನಿಲ್ದಾಣದಲ್ಲಿ, ಪ್ರಯಾಣಿಕರ ಸುರಕ್ಷತೆ ಮತ್ತು ಅನುಕೂಲತೆಯು ನಮ್ಮ ಪ್ರಮುಖ ಆದ್ಯತೆಗಳಾಗಿವೆ. ದೈನಂದಿನ ಪ್ರಯಾಣಿಕರು ಮತ್ತು ವಾಹನಗಳ ಸಂಖ್ಯೆ ಹೆಚ್ಚುತ್ತಲೇ ಇರುವುದರಿಂದ ಸಂಚಾರ ದಟ್ಟಣೆ, ಅಸುರಕ್ಷಿತ ನಿಲುಗಡೆಗಳು ಮತ್ತು ಗೊಂದಲಗಳನ್ನು ತಡೆಗಟ್ಟಲು ಆಗಮನದ ಪಿಕಪ್ ಪ್ರದೇಶಗಳಲ್ಲಿ ಹೆಚ್ಚಿನ ಶಿಸ್ತು ಮತ್ತು ನಿಯಮಗಳನ್ನು ತರುವುದು ಅಗತ್ಯವಾಗಿದೆ ಎಂದು ಹೇಳಿದೆ.

ಟರ್ಮಿನಲ್ 1 ಮತ್ತು ಟರ್ಮಿನಲ್ 2 ನಲ್ಲಿ ಗೊತ್ತುಪಡಿಸಿದ ಆಗಮನ ಪಿಕಪ್ ವಲಯಕ್ಕೆ ಎಲ್ಲಾ ಖಾಸಗಿ ಕಾರುಗಳಿಗೆ (ಬಿಳಿ ಬೋರ್ಡ್) ಪ್ರವೇಶ ಉಚಿತವಾಗಿರುತ್ತದೆ, ಆದಾಗ್ಯೂ, ನಿಗದಿತ ಸಮಯ ಮಿತಿಗಳನ್ನು ಮೀರಿ ವಲಯದೊಳಗೆ ದುರುಪಯೋಗಪಡಿಸಿಕೊಂಡರೆ ಅಥವಾ ಹೆಚ್ಚು ಸಮಯ ಉಳಿದರೆ ಶುಲ್ಕ ವಿಧಿಸಲಾಗುತ್ತದೆ. ವಿಮಾನ ನಿಲ್ದಾಣವು ಎಲ್ಲಾ ಬಳಕೆದಾರರಿಗೆ ಉಚಿತ ಬಳಕೆಯನ್ನು ಎಂಟು ನಿಮಿಷಗಳ ಕಾಲ (ಅಂತರರಾಷ್ಟ್ರೀಯ ಮಾನದಂಡಗಳಿಗಿಂತ ಹೆಚ್ಚಿನದು) ನೀಡುತ್ತದೆ, ಅದನ್ನು ಮೀರಿದ 8-13 ನಿಮಿಷಗಳವರೆಗೆ ರೂ. 150 ಶುಲ್ಕ ಮತ್ತು 13-18 ನಿಮಿಷಗಳವರೆಗೆ ರೂ. 300 ಶುಲ್ಕ ವಿಧಿಸಲಾಗುತ್ತದೆ. 18 ನಿಮಿಷಗಳಿಗಿಂತ ಹೆಚ್ಚು ಸಮಯ ಉಳಿದರೆ ಯಾವುದೇ ವಾಹನವನ್ನು ಹತ್ತಿರದ ಪೊಲೀಸ್ ಠಾಣೆಗೆ ಎಳೆದುಕೊಂಡು ಹೋಗಿ, ಅದಕ್ಕೆ ಅನ್ವಯವಾಗುವ ದಂಡ ಮತ್ತು ಟೋಯಿಂಗ್ ಶುಲ್ಕವನ್ನು ವಿಧಿಸಲಾಗುತ್ತದೆ ಎಂದು ತಿಳಿಸಿದೆ.

## ನ್ಯಾಷನಲ್ ಹೆರಾಲ್ಡ್ ಪ್ರಕರಣ; ರಾಹುಲ್, ಸೋನಿಯಾ ಗಾಂಧಿಗೆ ಬಿಗ್ ರಿಲೀಫ್



**ನವದೆಹಲಿ:** ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಸೋನಿಯಾ ಗಾಂಧಿ , ರಾಹುಲ್ ಗಾಂಧಿ ಮತ್ತು ಇತರ ಐವರ ವಿರುದ್ಧ ಜಾರಿ ನಿರ್ದೇಶನಾಲಯದ ಹಣ ವರ್ಗಾವಣೆ ಪ್ರಕರಣವನ್ನು ವಿಚಾರಣೆಗೆ ತೆಗೆದುಕೊಳ್ಳಲು ದೆಹಲಿ ನ್ಯಾಯಾಲಯ ಮಂಗಳವಾರ ನಿರಾಕರಿಸಿದೆ . ಆದಾಗ್ಯೂ, ಕೇಂದ್ರ ಸಂಸ್ಥೆಯು ಈ ವಿಷಯದಲ್ಲಿ ತನ್ನ ತನಿಖೆಯನ್ನು ಮುಂದುವರಿಸಬಹುದು ಎಂದು ನ್ಯಾಯಾಲಯ ಹೇಳಿದೆ. ಸಂಬಂಧಿಸಿದಂತೆ ದೆಹಲಿ ಪೊಲೀಸರು ದಾಖಲಿಸಿರುವ ಪ್ರಥಮ ಮಾಹಿತಿ ವರದಿಯ (ಎಫ್‌ಐಆರ್) ಪ್ರತಿಯನ್ನು ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ, ಸೋನಿಯಾ ಗಾಂಧಿ ಮತ್ತು ಇತರರಿಗೆ ನೀಡಲು ಅರ್ಹರಲ್ಲ ಎಂದು ದೆಹಲಿ ನ್ಯಾಯಾಲಯ ತೀರ್ಪು ನೀಡಿದೆ.

ವಿಶೇಷ ನ್ಯಾಯಾಧೀಶರಾದ ವಿಶಾಲ್ ಗೋಗ್ನೆ ಅವರು, ಜಾರಿ ನಿರ್ದೇಶನಾಲಯ ಸಲ್ಲಿಸಿದ ದೂರು, ತನಿಖಾ ವರದಿಯ ಆಧಾರದ ಮೇಲೆ ಇಲ್ಲದೆ, ಖಾಸಗಿ ದೂರಿನ ಮೇಲೆ ಆಧರಿತವಾಗಿರುವುದರಿಂದ ಅದು ಸ್ವೀಕಾರಾರ್ಹವಲ್ಲ ಎಂದು ಅಭಿಪ್ರಾಯಪಟ್ಟರು. ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ಸಲ್ಲಿಸಲಾದ ಈ ದೂರು ನ್ಯಾಯಾಲಯದಲ್ಲಿ ಮುಂದುವರಿಯಲು ಅರ್ಹತೆ ಹೊಂದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ಜಾರಿ ನಿರ್ದೇಶನಾಲಯ (ಇಡಿ) ಸಲ್ಲಿಸಿರುವ ದೂರು ವಿಚಾರಣೆಗೆ ಅರ್ಹವಲ್ಲ ಏಕೆಂದರೆ ಈ ಪ್ರಕರಣವು ಖಾಸಗಿ ದೂರನ್ನು ಆಧರಿಸಿದೆಯೇ ಹೊರತು ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ಅಲ್ಲ ಎಂದು ಹೇಳಿದೆ. ಗಾಂಧಿ ಕುಟುಂಬದವರಲ್ಲದೆ, ಸುಮನ್ ದುಬೆ, ಸ್ಯಾಮ್ ಪಿತ್ರೋಡಾ, ಯಂಗ್ ಇಂಡಿಯನ್, ಡೋಟೆಕ್ಸ್ ಮರ್ಚಂಡೈಸ್ ಮತ್ತು ಸುನಿಲ್ ಭಂಡಾರಿ ಅವರನ್ನೂ ಜಾರಿ ನಿರ್ದೇಶನಾಲಯ (ಇಡಿ) ಆರೋಪಿಗಳನ್ನಾಗಿ ಮಾಡಿತ್ತು.

**ಏನಿದು ನ್ಯಾಷನಲ್ ಹೆರಾಲ್ಡ್ ಪ್ರಕರಣ?**

1938 ರಲ್ಲಿ ಜವಾಹರಲಾಲ್ ನೆಹರು ಮತ್ತು ಇತರರು ಸ್ಥಾಪಿಸಿದ ನ್ಯಾಷನಲ್ ಹೆರಾಲ್ಡ್, ಎಜೆಎಲ್ ಒಡೆತನದ ಮತ್ತು ಪ್ರಕಟಿಸಿದ ಪತ್ರಿಕೆಯಾಗಿತ್ತು. ಕಾಂಗ್ರೆಸ್ ಪಕ್ಷದ ಮುಖವಾಣಿ ಎಂದು ಪರಿಗಣಿಸಲಾದ ಈ ಪತ್ರಿಕೆ 2008 ರಲ್ಲಿ 90.21 ಕೋಟಿ ರೂ. ಸಾಲದೊಂದಿಗೆ ಹಿನ್ನಡೆ ಅನುಭವಿಸಿತ್ತು. 2010ರಲ್ಲಿ, ಅಸೋಸಿಯೇಟೆಡ್ ಜರ್ನಲ್ಸ್ ಲಿಮಿಟೆಡ್ 1,057 ಷೇರುದಾರರನ್ನು ಹೊಂದಿತ್ತು. ಇದು ತೀವ್ರ ನಷ್ಟವನ್ನು ಅನುಭವಿಸಿತು. ಹೀಗಾಗಿ, ಅದರ ಹಿಡುವಳಿಗಳನ್ನು 2011ರಲ್ಲಿ ಯಂಗ್ ಇಂಡಿಯನ್ ಪ್ರೈವೇಟ್ ಲಿಮಿಟೆಡಗೆ ವರ್ಗಾಯಿಸಲಾಯಿತು. ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅದರ ನಿರ್ದೇಶಕರ ಮಂಡಳಿಯಲ್ಲಿದ್ದರು. ಅಸೋಸಿಯೇಟೆಡ್ ಜರ್ನಲ್ಸ್ ಲಿಮಿಟೆಡ್ ಅನ್ನು ಯಂಗ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಸ್ವಾಧೀನಪಡಿಸಿಕೊಂಡಾಗ ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿ ಅವರು ವಂಚನೆಯಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪಿಸಲಾಗಿದೆ.

ನವೆಂಬರ್ 2012 ರಲ್ಲಿ ಸ್ವಾಮಿ ಅವರು ಗಾಂಧಿ ಕುಟುಂಬ ಮತ್ತು ಇತರ ಹಿರಿಯ ಕಾಂಗ್ರೆಸ್ ನಾಯಕರು ಎಜೆಎಲ್ ಅನ್ನು ಮೋಸದಿಂದ ವಶಪಡಿಸಿಕೊಂಡಿದ್ದಾರೆ ಎಂದು ಆರೋಪಿಸಿ ಖಾಸಗಿ ದೂರು ದಾಖಲಿಸಿದರು. ಕೇಂದ್ರ ಸರ್ಕಾರವು ತನ್ನ ಪತ್ರಿಕಾ ಕಾರ್ಯಾಚರಣೆಯನ್ನು ನಡೆಸಲು ಮಾತ್ರ ನೀಡಿದ್ದ ಈ ಆಸ್ತಿಗಳನ್ನು ಎಜೆಎಲ್ ವಾಣಿಜ್ಯ ಉದ್ದೇಶಗಳಿಗಾಗಿ ಬಳಸುತ್ತಿದೆ ಎಂಬ ಆರೋಪಗಳೂ ಇವೆ.

## ಬಂಗಾಳದ SIR ಕರಡು ಪಟ್ಟಿ ಪ್ರಕಟ; 58 ಲಕ್ಷಕ್ಕೂ ಅಧಿಕ ಮತದಾರರ ಹೆಸರು ಡಿಲೀಟ್!



**ಕೊಲ್ಕತ್ತಾ:** ಪಶ್ಚಿಮ ಬಂಗಾಳದಲ್ಲಿ ಚುನಾವಣೆ ಸಮೀಪಿಸುತ್ತಿದ್ದಂತೆ ರಾಜಕೀಯ ಬಿರುಗಾಳಿ ಎಬ್ಬಿಸುವ ಸಾಧ್ಯತೆ ಹೆಚ್ಚಿದೆ. ನಕಲು ಮತ್ತು ದೋಷಗಳನ್ನು ತೆಗೆದುಹಾಕಲು ವಿಶೇಷ ತೀವ್ರ ಪರಿಷ್ಕರಣೆಯ ನಂತರ ರಾಜ್ಯದ ಕರಡು ಮತದಾರರ ಪಟ್ಟಿಯಿಂದ ಒಟ್ಟು 58 ಲಕ್ಷ ಹೆಸರುಗಳನ್ನು ಅಳಿಸಲಾಗಿದೆ ಎಂದು ತಿಳಿದು ಬಂದಿದೆ. ಈ 58 ಲಕ್ಷ ಹೆಸರುಗಳಲ್ಲಿ 24 ಲಕ್ಷ ಹೆಸರುಗಳನ್ನು ಮೃತರ 19 ಲಕ್ಷ ಹೆಸರುಗಳನ್ನು "ಸ್ಥಳಾಂತರಿಸಲಾಗಿದೆ", 12 ಲಕ್ಷ ಹೆಸರುಗಳನ್ನು "ಕಾಣೆಯಾಗಿದೆ" ಮತ್ತು 1.3 ಲಕ್ಷ ಹೆಸರುಗಳನ್ನು "ನಕಲಿ" ಎಂದು ಗುರುತಿಸಲಾಗಿದೆ.

ಕರಡು ಪಟ್ಟಿಯಿಂದ ತಪ್ಪಾಗಿ ಹೆಸರುಗಳನ್ನು ಹೊರಗಿಟ್ಟವರು ಈಗ ಆಕ್ಷೇಪಣೆಗಳನ್ನು ಎತ್ತಬಹುದು ಮತ್ತು ತಿದ್ದುಪಡಿಗಳನ್ನು ಕೋರಬಹುದು. ಈ ಆಕ್ಷೇಪಣೆಗಳನ್ನು ಪರಿಹರಿಸಿದ ನಂತರ, ಅಂತಿಮ ಪಟ್ಟಿಯನ್ನು ಮುಂದಿನ ವರ್ಷ ಫೆಬ್ರವರಿಯಲ್ಲಿ ಪ್ರಕಟಿಸಲಾಗುವುದು. ಅಂತಿಮ ಪಟ್ಟಿಯ ಪ್ರಕಟಣೆಯ ನಂತರ ಬಂಗಾಳದಲ್ಲಿ ವಿಧಾನಸಭಾ ಚುನಾವಣೆಯ ಘೋಷಣೆಯನ್ನು ನಿರೀಕ್ಷಿಸಲಾಗಿದೆ.

ಕರಡು ಪಟ್ಟಿಯ ಪ್ರಕಟಣೆಯು ಬಂಗಾಳದಲ್ಲಿ ಖಖಖ ಬಗ್ಗೆ ರಾಜಕೀಯ ಕೋಲಾಹಲವನ್ನು ತೀವ್ರಗೊಳಿಸುವ ಸಾಧ್ಯತೆಯಿದೆ. ಮುಖ್ಯಮಂತ್ರಿ ಮತ್ತು ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಈ ಪ್ರಕ್ರಿಯೆಯನ್ನು ವಿರೋಧಿಸಿದ್ದಾರೆ ಮತ್ತು ಕೇಂದ್ರ ಮತ್ತು ಚುನಾವಣಾ ಆಯೋಗವು ಖಖಖ ಅನ್ನು ಬಳಸಿಕೊಂಡು ಚುನಾವಣೆಗೆ ಮುಂಚಿತವಾಗಿ ಲಕ್ಷಾಂತರ ಅರ್ಹ ಮತದಾರರ ಹೆಸರುಗಳನ್ನು ಅಳಿಸುತ್ತಿದೆ ಎಂದು ಆರೋಪಿಸಿದ್ದಾರೆ.

ನವೆಂಬರ್ 4 ರಂದು ಚುನಾವಣಾ ಆಯೋಗವು ಜಾರಿಗೆ ತಂದ ಎಸ್‌ಐಆರ್ ಪ್ರಕ್ರಿಯೆಯು ಜನರ ಮನಸ್ಸಿನಲ್ಲಿ ವ್ಯಾಪಕ ಭಯ ಸೃಷ್ಟಿಸಿದೆ ಎಂದು ಬ್ಯಾನರ್ಜಿ ಆರೋಪಿಸಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**